ಸಂಪುಟ: 05 ಸಂಚಿಕೆ: 80 ಪುಟಗಳು: 08 ಮಂಗಳವಾರ 03 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ನಾವು ಬಯಸಿದಂತೆ ಬದುಕುವ ಸ್ವಾತಂತ್ರ್ಯ ಯಾವತ್ತೂ ಭಯಾನಕ ಹೋರಾಟದ ಫಲವೇ ಹೊರತು ಸುಲಭಕ್ಕೆ ಸಿಗುವುದಿಲ್ಲ.



# ಉದಯ ವಾಹಿನಿ

UV
ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

## ಹೇಮಾವತಿ ಲಿಂಕ್ ಕೆನಾಲ್‌ನಿಂದ ಬೆಂಗಳೂರು ದಕ್ಷಿಣ ಜಿಲ್ಲೆಗೆ ನೀರು ಎಂದು ಅಪಪ್ರಚಾರ

• ಉದಯವಾಹಿನಿ, ಬೆಂಗಳೂರು

ಹೇಮಾವತಿ ಲಿಂಕ್ ಕೆನಾಲ್ ವಿರುದ್ಧ ಹೋರಾಟಗಾರರ ಬ್ಲಾಕ್ ಮೇಲ್, ಡಿಮ್ಯಾಂಡ್ ಏನೆಂಬುದನ್ನು ಸಮಯ ಬಂದಾಗ ಬಹಿರಂಗಪಡಿಸುವೆ. ಬೆಂಗಳೂರು ದಕ್ಷಿಣ ಜಿಲ್ಲೆಗೆ ನೀರು ಕೊಂಡೊಯ್ಯಲಾಗುತ್ತಿದೆ ಎಂಬುದು ಸುಳ್ಳು. ಕಳೆದ ಹತ್ತು ವರ್ಷದಲ್ಲಿ ಕುಣಿಗಲ್ ಪಾಲಿನ ನೀರಿನಲ್ಲಿ ಶೇಕಡಾ 90 ರಷ್ಟು ಬಳಕಯಾಗದೆ ಅಲ್ಲಿನ ಜನರಿಗೆ ಅನ್ಯಾಯವಾಗಿದೆ ಎಂದು ಡಿಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಬೆಂಗಳೂರು ದಕ್ಷಿಣ ಜಿಲ್ಲೆಗೆ ಹೇಮಾವತಿ ನೀರಿನ ಅಗತ್ಯವಿಲ್ಲ ಎಂದು ಸ್ಪಷ್ಟನೆ ನೀಡಿದರು.

ಹೇಮಾವತಿ ಲಿಂಕ್ ಕೆನಾಲ್ ಯೋಜನೆ ವಿರೋಧಿಸುತ್ತಿರುವುದು ಕೇವಲ ರಾಜಕಾರಣಕ್ಕಾಗಿ. ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ಈ ಯೋಜನೆಗೆ ಅನುಮೋದನೆ ನೀಡಲಾಯಿತು. ಯಡಿಯೂರಪ್ಪ ಅವರು ಸಿಎಂ ಆದಾಗ ಆಗಿನ ಜಿಲ್ಲಾ ಮಂತ್ರಿ ಮಾಧುಸ್ವಾಮಿ ಸೇರಿ ಈ ಯೋಜನೆ ತಡೆ ಹಿಡಿದಿದ್ದರು. ಆರಂಭದಲ್ಲಿ ಈ ಯೋಜನೆ ವೆಚ್ಚ 600 ಕೋಟಿ ಇತ್ತು. ಈಗ ಅದು 900ಯಿಂದ 1000 ಕೋಟಿಗೆ ಏರಿಕೆಯಾಗಿದೆ ಎಂದು ತಿಳಿಸಿದರು.

ಈ ವಿಚಾರದಲ್ಲಿ ಬಿಜೆಪಿ ಶಾಸಕರಿಗೆ ಅಸೂಯೆ ಅಷ್ಟೇ. ಕಳೆದ 10-12 ವರ್ಷಗಳಿಂದ ಕುಣಿಗಲ್ ತಾಲ್ಲೂಕಿಗೆ ಅದರ ಪಾಲಿನ ನೀರು ತಲುಪಿಲ್ಲ. ಕುಣಿಗಲ್ ತಾಲ್ಲೂಕಿನ ಜನರಿಗೆ 92%ರಷ್ಟು ನೀರು ನಷ್ಟವಾಗಿದೆ. ಕಳೆದ 10 ವರ್ಷಗಳಲ್ಲಿ 10% ನೀರು ಕೂಡ ಹೋಗಿಲ್ಲ. ಹೀಗಾಗಿ ನಾವು ಈ ಯೋಜನೆ ಕೈಗೊಂಡಿದ್ದೇವೆ ಎಂದು ತಿಳಿಸಿದರು.

ಈ ಯೋಜನೆಯಿಂದ ಯಾರಿಗೂ ಅನ್ಯಾಯ ಆಗುವುದಿಲ್ಲ. ಈ ನೀರನ್ನು ಬೆಂಗಳೂರು ದಕ್ಷಿಣ (ರಾಮನಗರ) ಜಿಲ್ಲೆಗೆ ತೆಗೆದುಕೊಂಡು ಹೋಗಲಾಗುವುದು ಎಂದು ಹೇಳುತ್ತಿದ್ದಾರೆ. ರಾಮನಗರಕ್ಕೆ ಇದರ ಅಗತ್ಯವಿಲ್ಲ. ಈ ಜಿಲ್ಲೆಗಾಗಿ ಪ್ರತ್ಯೇಕ ನೀರಾವರಿ ಯೋಜನೆ ರೂಪಿಸಲಾಗಿದೆ. ಹೀಗಾಗಿ ರಾಮನಗರಕ್ಕೆ ಸಾಕಷ್ಟು ನೀರಿದೆ.

ತುಮಕೂರು ಜಿಲ್ಲೆಯ ಕೆಲವು ಭಾಗಗಳು ಕೃಷ್ಣಾ ವ್ಯಾಪ್ತಿಯಿಂದ ನೀರು ಪಡೆಯುತ್ತಿದೆ. ಕಾವೇರಿ, ಕೃಷ್ಣಾ ನದಿಗಳಿಂದ ತುಮಕೂರಿನ ಕೆಲವು ಭಾಗಗಳಿಗೆ ನೀರು ಪೂರೈಸಿಲ್ಲವೇ ನಾನು ಸಚಿವನಾದ ಬಳಿಕ ಕಾವೇರಿಯಲ್ಲಿರುವ ಬಾಕಿ 6 ಟಿಎಂಸಿ ನೀರನ್ನು ಬೆಂಗಳೂರಿನ ಬಳಕೆಗೆ ಆದೇಶ ಹೊರಡಿಸಿದ್ದೇನೆ ಎಂದು ಹೇಳಿದರು. ಹೇಮಾವತಿ ನೀರಿನಲ್ಲಿ ಕುಣಿಗಲ್ ತಾಲ್ಲೂಕಿಗೆ 3.3 ಟಿಎಂಸಿ ನೀರು ಪಾಲು ಸಿಕ್ಕಿದ್ದು, ನಾವಿಲ್ಲಿ ಅಂತರರಾಜ್ಯ ಸಂಘರ್ಷ ಮಾಡುತ್ತಿದ್ದೇವೆಯೇ ಇಲ್ಲವಲ್ಲ ಎಂದರು.



### ಕಾನೂನು ಕೈಗೆತ್ತಿಕೊಂಡರೆ ಕಾನೂನು ಕ್ರಮ

ಕಾನೂನನ್ನು ಕೈಗೆತ್ತಿಕೊಳ್ಳುವವರು ಯಾರೇ ಆದರೂ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು. ಕಾನೂನು ಕೈಗೆತ್ತಿಕೊಂಡು ಸರ್ಕಾರವನ್ನು ಬೆದರಿಸಲು ಸಾಧ್ಯವಿಲ್ಲ. ಅವರ ಬೇಡಿಕೆಗಳನ್ನು ನಾನು ಬಹಿರಂಗಪಡಿಸಲು ಬಯಸುವುದಿಲ್ಲ. ನನಗೆ ಎಲ್ಲಾವೂ ಗೊತ್ತಿದೆ. ಅನಗತ್ಯವಾಗಿ ಸ್ವಾಮೀಜಿಗಳನ್ನು ಕರೆತರುತ್ತಿರುವುದೇಕೆ ಅವರಿಗೂ ಇದಕ್ಕೆ ಏನು ಸಂಬಂಧ ಎಂದರು. ಮೇಕೆದಾಟು ಪಾದಯಾತ್ರೆ ಮಾಡುವಾಗ ನಾನು ಕಾನೂನು ಕೈಗೆತ್ತಿಕೊಂಡೆನಾ ಕೃಷ್ಣಾ ಹೋರಾಟದಲ್ಲಿ ಕಾನೂನು ಕೈಗೆತ್ತಿಕೊಂಡರೆ ಪ್ರತಿ ನಿತ್ಯ ಕಾಮಗಾರಿ ನಿಲ್ಲಿಸಿದರೆ ಅದರ ನಷ್ಟ ಭರಿಸುವವರು ಯಾರು ಜನಸಾಮಾನ್ಯರನ್ನು ದಾರಿತಪ್ಪಿಸುತ್ತಿದ್ದಾರೆ ಎಂದರು.

### ನಿಮಗಿಂತ ಹೆಚ್ಚು ಶಬ್ದ ಬಳಸುವ ಸಾಮರ್ಥ್ಯ ನನಗಿದೆ

ಇದೇ ಕೃಷ್ಣಪ್ಪ ಹಾಗೂ ಸುರೇಶ್ ಗೌಡರು ತಾಂತ್ರಿಕ ಸಮಿತಿ ರಚಿಸುವಂತೆ ಕೇಳಿದರು. ತಾಂತ್ರಿಕ ಸಮಿತಿ ರಚನೆಯಾಗಿ ಅದರ ವರದಿಯೂ ಬಂದಿದೆ. ಈಗ ರೈತರನ್ನು ಕರೆದುಕೊಂಡು ಹೋಗಿ ಅಡಚಣೆ ಮಾಡುತ್ತಿದ್ದಾರೆ. ಕಾನೂನು ಕೈಗೆ ತೆಗೆದುಕೊಂಡಿದ್ದಾರೆ. ಕಾನೂನು ಕೈಗೆ ತೆಗೆದುಕೊಳ್ಳಬೇಡಿ. ಈ ವಿಚಾರದಲ್ಲಿ ರಾಜಕಾರಣ ಬೇಡ. ನೀವು ಬಳಸಿರುವ ಶಬ್ದಗಳಿಗಿಂತ ಹೆಚ್ಚು ಶಬ್ದಗಳನ್ನು ಬಳಸುವ ಶಕ್ತಿ ಸಾಮರ್ಥ್ಯ ನನಗೂ ಇದೆ. ಇಂತಹ ಶಬ್ದ ಬಳಸಿದರೆ ಟಿವಿಯಲ್ಲಿ ಒಂದು ನಿಮಿಷ ತೋರಿಸಬಹುದು. ಸಮಯ ಬಂದಾಗ ಇದರ ಪರಿಣಾಮ ಗೊತ್ತಾಗುತ್ತದೆ. ನಾನು ಉತ್ತರ ನೀಡುತ್ತೇನೆ. ಈಗ ಅದರ ಅಗತ್ಯವಿಲ್ಲ. ಈಗ ಜನರ ಹಿತ ಕಾಯಬೇಕು ಎಂದು ತಿಳಿಸಿದರು.

## 10 ಸಾವಿರ ವನರಕ್ಷಕರಿಗೆ ಕೆಎಸ್ ಡಿಎಲ್ ವತಿಯಿಂದ ಸುರಕ್ಷಾ ಕಿಟ್

• ಉದಯವಾಹಿನಿ, ಬೆಂಗಳೂರು

ಅರಣ್ಯ ರಕ್ಷಣೆಯಲ್ಲಿ ಮಹತ್ತರ ಪಾತ್ರ ವಹಿಸುತ್ತಿರುವ ರಾಜ್ಯದ 10 ಸಾವಿರ ಅರಣ್ಯ ರಕ್ಷಕರು. ವೀಕ್ಷಕರು. ಕಾವಾಡಿಗಳು, ಮಾವುತರು ಮತ್ತು ಚಾಲಕರಿಗೆ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತದ (ಕೆಎಸ್ ಡಿಎಲ್) ವತಿಯಿಂದ ಗುಣಮಟ್ಟದ ಬ್ಯಾಗ್, ಜರ್ಕಿನ್, ಶೂ ಮತ್ತು ನೀರಿನ ಬಾಟಲಿ ಇರುವ ಕಿಟ್ ವಿತರಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಹೇಳಿದರು.ಮೈಸೂರಿನ ಮುಕ್ತ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಬುಧವಾರ ಜೂನ್ 4 ಮಧ್ಯಾಹ್ನ 2 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳ ಅರಣ್ಯ ವೃತ್ತಗಳ 2,168 ಸಿಬ್ಬಂದಿಗೆ ಈ ಕಿಟ್ ವಿತರಿಸಲಾಗುವುದು. ಅರಣ್ಯ ಸಚಿವ ಈಶ್ವರ ಖಂಡ್ರೆ, ಕೆಎಸ್ ಡಿಎಲ್ ಅಧ್ಯಕ್ಷ ಸಿ.ಎಸ್.ನಾಡಗೌಡ, ವನ್ಯಜೀವಿ ಮಂಡಳಿ ಸದಸ್ಯ ಧ್ರುವ ಪಾಟೀಲ ಭಾಗವಹಿಸುವರು. ಮುಂದಿನ ದಿನಗಳಲ್ಲಿ ರಾಜ್ಯದ ಉಳಿದೆಡೆಯ ಅರಣ್ಯಗಳಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗೂ ಕಿಟ್ ವಿತರಣೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

## ರೈತರ ಕೃಷಿ ಸಾಲದ ಹೆಚ್ಚುವರಿ ಬಡ್ಡಿ ಸರ್ಕಾರವೇ ಭರಿಸಲಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಪ್ರಸಕ್ತ ವರ್ಷ 37 ಲಕ್ಷ ರೈತರಿಗೆ 28,000 ಕೋಟಿ ರೂ. ಕೃಷಿ ಸಾಲ ವಿತರಣೆಯ ಗುರಿ ನಿಗದಿಪಡಿಸಲಾಗಿದೆ. ಈ ಗುರಿ ಸಾಧನೆಗಾಗಿ ನಬಾರ್ಡ್ ಕೇಳುತ್ತಿರುವ ಹೆಚ್ಚುವರಿ ಬಡ್ಡಿ ಹಣವನ್ನು ರಾಜ್ಯ ಸರ್ಕಾರದಿಂದ ಭರಿಸುವಂತೆ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮನವಿ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಹಕಾರ ಸಚಿವ ಕೆ.ಎನ್. ರಾಜಣ್ಣ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿ ರಜನೀಶ್ ಅವರಿಗೆ ದಿನೇಶ್ ಗೂಳಿಗೌಡ ಅವರು ಪತ್ರ ಬರೆದು ಮನವಿ ಮಾಡಿದ್ದಾರೆ. 2025-26 ನೇ ಸಾಲಿನಲ್ಲಿ 36.31 ಲಕ್ಷ ರೈತರಿಗೆ 25,925.80 ಕೋಟಿ ರೂ. ಅಲ್ಪಾವಧಿ ಕೃಷಿ ಸಾಲ, 69 ಸಾವಿರ ರೈತರಿಗೆ 2,074.20 ಕೋಟಿ ಮಧ್ಯಮಾವಧಿ/ ದೀರ್ಘಾವಧಿ ಕೃಷಿ ಸಾಲ ಸೇರಿ ಒಟ್ಟು 37 ಲಕ್ಷ ರೈತರಿಗೆ 28,000 ಕೋಟಿ ರೂ ಕೃಷಿ ಸಾಲ ವಿತರಿಸುವ ಗುರಿ ನಿಗದಿಪಡಿಸಲಾಗಿದೆ ಎಂದು ಹೇಳಿದ್ದಾರೆ.

## ಜೂನ್ 3ರಿಂದ ಜಲಾನಯನ ನಿರ್ವಹಣೆ ರಾಷ್ಟ್ರೀಯ ಸಮ್ಮೇಳನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಲಾನಯನ ನಿರ್ವಹಣೆಯ ಉತ್ಕೃಷ್ಟ ಕೇಂದ್ರ, ಜಲಾನಯನ ಅಭಿವೃದ್ಧಿ ಇಲಾಖೆ, ಭೂ ಸಂಪನ್ಮೂಲ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಜೂನ್ 3ರಿಂದ 5ರವರೆಗೆ ಜಿಕೆವಿಕೆಯ ಡಾ. ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣದಲ್ಲಿ 'ಭೂ ಸಂಪನ್ಮೂಲ ಸಮೀಕ್ಷೆ ಆಧಾರಿತ ಸುಸ್ಥಿರ ಜಲಾನಯನ ನಿರ್ವಹಣೆ ಕುರಿತು ರಾಷ್ಟ್ರೀಯ ಸಮ್ಮೇಳನ' ಆಯೋಜಿಸಲಾಗಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಎಸ್.ವಿ. ಸುರೇಶ, ಜಲಾನಯನ ಇಲಾಖೆಯ ನಿರ್ದೇಶಕ ಮೊಹಮ್ಮದ ಪರವೇಜ ಬಂಥನಾಳ, 'ವಿಶ್ವ ಬ್ಯಾಂಕ್ ಆರ್ಥಿಕ ನೆರವಿನೊಂದಿಗೆ ಕರ್ನಾಟಕ ಹಾಗೂ ಒಡಿಶಾ ರಾಜ್ಯಗಳಲ್ಲಿ ನವೀನ ವಿಧಾನಗಳಿಂದ ಜಲಾನಯನ ಪ್ರದೇಶವನ್ನು ಪುನಶ್ಚೇತನಗೊಳಿಸಿ, ಕೃಷಿಯಲ್ಲಿ ಸ್ಥಿತಿಸ್ಥಾಪಕತ್ವ ಸಾಧಿಸುವ ಯೋಜನೆಯನ್ನು ಜಾರಿಗೊಳಿಸಲಾಗಿದೆ. 34 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ನವೀನ ವಿಧಾನಗಳ ಮೂಲಕ ಜಲಾನಯನ ಪ್ರದೇಶ ಅಭಿವೃದ್ಧಿಪಡಿಸುವ ಗುರಿ ಇದೆ' ಎಂದು ಮಾಹಿತಿ ನೀಡಿದರು.

## ಹಠಾತ್ ಪ್ರವಾಹ, ಭೂಕುಸಿತ ನಲುಗಿದ ಉತ್ತರ ಭಾರತ

### ಈಶಾನ್ಯ ರಾಜ್ಯ ಅಸ್ಸಾಂ, ಅರುಣಾಚಲ, ಮಿಜೋರಾಂನಲ್ಲಿ ಭೂಕುಸಿತ, ಪ್ರವಾಹ

### ನಾಲ್ವರು ಮಕ್ಕಳು ಇಬ್ಬರು ಗರ್ಭಿಣಿಯರ ಸಾವು

### ಹಠಾತ್ ಪ್ರವಾಹ, ಭೂಕುಸಿತದ ಘಟನೆಗಳಲ್ಲಿ 31ಕ್ಕೆ ಹೆಚ್ಚು ಮಂದಿ ಮೃತ


• ಉದಯವಾಹಿನಿ, ಗುವಾಹಟಿ

ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಭಾರಿ ಮಳೆಯ ಪರಿಣಾಮವಾಗಿ ಅಸ್ಸಾಂ, ಅರುಣಾಚಲಪ್ರದೇಶ, ಮಿಜೋರಾಂ, ಮಣಿಪುರ ಸೇರಿದಂತೆ ಈಶಾನ್ಯ ರಾಜ್ಯಗಳು ತತ್ತರಿಸಿವೆ. ಹಠಾತ್ ಪ್ರವಾಹ, ಭೂಕುಸಿತದ ಘಟನೆಗಳಲ್ಲಿ 31ಕ್ಕೆ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಮಳೆ ಸಂಬಂಧಿತ ಅವಘಡಕ್ಕೆ ಅಸ್ಸಾಂನಲ್ಲಿ 10, ಅರುಣಾಚಲ ಪ್ರದೇಶದಲ್ಲಿ 9, ಮೇಘಾಲಯದಲ್ಲಿ 6, ಮಿಜೋರಾಂನಲ್ಲಿ 5, ತ್ರಿಪುರಾ, ನಾಗಾಲ್ಯಾಂಡ್. ಸಿಕ್ಕಿಂನಲ್ಲಿ ತಲಾ ಒಬ್ಬರು ಮೃತಪಟ್ಟಿದ್ದಾರೆ. ನೆರೆ ಹಾವಳಿಯಿಂದ ರಸ್ತೆ, ಸೇತುವೆಗಳು ಸೇರಿದಂತೆ ಮೂಲ ಸೌಕರ್ಯ ವ್ಯವಸ್ಥೆ ನಾಶವಾಗಿದೆ. ಪ್ರವಾಹದ ಅಬ್ಬರಕ್ಕೆ ಮನೆಗಳು ಕುಸಿದು ಬಿದ್ದಿವೆ. ಸಾವಿರಾರು ವಿದ್ಯುತ್ ಕಂಬಗಳು ಧರೆಗುರುಳಿದ್ದು, ಬಹುತೇಕ ರಾಜ್ಯಗಳಲ್ಲಿ ವಿದ್ಯುತ್ ವಿತರಣೆಯಲ್ಲಿ ವ್ಯತ್ಯಯವಾಗಿದೆ.









ಭಾರಿ ಮಳೆಯಿಂದ ಅರುಣಾಚಲ ಪ್ರದೇಶದಲ್ಲಿ ಸಂಭವಿಸಿದ ಹಠಾತ್ ಭೂಕುಸಿತದಿಂದ ಆಳವಾದ ಕಂದಕಕ್ಕೆ ವಾಹನ ಬಿದ್ದು ಏಳು ಜನರು ಮೃತಪಟ್ಟಿದ್ದಾರೆ. ಶುಕ್ರವಾರ ತಡರಾತ್ರಿ ರಾಷ್ಟ್ರೀಯ ಹೆದ್ದಾರಿ 13 ರಲ್ಲಿ ಪೂರ್ವ ಕಮೆಂಗ್ ಜಿಲ್ಲಾಕೇಂದ್ರ ಸೆಪ್ಪಾಗೆ ಪ್ರಯಾಣಿಸುತ್ತಿದ್ದಾಗ ಘಟನೆ ಸಂಭವಿಸಿದೆ. ನೀರಿನ ರಭಸಕ್ಕೆ ಎರಡು ಕುಟುಂಬಗಳ ಜನರಿದ್ದ ವಾಹನ ಕೊಚ್ಚಿ ಹೋಗಿದೆ. ದುರ್ಘಟನೆಯಲ್ಲಿ ನಾಲ್ವರು ಮಕ್ಕಳು ಮತ್ತು ಇಬ್ಬರು ಗರ್ಭಿಣಿಯರು ಮೃತಪಟ್ಟಿದ್ದಾರೆ. ಭೂಕುಸಿತದಲ್ಲಿ ಸಿಲುಕಿದ ಮತ್ತೊಂದು ವಾಹನ ಪವಾಡಸದೃಶ ರೀತಿಯಲ್ಲಿ ಕೂದಲೆಳೆ ಅಂತರದಲ್ಲಿ ಪಾರಾಗಿದೆ.



ರಾಜ್ಯದ ಲೋವರ್ ಸುಬನ್ಸಿರಿ ಜಿಲ್ಲೆಯ ಜಿರೋ-ಕಮ್ಲೆರಸ್ತೆಯಲ್ಲಿ ಸಂಭವಿಸಿದ ಮತ್ತೊಂದು ಭೂಕುಸಿತ ಘಟನೆಯಲ್ಲಿ ಇಬ್ಬರು ಕಾರ್ಮಿಕರು ಮೃತಪಟ್ಟಿದ್ದು, ಮತ್ತಿಬ್ಬರನ್ನು ರಕ್ಷಿಸಲಾಗಿದೆ. ಮಿಜೋರಾಂನ ಚಾಂಪೈ ಜಿಲ್ಲೆಯಲ್ಲಿ ಉಂಟಾದ ಪ್ರವಾಹದಲ್ಲಿ ಮ್ಯಾನ್ಮಾರ್‌ನ ಐವರು ನಿರಾಶ್ರಿತರು ಕೊಚ್ಚಿ ಹೋಗಿದ್ದಾರೆ. ರಕ್ಷಣಾ ಪಡೆಗಳು ಇಬ್ಬರನ್ನು ರಕ್ಷಣೆ ಮಾಡಿವೆ. ಲಾಂಗ್‌ಟ್ಲೈ ಜಿಲ್ಲೆಯ ಹಲವು ಕಡೆ ಭೂಕುಸಿತದ ಘಟನೆಗಳು ವರದಿಯಾಗಿವೆ.

### ಅಸ್ಸಾಂನಲ್ಲಿ 10 ಜನರ ಸಾವು

ಅಸ್ಸಾಂನಲ್ಲಿ ಭಾರಿ ಮಳೆ ಮುಂದುವರಿದಿದೆ. ಬಸ್, ರೈಲು ಸೇವೆ ಸೇರಿದಂತೆ ಸಾರಿಗೆ ಅಸ್ತವ್ಯಸ್ತವಾಗಿದೆ. ಗುವಾಹಟಿ, ಗೋಲಾಘಾಟ್ ಮತ್ತು ಲಖಿಂಪುರ ಸೇರಿದಂತೆ ಹಲವು ಪಡೆ ಪ್ರವಾಹ, ಭೂಕುಸಿತ ಉಂಟಾಗಿದೆ. ಭಾರಿ ಮಳೆಯಿಂದ 15 ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ 78,000ಕ್ಕೂ ಹೆಚ್ಚು ಜನ ನಿರಾಶ್ರಿತರಾಗಿದ್ದಾರೆ. ಕಾಮರೂಪ್, ಗೋಲಾಘಾಟ್, ಲಖಿಂಪುರದಲ್ಲಿ ಮಳೆ ಸಂಬಂಧಿತ ಅವಘಡದಲ್ಲಿ 10 ಜನ ಮೃತಪಟ್ಟಿದ್ದಾರೆ. ಮುಂದಿನ 48 ಗಂಟೆ ಅವಧಿಯಲ್ಲಿ ಅರುಣಾಚಲ ಪ್ರದೇಶ ಹಾಗೂ ಮೇಘಾಲಯ ಭಾಗದಲ್ಲಿ ಭಾರಿ ಮಳೆಯಾಗಲಿದ್ದು, ಅಸ್ಸಾಂನ ಕೆಳಹಂತದ ಮೂರು ಜಿಲ್ಲೆಗಳಿಗೆ ಪ್ರವಾಹದ ಮುನ್ನೆಚ್ಚರಿಕೆ ನೀಡಲಾಗಿದೆ. ಬಹುತೇಕ ನದಿಗಳು ಅಪಾಯದ ಮಟ್ಟ ಮೀರಿ ಹರಿಯಲಿವೆ. ನದಿ ತೀರದ ಜನರು ಸುರಕ್ಷಿತ ಪ್ರದೇಶಕ್ಕೆ ತೆರಳುವಂತೆ ಅಸ್ಸಾಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚನೆ ನೀಡಿದೆ. ಅರುಣಾಚಲ ಪ್ರದೇಶ-ಅಸ್ಸಾಂ ಗಡಿಯ ತಿನ್‌ಸುಕಿಯಾ ಜಿಲ್ಲೆಯಲ್ಲಿ ಉಕ್ಕಿ ಹರಿಯುತ್ತಿದ್ದ ಬೊಮ್ಜಿರ್ ನದಿ ಪ್ರವಾಹದಲ್ಲಿ ಸಿಲುಕಿದ್ದ 14 ಮಂದಿಯನ್ನು ಭಾರತೀಯ ವಾಯುಪಡೆ ರಕ್ಷಣೆ ಮಾಡಿದೆ.



### ಮುಳುಗಿದ ಮಣಿಪುರ, 4000 ಜನರ ಸ್ಥಳಾಂತರ

ಸತತ ಮಳೆಯಿಂದ ಮಣಿಪುರ ರಾಜಧಾನಿ ಇಂಫಾಲ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ತಲೆದೋರಿದೆ. ಭೂಕುಸಿತ, ಹಠಾತ್ ಪ್ರವಾಹಕ್ಕೆ ಸಿಲುಕಿದ ಜನರ ಬದುಕು ಮೂರಾಬಟ್ಟೆಯಾಗಿದೆ. ಇಂಫಾಲ ಕಣಿವೆ ಭಾಗದ ಹಲವು ಪ್ರದೇಶಗಳು ಪ್ರವಾಹದಲ್ಲಿ ಮುಳುಗಡೆಯಾಗಿವೆ. ಕೆಲವು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿದ್ದು, ನೆರೆ ಪೀಡಿತ ಪ್ರದೇಶದ 3,802 ಕ್ಕೂ ಹೆಚ್ಚು ಜನರನ್ನು ವಿವಿಧ ಕಡೆ ಸ್ಥಾಪಿಸಲಾದ ಆರು ಆರೈಕೆ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ. ಕಾಂಗ್ಪೊಕ್ಪಿಯಲ್ಲಿ 16 ಮಿ.ಮೀ., ಖೌಪುಮ್‌ನಲ್ಲಿ 24 ಮಿ.ಮೀ., ಇಂಫಾಲ ಪಶ್ಚಿಮದಲ್ಲಿ 15 ಮಿ.ಮೀ. ಮಳೆಯಾಗಿದೆ. ಇರಿಲ್, ನಂಬುಲ್ ನದಿಗಳು ಅಪಾಯದ ಮಟ್ಟ ಮಿರಿ ಹರಿಯುತ್ತಿವೆ. 3,275 ಪ್ರದೇಶಗಳು ಪ್ರವಾಹದಲ್ಲಿ ಸಿಲುಕಿವೆ. 883 ಮನೆಗಳು ಹಾನಿಗೀಡಾಗಿವೆ. ಮಳೆ ಸಂಬಂಧಿತ ಅವಘಡದಲ್ಲಿ 64 ಪ್ರಾಣಿಗಳು ಮೃತಪಟ್ಟಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



### ಸಿಕ್ಕಿಂನ ಸೇನಾ ಶಿಬಿರದಲ್ಲಿ ಭೂಕುಸಿತ; 3 ಸೈನಿಕರು ಸಾವು, 9 ಜನರು ನಾಪತ್ತೆ

ಸಿಕ್ಕಿಂನ ಛಾಟೆನ್ ನಲ್ಲಿರುವ ಸೇನಾ ಶಿಬಿರದಲ್ಲಿ ಭಾರೀ ಮಳೆಯಿಂದ ಉಂಟಾದ ಭೂಕುಸಿತದಲ್ಲಿ ಮೂವರು ಸಾವನ್ನಪ್ಪಿದ್ದಾರೆ ಮತ್ತು 9 ಭದ್ರತಾ ಸಿಬ್ಬಂದಿ ಕಾಣೆಯಾಗಿದ್ದಾರೆ. ಈ ಘಟನೆ ಭಾನುವಾರ ಸಂಜೆ 7 ಗಂಟೆ ಸುಮಾರಿಗೆ ಸಂಭವಿಸಿದೆ. ಮೇ 30ರಿಂದ ಲಾಚುಂಗ್‌ನಲ್ಲಿ ಸಿಲುಕಿಕೊಂಡಿದ್ದ 1,600 ಪ್ರವಾಸಿಗರನ್ನು ಬೆಳಗ್ಗೆ ರಕ್ಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಲಾಚೆನ್ ನದಿಯಲ್ಲಿ ನೀರಿನ ಮಟ್ಟ ಹೆಚ್ಚಾದ ನಂತರ ಚಾಟೆನ್‌ನಲ್ಲಿರುವ ಸೇನಾ ಶಿಬಿರದಲ್ಲಿ ಭೂಕುಸಿತ ಸಂಭವಿಸಿದೆ. ಸೇನಾ ಸಿಬ್ಬಂದಿಯ ಮೂವರು ಮೃತದೇಹಗಳನ್ನು ಪತ್ತೆಹಚ್ಚಲಾಗಿದ್ದು, 9 ಮಂದಿ ಕಾಣೆಯಾಗಿದ್ದಾರೆ. ಸೇನೆಯಿಂದ ಶೋಧ ಕಾರ್ಯಾಚರಣೆ ನಡೆಯುತ್ತಿದೆ.

## ಡಿಕೆ ಶಿವಕುಮಾರ್ ಕಟ್ಟಿಹಾಕಲು ಸಿದ್ದರಾಮಯ್ಯ ಹೊಸ ಗೇಮ್!

● ಹೈಕಮಾಂಡ್ ಮುಂದೆ ಅರಸು ಬಾಣ ಬಿಟ್ಟ ಸಿಎಂ, ವರ್ಕೌಟ್ ಆಗುತ್ತಾ ತಂತ್ರ ● ಇತ್ತ ಡಿಕೆಶಿ ನಾನು ಸಿಎಂ ಆಗುವ ಸಮಯ ಬಂತು..

• ಉದಯವಾಹಿನಿ ಬೆಂಗಳೂರು

ಕುರ್ಚಿಯಿಂದ ಕೆಳಗಿಳಿಯುವ ಟೈಮ್ ಬಂದಂತೆ ಸಿದ್ದರಾಮಯ್ಯ ಹೊಸ ಗೇಮ್ ಶುರುವಿಟ್ಟುಕೊಂಡಿದ್ದಾರೆ. ಡಿಕೆ ಶಿವಕುಮಾರ್ ಅವರನ್ನು ಹಣಿಯಲು ಹೊಸ ತಂತ್ರವನ್ನು ರೂಪಿಸಿದ್ದಾರೆ. ಇತ್ತ ಡಿಕೆಶಿ ನಾನು ಸಿಎಂ ಆಗುವ ಸಮಯ ಬಂತು.. ಎರಡೂವರೇ ವರ್ಷಕ್ಕೆ ಇನ್ನೇನು ಕೆಲವೇ ದಿನಗಳು ಬಾಕಿ ಇದೆ.. ಸಿಎಂ ಕುರ್ಚಿಯಿಂದ ಸಿದ್ದರಾಮಯ್ಯ ಏಳಬೇಕು ಅನ್ನೋದನ್ನು ಡಿಕೆಶಿ ಪರೋಕ್ಷವಾಗಿ ಝಲಕ್ ತೋರಿಸುತ್ತಿದ್ದಾರೆ. ಆದ್ರೆ ಇದಕ್ಕೆ ತಡೆ ಹಿಡಿಯಲು ಏನೆಲ್ಲ ಪ್ಲಾನ್ ಮಾಡಬೇಕು ಅದೆಲ್ಲವನ್ನು ಸಿದ್ದರಾಮಯ್ಯ ಇಟ್ಟುಕೊಂಡಿದ್ದಾರೆ. ಡಿಕೆಶಿ ಸಿಎಂ ಆಗುವುದನ್ನು ತಡೆಯಲು ಈಗ ಸಿದ್ದರಾಮಯ್ಯ ಹೊಸ ವರಸೆ ಶುರುಮಾಡಿದ್ದಾರೆ. ಆ ಒಂದು ದಾಖಲೆ ಮುರಿಯಲು ಸಿದ್ದು ತುದಿಗಾಲಲ್ಲಿ ನಿಂತಿದ್ದಾರೆ. ಇದು ಡಿಕೆಶಿಗೆ ಹೊಸ ತಲೆನೋವಾಗಿದೆ. ಸಿದ್ದರಾಮಯ್ಯ ಸಿಎಂ ಕುರ್ಚಿಯಿಂದ ಸದ್ಯಕ್ಕೆ ಏಳಲ್ಲ ಅನ್ನೋದು ಡಿಕೆಶಿಗೆ ಕನ್ಫರ್ಮ್ ಆಗಿದೆ. ಹಾಗಾದ್ರೆ ಸಿದ್ದರಾಮಯ್ಯ ಕಣ್ಣಿಟ್ಟ ಆ ದಾಖಲೆ ಯಾವುದು. ಅಲ್ಲಿ ವರೆಗೂ ಸಿದ್ದರಾಮಯ್ಯರನ್ನು ಕುರ್ಚಿಯಲ್ಲಿ ಕೂರಲು ಬಿಡುತ್ತಾರಾ?

ಹೌದು. ಕಾಂಗ್ರೆಸ್ ಸರ್ಕಾರಕ್ಕೆ ಬರುವ ದಿನಗಳೆಲ್ಲ ಈಗ ನಿರ್ಣಾಯಕವಾಗಿದೆ. ದಿಲ್ಲಿ ಮಟ್ಟದಲ್ಲಿ ನಡೆದಿದೆ ಎನ್ನಲಾದ ಅಧಿಕಾರ ಹಸ್ತಾಂತರದ ಮಾತಿನ ಪ್ರಕಾರ ಸಿದ್ದರಾಮಯ್ಯ ಎರಡೂವರೆ ವರ್ಷದ ನಂತರ ಡಿಕೆಶಿಗೆ ಸಿಎಂ ಕುರ್ಚಿಯನ್ನು ಬಿಟ್ಟುಕೊಡಬೇಕು. ನವೆಂಬರ್‌ನಲ್ಲಿ ಸರ್ಕಾರಕ್ಕೆ ಎರಡೂವರೆ ವರ್ಷ ತುಂಬುತ್ತೆ, ಆಗ ಹೈಕಮಾಂಡ್ ಏನಾದ್ರು ಸಿದ್ದುಗೆ ಸಿಎಂ ಸ್ಥಾನ ಬಿಟ್ಟುಕೊಡುವಂತೆ ಸೂಚಿಸಿದ್ರೆ, ಸಿದ್ದು ಏನ್ ಮಾಡ್ತಾರೆ ಅನ್ನೋದು ಎಲ್ಲಾರಿಗೂ ಕುತೂಹಲ ಇದೆ. ಡಿಕೆಶಿಗೆ ಸಿಎಂ ಸ್ಥಾನ ತಪ್ಪಿಸಿಲು ನಾನಾ ತಂತ್ರ ಮಾಡಿದ್ದಾರೆ, ಡಿಕೆಶಿ ಸಿಎಂ ಸ್ಥಾನ ಕೇಳಿದ್ರೆ ಮುಂದೇನು ಆಗುತ್ತೆ ಅನ್ನೋದನ್ನು ಈಗಾಗೇಲೆ ಸಿದ್ದರಾಮಯ್ಯ ಪಿಕ್ಚರ್ ತೋರಿಸಿದ್ದಾರೆ. ಈಗಾಗಲೇ ಹಲವು ಬಾರಿ ಈ ಬಗ್ಗೆ ಹೇಳಿದ್ದೇವೆ. ಸದ್ಯ ಸಿದ್ದರಾಮಯ್ಯ ಮತ್ತೊಂದು ಪ್ಲಾನ್ ಮಾಡಿದ್ದಾರೆ. ಹೈಕಮಾಂಡ್ ಅನ್ನು ಭಾವಾನಾತ್ಮಕವಾಗಿ ಕಟ್ಟಿಹಾಕುವ ತಂತ್ರವನ್ನು ಮಾಡುತ್ತಿದ್ದಾರೆ. ಈ ಮಾತನ್ನ ಹೇಳಿದ್ರೆ ಹೈಕಮಾಂಡ್ ಕೂಡ ಇಲ್ಲ ಅನ್ನಲ್ಲ ಮಾಹಿತಿ ಕೂಡ ಇದೆ. ಆ ವ್ಯಕ್ತಿಯ ದಾಖಲೆ ಮುರಿಯಲು ಒಂದು ಅವಕಾಶ ಕೊಡಿ ಎಂದು ಹೈಕಮಾಂಡ್ ಬಳಿ ಮನವಿ ಮಾಡಬಹುದು. ಮತ್ತೆ ಸಿಎಂ ಆಗಲು ನನಗೆ ಚಾನ್ಸ್ ಸಿಗಲ್ಲ. ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯ ರಾಜಕೀಯಕ್ಕೆ ನಿಲ್ಲಲ್ಲ ಅಂತಾ ಹೇಳಿದ್ದಾರೆ. ಇದೇ ನನ್ನ ಲಾಸ್ಟ್ ಟರ್ಮ್ ಹೀಗಾಗಿ ಅದೊಂದು ದಾಖಲೆ ಮುರಿಯಲು ಅವಕಾಶ ಕೊಡಿ ಎಂದು ಮನವಿ ಮಾಡಬಹುದು ಅದೇನಪ್ಪ ಅಂದ್ರೆ..

ಯೆಸ್ ಇಷ್ಟೊತ್ತು ಹೇಳಿದ್ದೂ ಇದೆ.. ಇದೇ ಸಿದ್ದರಾಮಯ್ಯನವರ ಹೊಸ ಗೇಮ್ ಪ್ಲಾನ್.. ಅದು ಹೇಗೆ ಅನ್ನೋದನ್ನು ಮುಂದೆ ಹೇಳ್ತಿನಿ.. ಆದ್ರೆ ಸಿದ್ದರಾಮಯ್ಯಗೆ ಇದೊಂದು ಕನಸು ತುಂಬಾ ಇದೆ. ದೇವರಾಜ ಅರಸು ಅವರು ಕರ್ನಾಟಕದಲ್ಲಿ ಅತಿ ಸುದೀರ್ಘ ಅವಧಿಗೆ ಮುಖ್ಯಮಂತ್ರಿ ಹುದ್ದೆ ಅಲಂಕರಿಸಿದ ದಾಖಲೆ ಹೊಂದಿದ್ದಾರೆ. ಅರಸು ಅವರು ಏಳು ವರ್ಷ 11 ತಿಂಗಳ ಕಾಲ ಮುಖ್ಯಮಂತ್ರಿಯಾಗಿದ್ದರು. ಆ ದಾಖಲೆಯನ್ನು ದಾಟಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈಗ ಒಂದು ಅವಕಾಶವಿದೆ. ಅಂದರೆ, ಸಿದ್ದರಾಮಯ್ಯ ಅವರು 2026ರ ಏಪ್ರಿಲ್ 19 ನಂತರವೂ ಮುಖ್ಯಮಂತ್ರಿ ಹುದ್ದೆಯಲ್ಲಿ ಮುಂದುವರೆದರೆ ಆಗ ದೇವರಾಜ ಅರಸು ಅವರ ದಾಖಲೆ ಮುರಿಯುತ್ತಾರೆ. ಇಂತಹದೊಂದು ದಾಖಲೆ ತಮ್ಮ ಹೆಸರಿನಲ್ಲಿ ದಾಖಲಾಗಬೇಕು ಎಂಬ ಆಸೆ ಸಿದ್ದರಾಮಯ್ಯ ಹಾಗೂ ಅವರ ಆಪ್ತರಿಗೆ ಇದೆ ಎನ್ನಲಾಗುತ್ತಿದೆ. ಹೀಗಾಗಿಯೇ ಅವರ ಆಪ್ತ ಬಣದ ಪ್ರಮುಖ ಸಚಿವರು ಮುಖ್ಯಮಂತ್ರಿ ಸಿದ್ದರಾಮಯ್ಯ 5 ವರ್ಷವೂ ಮುಖ್ಯಮಂತ್ರಿಯಾಗಿರುತ್ತಾರೆ ಎಂಬ ಹೇಳಿಕೆ ನೀಡುತ್ತಿದ್ದಾರೆ.. ಇದು ಡಿಕೆಶಿಯ ಸಿಎಂ ಆಸೆಗೆ ತಣ್ಣೀರು ಎರಚಿದೆ..

ಅರಸು ಅವರ ದಾಖಲೆ ಮುರಿಯೋದಕ್ಕೂ ಡಿಕೆಶಿ ಸಿಎಂ ಆಗುವುದನ್ನು ತಡೆಯೋಕು ಏನು ಸಂಬಂಧ ಅಂತ ನೀವು ಕೇಳಬಹುದು ಯೆಸ್ ಅಲ್ಲೇ ಇರೋದು ಸಸ್ಪೆನ್ಸ್. ಅಧಿಕಾರ ಹಂಚಿಕೆ ಮಾತುಕತೆ ನಡೆದಿದ್ದು ಎರಡೂವರೆ ವರ್ಷಕ್ಕೆ. ಬರುವ ನವೆಂಬರ್‌ಗೆ ಅದು ಪೂರ್ಣ ಗೊಳ್ಳುತ್ತೆ. ಸಿದ್ದರಾಮಯ್ಯ ಅರಸು ದಾಖಲೆ ಮುರಿಯಬೇಕು ಅಂದ್ರೆ 2026ರ ಏಪ್ರಿಲ್ 19ರವರೆಗೂ ಸಿಎಂ ಕುರ್ಚಿಯಲ್ಲಿ ಕೂರಬೇಕು. ಬರೋಬ್ಬರಿ 10 ತಿಂಗಳು ಸಿಎಂ ಕುರ್ಚಿಯಲ್ಲಿ ಇರಬೇಕಾಗುತ್ತೆ. ಇದನ್ನೇ ಗೇಮ್ ಮಾಡಿಕೊಂಡ ಸಿದ್ದರಾಮಯ್ಯ. ಒಂದು ವೇಳೆ ಡಿಕೆಶಿ ನವೆಂಬರ್‌ನಲ್ಲಿ ಸಿಎಂ ಸ್ಥಾನ ಬಿಟ್ಟುಕೊಡುವಂತೆ ಕೇಳಿದ್ರೆ. ಆಗ ಸಿದ್ದರಾಮಯ್ಯ ಈ ಮಾತುನ್ನು ಹೇಳಬಹುದು. ಮತ್ತೆ ಮುಂದಿನ ದಿನಗಳಲ್ಲಿ ಸಿಎಂ ಆಗುವುದಕ್ಕೆ ಆಗುತ್ತೋ ಇಲ್ವೋ ಗೊತ್ತಿಲ್ಲ. ಈಗ ಅರಸು ದಾಖಲೆ ಮುರಿಯೋಕೆ ಒಂದು ಚಾನ್ಸ್ ಇದೆ. ಹೀಗಾಗಿ ಅದು ಮುಗಿಲಿ ಅನಂತರ ಬೇಕಾದ್ರೆ ಬಿಟ್ಟು ಕೊಡುವೆ ಅಂತ ಹೈಕಮಾಂಡ್‌ಗೆ ಒಂದು ಮನವಿ ಮಾಡಬಹುದು ಎನ್ನಲಾಗುತ್ತಿದೆ. ಇದಕ್ಕೆ ಹೈಕಮಾಂಡ್ ಓಕೆ ಅಂದ್ರೆ, ಡಿಕೆಶಿ ಏಪ್ರಿಲ್ ವರೆಗೂ ಕಾಯಲೇಬೇಕಾಗುತ್ತೆ. ಬೀಸೋ ದೊಣ್ಣೆಯಿಂದ ತಪ್ಪಿಸಿಕೊಂಡ್ರೆ, 100 ವರ್ಷ ಆಯಸ್ಸು ಎಂಬಂತೆ ಸಿದ್ದರಾಮಯ್ಯ ಬರುವ ನವೆಂಬರ್‌ಗೆ ಡಿಕೆಶಿಗೆ ಸಿಎಂ ಸ್ಥಾನವನ್ನು ತಪ್ಪಿಸಲು ಈ ಅಸ್ತ್ರವನ್ನು ಬಳಸಬಹುದು ಎನ್ನಲಾಗುತ್ತಿದೆ.



### ಸಿಎಂ ಸ್ಥಾನ ಬಿಟ್ಟು ಕೊಡಲ್ಲ ಅಂದ್ರೆ ಮುಂದೇನು

ಸಿದ್ದರಾಮಯ್ಯ ಏನೋ ಅರಸು ದಾಖಲೆ ಮುರಿಬೇಕು, ಹೀಗಾಗಿ ಸಿಎಂ ಸ್ಥಾನದಲ್ಲಿ ಮುಂದುವರೆಯುತ್ತೇನೆ ಎಂದು ಹೇಳಬಹುದು ಆದ್ರೆ ಇದಕ್ಕೆಲ್ಲ ಡಿಕೆಶಿ ಸುಮ್ಮನಿರ್ತಾರಾ ಅನ್ನೋದೇ ಕುತೂಹಲ.. ಯಾಕಂದ್ರೆ ಡಿಕೆಶಿ ಇಲ್ಲಿ ಸಿಎಂ ಕುರ್ಚಿ ಏರಲು ಈಗಿನಂದಲೇ ನಾನಾ ಕಸರತ್ತು ಮಾಡುತ್ತಿದ್ದಾರೆ. ಡಿಕೆಶಿ ಏನೆಲ್ಲ ಕಸರತ್ತು ಮಾಡಿದ್ರು ಅನ್ನೋದು ನಿಮಗೆಲ್ಲ ಗೊತ್ತಿದೆ. ಸಿಎಂ ಸ್ಥಾನ ಬಿಟ್ಟು ಕೊಡಲ್ಲ ಅಂದ್ರೆ ಮುಂದೇನು ಆಗುತ್ತೆ ಅನ್ನೋದನ್ನು ಕಾಂಗ್ರೆಸ್ ನಾಯಕರಿಗೆ ತೋರಿಸಿಕೊಟ್ಟಿದ್ದಾರೆ. ಅಮಿತ್ ಶಾ ಜೊತೆ ವೇದಿಕೆ ಹಂಚಿಕೊಂಡಿದ್ದು, ಹಿಂದೂ ತತ್ವ ಜಪ ಮಾಡಿದ್ದು, ಬಂಡಾಯ ಏಳುವ ಮುನ್ಸೂಚನೆಯನ್ನು ಕೂಡ ಕೊಟ್ಟಿದ್ದರು. ಡಿಕೆಶಿ ಬೆಂಬಲಿಗರೆಲ್ಲ ಈಗ ಡಿಕೆಶಿ ಸಿಎಂ ಆಗೇ ಆಗುತ್ತಾರೆ ಎಂದು ಬಹಿರಂಗವಾಗಿ ಹೇಳುತ್ತಿದ್ದಾರೆ. ಹೀಗಾಗಿ ನವೆಂಬರ್‌ನಲ್ಲಿ ಏನಾಗುತ್ತೆ ಅನ್ನೋ ಕುತೂಹಲವಂತು ಎಲ್ಲಾರಿಗೂ ಇದ್ದೇ ಇದೆ.. ಡಿಕೆಶಿ ಮುಂದಿನ ನಡೆ ಬಗ್ಗೆ ಎಲ್ಲಾರಲ್ಲೂ ಟೆನ್ಷನ್ ಇದೆ.

**ಈ ದಿನದ ದರ**

| | | | | |
|---|---|---|---|---|
| ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,884/Gram24ct | ₹9,060/Gram22ct | ಬೆಳ್ಳಿ: ₹100.00/Gram |

## ನುಗು ಅಭಯಾರಣ್ಯ ರಸ್ತೆಯಲ್ಲಿ ರಾತ್ರಿ ಸಂಚಾರಕ್ಕೆ ಹೈಕೋರ್ಟ್ ಅಸ್ತು

• ಉದಯವಾಹಿನಿ, ಬೆಂಗಳೂರು

ರಾತ್ರಿ ಹೊತ್ತು ತಮ್ಮ ಜಮೀನಿಗೆ ನುಗು ವನ್ಯಜೀವಿ ಅಭಯಾರಣ್ಯದಲ್ಲಿನ ರಸ್ತೆ ಬಳಸಲು ಸಚಿವ ಕೆ.ಜೆ ಜಾರ್ಜ್ ಪುತ್ರ, ರಾಣಾ ಜಾರ್ಜ್‌ಗೆ ಹೈಕೋರ್ಟ್ ಅನುಮತಿ ನೀಡಿದೆ. ರಾತ್ರಿ ಹೊತ್ತು ತಮ್ಮ ಜಮೀನಿಗೆ ತೆರಳಲು ಅಭಯಾರಣ್ಯದಲ್ಲಿ ಹಾದುಹೋಗಲು ಅನುಮತಿ ನೀಡುವಂತೆ ರಾಣಾ ಜಾರ್ಜ್ ಹೈಕೋರ್ಟ್ ಮೊರೆ ಹೋಗಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಪೀಠ, ವನ್ಯಜೀವಿಗಳಿಗೆ ತೊಂದರೆಯಾಗದಂತೆ ಸಂಚಾರ ನಡೆಸುವಂತೆ ಆದೇಶಿಸಿದೆ. ರಾಣಾ ಜಾರ್ಜ್ ಅವರ ಜಮೀನು, ಹೆಚ್‌ಡಿ ಕೋಟೆಯ ಶಂಬುಗೌಡನಹಳ್ಳಿ ಮತ್ತು ಲಕ್ಕಸೋಗೆ ಗ್ರಾಮಗಳಲ್ಲಿದೆ. ಇಲ್ಲಿಗೆ ನುಗು ವನ್ಯಜೀವಿ ಅಭಯಾರಣ್ಯದ ರಸ್ತೆ ಮಾರ್ಗ ಮೂಲಕ ರಾತ್ರಿ-ಹಗಲು ಓಡಾಡಲು ಅನುಮತಿ ಕೋರಲಾಗಿತ್ತು. ರಾತ್ರಿ, ಹಗಲು ಸಂಚಾರಕ್ಕೆ ಅನುಮತಿಸಲು ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

## ಲಾಕರ್‌ನಲ್ಲಿಯೇ ಆಭರಣ ಪತ್ತೆ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಬ್ಯಾಂಕ್ ಲಾಕರ್‌ನಲ್ಲಿಟ್ಟಿದ್ದ ಚಿನ್ನಾಭರಣ ಕಳ್ಳತನವಾಗಿದೆ ಎಂಬ ಆರೋಪ ಸುಳ್ಳು ಮತ್ತು ವಾಸ್ತವಕ್ಕೆ ದೂರವಾಗಿದೆ ಎಂದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸ್ಪಷ್ಟಪಡಿಸಿದೆ. ಚಿಕ್ಕಮಾರನಹಳ್ಳಿಯ ಡಾಲರ್ಸ್ ಕಾಲೋನಿಯ ಎಸ್‌ಬಿಐ ಶಾಖೆಯ ಬ್ಯಾಂಕ್ ಲಾಕರ್‌ನಲ್ಲಿಟ್ಟಿದ್ದ ಚಿನ್ನಾಭರಣ ಕಳ್ಳತನವಾಗಿದೆ ಎಂದು ಆರೋಪಿಸಿ ಸಿ.ಡಿ.ಬಿಂದು ಎಂಬುವವರು ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಈ ಆರೋಪಕ್ಕೆ ಸಂಬಂಧಿಸಿದಂತೆ ಸ್ಪಷ್ಟನೆ ನೀಡಿರುವ ಬ್ಯಾಂಕ್‌ನ ಸಹಾಯಕ ಪ್ರಧಾನ ವ್ಯವಸ್ಥಾಪಕ, 'ಸಾಕ್ಷಿದಾರರು, ದೂರುದಾರರು ಮತ್ತು ಪೊಲೀಸರ ಸಮಕ್ಷಮದಲ್ಲಿ ಲಾಕರ್ ಪರಿಶೀಲಿಸಲಾಯಿತು. ಈ ವೇಳೆ ದೂರುದಾರರೇ ಲಾಕರ್ ಬೀಗ ತೆಗೆದಾಗ ಪರಿಶೀಲಿಸಿದಾಗ, ನಾಪತ್ತೆಯಾಗಿದ್ದವು ಎಂದು ಆರೋಪಿಸಿದ್ದ ಆಭರಣಗಳು ಅಲ್ಲಿಯೇ ಕಂಡುಬಂದಿವೆ' ಎಂದು ಹೇಳಿದ್ದಾರೆ. ಈ ಎಲ್ಲಾ ಪ್ರಕ್ರಿಯೆಯನ್ನು ತನಿಖಾಧಿಕಾರಿಗಳು ವಿಡಿಯೋ ಚಿತ್ರೀಕರಣ ಮಾಡಿದ್ದಾರೆ' ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಟೈರ್ ಅಂಗಡಿಗೆ ಬೆಂಕಿ, ಅಪಾರ ಹಾನಿ

• ಉದಯವಾಹಿನಿ, ಬೆಂಗಳೂರು

ನಗರದ ಜೆ.ಸಿ.ರಸ್ತೆಯಲ್ಲಿರುವ ಟೈರ್ ಹಾಗೂ ಬೇರಿಂಗ್ ಅಂಗಡಿಯಲ್ಲಿ ತಡರಾತ್ರಿ ಬೆಂಕಿ ಅವಘಡ ಸಂಭವಿಸಿದ್ದು, ಅಪಾರ ಪ್ರಮಾಣದ ವಸ್ತುಗಳು ಬೆಂಕಿಗೆ ಆಹುತಿ ಆಗಿವೆ. ಟೈರ್ ಅಂಗಡಿಯಲ್ಲಿ ತಡರಾತ್ರಿ ಏಕಾಏಕಿ ಬೆಂಕಿ ಕಾಣಿಸಿಕೊಂಡು, ಟೈರ್‌ಗಳು, ಬೇರಿಂಗ್ ಹಾಗೂ ಇನ್ನಿತರ ವಸ್ತುಗಳಿಗೆ ಹಾನಿಯಾಗಿದೆ. ಐದು ವಾಹನದಲ್ಲಿ ಬಂದ ಅಗ್ನಿಶಾಮಕದಳ ಸಿಬ್ಬಂದಿ, ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸಿದರು. ಬೆಂಕಿ ಅವಘಡಕ್ಕೆ ಕಾರಣವೇನು ಎಂಬುದರ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಅವಘಡ ಸಂಭವಿಸಿದ ವೇಳೆ ಸಿಬ್ಬಂದಿ ಇರಲಿಲ್ಲ. ಶಾರ್ಟ್ ಸರ್ಕೀಟ್‌ನಿಂದ ಬೆಂಕಿ ಅವಘಡ ಸಂಭವಿಸಿರುವ ಶಂಕೆ ವ್ಯಕ್ತವಾಗಿದೆ. ಆದರೆ, ಭಾನುವಾರ ಮಧ್ಯಾಹ್ನ ಕೂಡ ಅಂಗಡಿಯಲ್ಲಿ ಹೊಗೆ ಕಾಣಿಸಿಕೊಂಡ ಕಾರಣ ಒಂದು ಅಗ್ನಿಶಾಮಕ ವಾಹನ ಸ್ಥಳದಲ್ಲಿ ಇರಿಸಲಾಗಿದೆ ಎಂದು ಅಗ್ನಿಶಾಮಕ ದಳ ಸಿಬ್ಬಂದಿ ಮಾಹಿತಿ ನೀಡಿದ್ದಾರೆ.

## ಕುರ್ಬಾನಿ ಜಾನುವಾರುಗಳಿಗೆ ಭಾರಿ ಬೇಡಿಕೆ, ದರ ಏರಿಕೆ..!

• ಉದಯವಾಹಿನಿ, ಬೆಂಗಳೂರು

ಈದ್ ಅಲ್-ಅಧಾ (ಬಕ್ರೀದ್) ಹಬ್ಬ ಹತ್ತಿರಬರುತ್ತಿದ್ದು ಈ ನಡುವೆ ಬಲಿ ನೀಡುವ ಜಾನುವಾರುಗಳ ಬೆಲೆಯಲ್ಲಿ ಗಮನಾರ್ಹ ಏರಿಕೆ ಕಂಡುಬಂದಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ, ದರಗಳು ಪ್ರತಿ ಕಿಲೋಗ್ರಾಂಗೆ 100 ರಿಂದ 150 ರೂ.ಗಳಷ್ಟು ಹೆಚ್ಚಾಗಿದೆ. ಹಣದುಬ್ಬರದಿಂದಾಗಿ ಕುರಿಗಳ ಬೆಲೆಯಲ್ಲಿ ಏರಿಕೆಯಾಗಿದೆ ಎಂದು ಟ್ಯಾನರಿ ರಸ್ತೆಯ ದೊಡ್ಡಿ ಕುರಿ ಮಾರುಕಟ್ಟೆಯಲ್ಲಿ ವ್ಯವಹಾರದಲ್ಲಿ ನಿರತರಾಗಿರುವ ಕುರಿ ಮಾರಾಟಗಾರ ಅಮೃತ್ ಅವರು ಹೇಳಿದ್ದಾರೆ.

ಕುರಿಗಳ ಬೆಲೆ ಈಗ ಪ್ರತಿ ಕೆಜಿಗೆ 450 ರೂ.ಗಳಿಂದ ಪ್ರಾರಂಭವಾಗಿ ತಳಿ ಮತ್ತು ಗಾತ್ರವನ್ನು ಅವಲಂಬಿಸಿ 800 ರೂ.ಗಳವರೆಗೆ ಏರಿಕೆಯಾಗಿದೆ. ಮಾರಾಟಗಾರ ಸೈಯದ್ ನಜೀರ್ ಎಂಬುವವರು ಮಾತನಾಡಿ, ಅಮೀನಗಡ ತಳಿಯ ಬೆಲೆ ಪ್ರಸ್ತುತ ಪ್ರತಿ ಕೆಜಿಗೆ 650 ರೂ.ಗಳಾಗಿದೆ. ಅತ್ಯಂತ ದುಬಾರಿ ತಳಿಗಳಲ್ಲಿ ಒಂದೆಂದು ಪರಿಗಣಿಸಲಾದ ಬನ್ನೂರ್ ಕುರಿಯನ್ನು ಪ್ರತಿ ಕೆಜಿಗೆ 800 ರೂ.ಗಳಿಗೆ ಮಾರಾಟ ಮಾಡಲಾಗುತ್ತಿದೆ. ಇನ್ನು ಬೀಟಲ್ ಮತ್ತು ಯೆಲ್ಗಾ ಕುರಿ ಬೆಲೆ ಪ್ರತಿ ಕೆಜಿಗೆ 650 ರೂ.ಗಳಾಗಿದ್ದರೆ, ಆಂಧ್ರಪ್ರದೇಶದ ಚೆನ್ನೂರಿನ ಸ್ಥಳೀಯ ತಳಿ ಕುರಿಗಳು ಪ್ರತಿ ಕೆಜಿಗೆ 450 ರೂ.ಗಳಿಗೆ ಲಭ್ಯವಿದೆ. ಈ ಬೆಲೆಗಳು ಪ್ರತಿಯೊಂದು ತಳಿಯ ಗುಣಮಟ್ಟ, ಗಾತ್ರ ಮತ್ತು ಮೂಲವನ್ನು ಪ್ರತಿಬಿಂಬಿಸುತ್ತವೆ, ಸ್ಥಳೀಯ ಮತ್ತು ಆಂಧ್ರ ಮೂಲದ ಕುರಿಗಳು ಸಾಮಾನ್ಯವಾಗಿ ಕಡಿಮೆ ಬೆಲೆಯಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

## 150 ವರ್ಷದ ಬಳಿಕ ಬೆಂಗಳೂರಿನಲ್ಲಿ ಬೃಹತ್ ಜೈವಿಕ ಉದ್ಯಾನವನ ನಿರ್ಮಾಣ



• ಉದಯವಾಹಿನಿ, ಬೆಂಗಳೂರು

ಯಲಹಂಕ ಬಳಿಯ ಮಾದಪ್ಪನಹಳ್ಳಿಯಲ್ಲಿರುವ 153.39 ಎಕ್ರೆ ಅರಣ್ಯ ಭೂಮಿಯಲ್ಲಿ ಬೃಹತ್ ಜೈವಿಕ ಉದ್ಯಾನವನ ಅಭಿವೃದ್ಧಿಪಡಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು. ಮಾದಪ್ಪನಹಳ್ಳಿ ನೆಡುತೋಪಿನಲ್ಲಿ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ ವಶದಲ್ಲಿರುವ ಭೂಮಿಯನ್ನು ಅರಣ್ಯ ಇಲಾಖೆಗೆ ವಿಧ್ಯುಕ್ತವಾಗಿ ಹಿಂಪಡೆಯಲು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು. ಈ ಉದ್ಯಾನ ಮುಂಬರುವ ದಿನಗಳಲ್ಲಿ ಉತ್ತರ ಬೆಂಗಳೂರಿಗೆ ಮಹತ್ವದ ತಾಣವಾಗಲಿದೆ ಎಂದರು.

ಇಲ್ಲಿ ಕೆಎಫ್‌ಡಿಸಿ ನೀಲಗಿರಿ ಮರ ಬೆಳೆಸಿದ್ದು, ಈ ಎಲ್ಲಾ ಮರಗಳನ್ನೂ ತೆರವು ಮಾಡಿ, ಸ್ಥಳೀಯ ಪ್ರಭೇದದ ಬಿಲ್ವ, ಮಹಾಬಿಲ್ವ, ಹೊನ್ನೆ, ನೇರಳೆ, ಮತ್ತಿ, ಆಲ, ಅರಳಿಯ ಜೊತೆಗೆ ಪಶ್ಚಿಮಘಟ್ಟದಲ್ಲಿ ಬೆಳೆಯುವ ವಿವಿಧ ಪ್ರಭೇದದ ಸಸ್ಯಗಳನ್ನೂ ಬೆಳೆಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಪ್ರಸ್ತುತ ಈ 154 ಎಕ್ರೆ ಪ್ರದೇಶದಲ್ಲಿ ನೀಲಗಿರಿಯ ಜೊತೆಗೆ ಹೊನ್ನೆ, ಬೀಟೆ, ಜಾಲಿ, ಕಗ್ಗಲಿ, ಎಲಚಿ, ಚಿಗರೆ, ಹೊಳೆಮತ್ತಿ, ಮತ್ತಿ, ಕರಿಮತ್ತಿ ಮೊದಲಾದ 800 ಮರಗಳಿದ್ದು, ಅವುಗಳನ್ನು ಸಂರಕ್ಷಿಸಲಾಗುವುದು ಎಂದರು. ಎಲ್ಲಾ 154 ಎಕ್ರೆ ಅರಣ್ಯ ಭೂಮಿಗೂ ಕಾಂಪೌಂಡ್ ಹಾಕಲಾಗಿದ್ದು, ಒತ್ತುವರಿ ಆಗದಂತೆ ರಕ್ಷಿಸಲಾಗಿದೆ. ಈ ಪ್ರದೇಶದಲ್ಲಿ ಇಂದಿರಾಗಾಂಧೀ ಜೈವಿಕ ಉದ್ಯಾನವನ, ವಿಶ್ವಗುರು ಬಸವಣ್ಣ ದಿವ್ಯೌಷಧೀಯ ಸಸ್ಯವನ, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಪಕ್ಷಿ ಲೋಕ, ನಾಡಪ್ರಭು ಕೆಂಪೇಗೌಡ ಕಿರು ಮೃಗಾಲಯ ಹಾಗೂ ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನವನ ನಿರ್ಮಾಣ ಮಾಡಲು ಸಲಹೆ ಬಂದಿದೆ. ಈ ಬಗ್ಗೆ ಯೋಜನೆ ರೂಪಿಸಲಾಗುವುದು ಎಂದು ಹೇಳಿದರು.

# ರಸ್ತೆ ಹಂಪ್‌ಗಳ ಬಗ್ಗೆ ಬಿಬಿಎಂಪಿ, ಸಂಚಾರಿ ಪೊಲೀಸ್ ಠಾಣೆಗೆ ದೂರು

### ಬೆಂಗಳೂರು ನಗರದಲ್ಲಿ 427 ಅವೈಜ್ಞಾನಿಕ ರಸ್ತೆ ಹಂಪ್ಸ್‌ಗಳನ್ನು ಗುರುತಿಸಲಾಗಿದೆ, ಇದು ಅಪಘಾತಗಳಿಗೆ ಕಾರಣವಾಗುತ್ತಿದೆ

• ಉದಯವಾಹಿನಿ, ಬೆಂಗಳೂರು

ಇತ್ತೀಚೆಗಷ್ಟೇ ಬೆಂಗಳೂರಿನ ಕಳಪೆ ರಸ್ತೆಯಿಂದ ಆರೋಗ್ಯ ಹದಗೆಟ್ಟಿದೆ ಎಂದು 50 ಲಕ್ಷ ರೂಪಾಯಿ ಪರಿಹಾರ ಕೇಳಿ ಬಿಬಿಎಂಪಿಗೆ ಲೀಗಲ್ ನೋಟಿಸ್ ನೀಡಿದ ದಿವ್ಯಾ ಕಿರಣ್ ಎಂಬುವವರ ಸುದ್ದಿ ಭಾರೀ ವೈರಲ್ ಆಗಿತ್ತು. ಅಸಲಿಗೆ ಬೆಂಗಳೂರು ರಸ್ತೆ ಗುಂಡಿಗಳು, ಮ್ಯಾನ್‌ಹೋಲ್‌ಗಳು ಟ್ರಾಫಿಕ್ ಸಮಸ್ಯೆಗಳು ಅಷ್ಟೇ ಅಲ್ಲದೆ ಅವೈಜ್ಞಾನಿಕವಾಗಿ ಹಾಕಿರುವ ರಸ್ತೆಗುಂಡಿಗಳಿಂದ ಭಾರೀ ಸಮಸ್ಯೆಗಳು ಉಂಟಾಗ್ತಿವೆ.

ವಾಹನಗಳ ವೇಗ ನಿಯಂತ್ರಣದ ಜತೆಗೆ ರಸ್ತೆ ಅಪಘಾತ ತಪ್ಪಿಸಲೆಂದು ನಗರದ ಎಲ್ಲಾ ರಸ್ತೆಗಳ ಅಲ್ಲಲ್ಲಿ ರಸ್ತೆಉಬ್ಬು ಅಳವಡಿಸಲಾಗಿದೆ. ಆದರೆ ಇವುಗಳನ್ನು ನಿಯಮ ಪ್ರಕಾರ ನಿರ್ಮಿಸದೇ ರಸ್ತೆ ಉಬ್ಬುಗಳಿಂದಲೇ ಅದೆಷ್ಟೋ ಜನ ಪ್ರಾಣ ಕಳೆದುಕೊಂಡಿದ್ದಾರೆ.

ಭಾರೀ ತುರ್ತಲ್ಲಿ ವಾಹನ ಚಲಾಯಿಸುವಾಗಲೋ, ಬೀದಿದೀಪ ಕೆಟ್ಟು ಹೋದ ರಸ್ತೆಗಳಲ್ಲಿ, ಕೆಲವೇ ಕ್ಷಣ ರಸ್ತೆಯಿಂದ ದೃಷ್ಟಿ ತೆಗೆದು ಮೈಮರೆತರೂ ಏಕಾಏಕಿ ನಮ್ಮ ವಾಹಗಳನ್ನ ಹಾರಿಸಿಬಿಡತ್ತೆ ಈ ಅವೈಜ್ಞಾನಿಕ ಹಂಪ್ಸ್‌ಗಳು. ವಾಪಸ್ ಬ್ಯಾಲೆನ್ಸ್ ಮಾಡಿ ಹಂಪ್ಸ್ ಇಳಿಯುವಾಗ ಬೈಕ್ ಇಳಿಸಿದ್ರೆನೋ ಸರಿ ಆದ್ರೆ ಸ್ವಲ್ಪ ಬ್ಯಾಲೆನ್ಸ್ ತಪ್ಪಿದ್ರೂ ಆಕ್ಸಿಡೆಂಟ್ ಆಗೋದು ಪಕ್ಕ. ಅಸಲಿಗೆ ಈ ರೀತಿ ಅವೈಜ್ಞಾನಿಕ ಹಂಪ್ಸ್‌ಗಳನ್ನು ಬಿಬಿಎಂಪಿ ಹಾಕಿರೋದಿಲ್ಲ ರಸ್ತೆ ಡಾಂಬರೀಕರಣ ಮಾಡೋವಾಗ ಜನರೇ ನಮ್ಮ ಮನೆ ಮುಂದೆಯೂ ಹಂಪ್ಸ್ ಹಾಕಿ, ಅಂಗಡಿ ಮುಂದೆ ಜನ ನಿಲ್ಲುವಂತಾಗ್ಲಿ ಎಂದು ಅಲ್ಲೊಂದು ಹಂಪ್ಸ್, ಹೀಗೆ ಅಲ್ಲಲ್ಲಿ ಒತ್ತಡ ಹಾಕಿ ರಸ್ತೆ ಉಬ್ಬುಗಳನ್ನು ಹಾಕಿಸಿಕೊಂಡಿರ್ತಾರೆ. ಇವೆಲ್ಲವೂ ಅಕ್ರಮವಾಗಿ ಸ್ಥಳೀಯ ನಿವಾಸಿಗಳು ಸ್ಥಾಪಿಸಿರುವ ಹಂಪ್‌ಗಳಾಗಿವೆ.



**ರಸ್ತೆ ಕಾಂಗ್ರೆಸ್ ಐಆರ್‌ಸಿ ನಿಗದಿ**

**ರಸ್ತೆ ಉಬ್ಬು ನಿರ್ಮಾಣಕ್ಕೆ ಎಲ್ಲೆಲ್ಲಿ ಅವಕಾಶ?**

**ಐಆರ್‌ಸಿ ನಿಗದಿಪಡಿಸಿದ ಮಾನದಂಡದ ಪ್ರಕಾರ ಚಿಕ್ಕ ರಸ್ತೆಗಳಲ್ಲಿ ಹಂಪ್ ನಿರ್ಮಾಣ ಮಾಡೋದಾದ್ರೆ, ಪರಸ್ಪರ ಉಖಾಮುಖಿಯಾಗುವ ಚಿಕ್ಕ ರಸ್ತೆಗಳಲ್ಲಿ, ಅಥವಾ ಕಡಿಮೆ ವಾಹನ ಓಡಾಟದ ರಸ್ತೆಯಿಂದ ನೇರವಾಗಿ ಮುಖ್ಯರಸ್ತೆಗೆ ವಿಲೀನವಾಗುವ ರಸ್ತೆಗಳಲ್ಲಿ ಹಂಪ್ ಹಾಕಬಹುದಾಗಿದೆ. ಅಲ್ಲದೆ ಜನವಸತಿ ಪ್ರದೇಶದಲ್ಲಿರುವ ಆಸ್ಪತ್ರೆ ಹಾಗೂ ಶೈಕ್ಷಣಿಕ ಸಂಸ್ಥೆಗಳ ಪ್ರದೇಶಗಳಲ್ಲಿ ವಾಹನಗಳ ವೇಗದಿಂದ ಅಪಘಾತ ಸಂಭವಿಸಬಹುದಾದ ಪ್ರದೇಶಗಳಲ್ಲಿ ಉಬ್ಬು ನಿರ್ಮಾಣ ಮಾಡಬಹುದು. ಇನ್ನು ಚಿಕ್ಕ ಹಾಗೂ ಹಳೆಯ ಸೇತುವೆಗೆ ಸಂಪರ್ಕ ಹೊಂದುವ ರಸ್ತೆಗಳಲ್ಲಿ ರೈಲ್ವೆ ಲೆವಲ್ ಕ್ರಾಸಿಂಗ್ ಹತ್ತಿರ, ತೀವ್ರ ತಿರುವು ಇರುವ ಮುಂದಿನ ರಸ್ತೆ ಸರಿಯಾಗಿ ಕಾಣಿಸದಿರುವ ರಸ್ತೆಗಳಲ್ಲಿ ಹಾಗೂ ಗಂಟೆಗೆ 25 ಕಿ.ಮೀ. ವೇಗವಾಗಿ ಚಲಿಸಬಹುದಾದ ರಸ್ತೆಗಳಲ್ಲಿ ಮಾತ್ರವೇ ಉಬ್ಬುಗಳನ್ನು ನಿರ್ಮಿಸಬಹುದು.**

**ರಸ್ತೆ ಹಂಪ್‌ಗಳು ನಿಯಮ ಪ್ರಕಾರ ಹೇಗಿರಬೇಕು:** ಬೆಂಗಳೂರಲ್ಲಿ ಬಿಬಿಎಂಪಿ ಹಾಗೂ ಬಿಡಿಎ ಸ್ಥಳೀಯ ಸಂಸ್ಥೆಗಳು ರಸ್ತೆ ನಿರ್ಮಿಸುತ್ತವೆ. ಇವರೆಲ್ಲರೂ ಫಾಲೋ ಮಾಡೋದು ಇಂಡಿಯನ್ ರೋಡ್ ಕಾಂಗ್ರೆಸ್ (ಐಆರ್‌ಸಿ) ನಿಗದಿಪಡಿಸಿದ ಮಾನದಂಡಗಳನ್ನು. ಈ ನಿಯಮಗಳ ಪ್ರಕಾರವೇ ರಸ್ತೆ ಉಬ್ಬುಗಳನ್ನು ನಿರ್ಮಿಸಬೇಕಾಗುತ್ತದೆ. ಉಬ್ಬುಗಳು 17 ಮೀಟರ್ ಅಗಲ, 3.7 ಮಿಟರ್ ಉದ್ದ ಹಾಗೂ 0.10 ಮೀಟರ್ ಎತ್ತರ ಹಾಗೂ ವಾಹನಗಳ ಚಕ್ರಗಳ ಅಗಲಕ್ಕಿಂತ ಹೆಚ್ಚಿಗೆ ಇರಬೇಕು ಎಂಬ ನಿಯಮ ಇದೆ. ಅಲ್ಲದೆ ಈ ಉಬ್ಬುಗಳ ಮೇಲೆ ಕಪ್ಪು, ಬಿಳಿ ಹಾಗೂ ಕತ್ತಲಿನಲ್ಲಿ ಸ್ವಯಂ ಪ್ರತಿಫಲನಗೊಳ್ಳುವ ಬಣ್ಣ ಬಳಸಿ ಪಟ್ಟಿ ಬಳಿದಿರಬೇಕು.

ರಾತ್ರಿಯಲ್ಲಿ ಸ್ಪಷ್ಟವಾಗಿ ಕಾಣಿಸುವ ಸಲುವಾಗಿ ಕ್ಯಾಟ್ ಐಗಳು ಇರಬೇಕು ಎಂಬ ನಿಯಮ ಇದೆ. ಇಷ್ಟೇ ಅಲ್ಲದೆ ರೋಡ್ ಹಂಪ್ ಹಾಕಿರುವ 40 ಮೀಟರ್ ಮೊದಲೇ ಮುಂದೆ ರಸ್ತೆ ಉಬ್ಬು ಇದೆ ಎಂಬ ಎಚ್ಚರಿಕೆಯ ಫಲಕ ರಸ್ತೆ ಬದಿಯಲ್ಲಿ ಇರಬೇಕು.

## ಸಮಿತಿ ವರದಿ ಆಧರಿಸಿಯೇ ನಿರ್ಮಾಣ: ಪರಮೇಶ್ವರ್

• ಉದಯವಾಹಿನಿ, ಬೆಂಗಳೂರು

ತಾಂತ್ರಿಕ ಸಮಿತಿ ವರದಿ ಆಧರಿಸಿ ಹೇಮಾವತಿ ಕೆನಾಲ್ ನಿರ್ಮಾಣದ ಕೆಲಸ ಪ್ರಾರಂಭ ಮಾಡಿದ್ದೇವೆ. ಈಗ ಬಿಜೆಪಿ ಶಾಸಕರು ಗಲಾಟೆ ಮಾಡಿಸುತ್ತಿದ್ದಾರೆ ಎಂದು ಗೃಹ ಸಚಿವ ಪರಮೇಶ್ವರ್ ಆರೋಪ ಮಾಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು ಹೇಮಾವತಿ ಕೆನಾಲ್ ಮಾಡುವುದಕ್ಕೆ ತಾಂತ್ರಿಕ ಸಮಿತಿ ರಚನೆ ಮಾಡಿ ವರದಿ ಕೇಳಿದ್ದೆವು. ಯೋಜನೆ ಮಾಡಿ ಯಾವುದೇ ತೊಂದರೆ ಇಲ್ಲ ಎಂದು ವರದಿ ಹೇಳಿತ್ತು.

ವರದಿ ಮುಂದಿಟ್ಟುಕೊಂಡು ಕೆಲಸ ಆರಂಭ ಮಾಡಲಾಗಿದೆ. ಈಗ ಬಿಜೆಪಿ ಶಾಸಕರು ಪ್ರತಿಭಟನೆ ಮಾಡಿಸಿದ್ದಾರೆ ಎಂದು ಆರೋಪಿಸಿದರು. ಈಗ ನಾನು ತುಮಕೂರಿಗೆ ಹೋಗುತ್ತಿದ್ದೇನೆ. ಅಧಿಕಾರಿಗಳ ಸಭೆ ಕರೆದು ಚರ್ಚೆ ಮಾಡುತ್ತೇನೆ. ಯಾವುದೇ ಸಮಸ್ಯೆ ಇಲ್ಲದೇ ಕೆಲಸ ಮುಂದುವರಿಸುತ್ತೇವೆ ಎಂದು ತಿಳಿಸಿದರು.

ಕೆನಾಲ್ ಯೋಜನೆ ವಿರುದ್ಧ ಪ್ರತಿಭಟನೆ ಮಾಡಿದ ಸ್ವಾಮೀಜಿಗಳ ಮೇಲೆ ಎಫ್‌ಐಆರ್ ದಾಖಲು ಮಾಡಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದಕ್ಕಾಗಿಯೇ ಈಗ ತುಮಕೂರಿಗೆ ಹೊರಟಿದ್ದೇನೆ. ಅಲ್ಲಿ ಸಭೆ ನಡೆಸಿ ಮುಂದಿನ ತೀರ್ಮಾನ ಮಾಡುತ್ತೇವೆ ಎಂದರು.



ಉದಯವಾಹಿನಿ ಚಿತ್ರ

ತುಮಕೂರಿನ ತರಕಾರಿ ಮಾಗಡಿಯಲ್ಲಿ ಮಾರಾಟ ಮಾಡಲು ಬಿಡಲ್ಲ ಎಂಬ ಕಾಂಗ್ರೆಸ್ ಶಾಸಕರ ಹೇಳಿಕೆಗೆ ಪ್ರತಿಕ್ರಿಯಿಸಿ, ಒಬ್ಬೊಬ್ಬ ಶಾಸಕರು ಒಂದೊಂದು ರೀತಿ ಮಾತನಾಡುತ್ತಿದ್ದಾರೆ. ಆ ರೀತಿಯಲ್ಲಿ ಯಾರೂ ಮಾತನಾಡಬಾರದು. ಎಲ್ಲಾ ಶಾಸಕರು ಸಂಯಮದಿಂದ ಹೋಗಬೇಕು ಎಂದು ಹೇಳಿದರು.

## 8 ಜ್ಞಾನಪೀಠ, 1 ಬೂಕರ್ ಪ್ರಶಸ್ತಿ, ಇದು ಕನ್ನಡದ ತಾಕತ್ತು

• ಉದಯವಾಹಿನಿ, ಬೆಂಗಳೂರು

ಕನ್ನಡ ಮತ್ತು ಕನ್ನಡಿಗರನ್ನು ಜನರನ್ನು ತಪ್ಪಾಗಿ ಅರ್ಥಮಾಡಿಕೊಂಡಿದ್ದಾರೆ ಎಂದು ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ಹೇಳಿದ್ದಾರೆ. ರಾಜ್ಯ ಸರ್ಕಾರ ವಿಧಾನಸೌಧದಲ್ಲಿ ಆಯೋಜಿಸಿದ್ದ ಅವರ ಸನ್ಮಾನ ಸಭೆಯಲ್ಲಿ ಮಾತನಾಡಿದ ಮುಷ್ತಾಕ್ ಅವರು, ಕರ್ನಾಟಕದಲ್ಲಿ ಇತರ ಭಾಷೆಗಳ ಬಗ್ಗೆ ಅಸಹಿಷ್ಣುತೆ ಏಕೆ ಇದೆ ಎಂದು ರಾಷ್ಟ್ರೀಯ ಮಾಧ್ಯಮಗಳು ತಮ್ಮನ್ನು ಆಗಾಗ್ಗೆ ಕೇಳುತ್ತವೆ. ಅದಕ್ಕೆ ನಾನು ಕನ್ನಡದ ಬಗ್ಗೆ ನಿಮ್ಮ ತಿಳುವಳಿಕೆ ತಪ್ಪು.

ಕನ್ನಡದಷ್ಟು ಸಹಿಷ್ಣು ಭಾಷೆ ಇನ್ನೊಂದಿಲ್ಲ. ಇದು ಇತರ ಅನೇಕರಿಗೆ ವೇದಿಕೆಯನ್ನು ನೀಡಿದ ಭಾಷೆ. ಎಂಟು ಜ್ಞಾನಪೀಠ ಪ್ರಶಸ್ತಿಗಳು ಮತ್ತು ಒಂದು ಬೂಕರ್ ಪ್ರಶಸ್ತಿಯನ್ನು ಹೊಂದಿರುವ ಹೆಗ್ಗಳಿಕೆಯನ್ನು ಕನ್ನಡ ಭಾಷೆ ಹೊಂದಿದೆ ಎಂದು ಮುಷ್ತಾಕ್ ಹೇಳಿದರು.



**ತಮಿಳಿನಿಂದ ಕನ್ನಡ ಹುಟ್ಟಿತು ಎಂದು ನಟ ಕಮಲ್ ಹಾಸನ್ ಹೇಳಿಕೆಗೆ ರಾಜ್ಯದಲ್ಲಿ ಆಕ್ರೋಶ ಭುಗಿಲೆದ್ದಿದೆ. ಕಮಲ್ ಅಭಿನಯದ ಥಗ್ ಲೈಫ್ ಚಿತ್ರವನ್ನು ನಿಷೇಧಿಸಬೇಕು ಎಂದು ಕನ್ನಡಪರ ಸಂಘಟನೆಗಳು, ಬಿಜೆಪಿ ಒತ್ತಾಯಿಸುತ್ತಿವೆ. ಈ ಮಧ್ಯೆ ಕನ್ನಡದ ಗರಿಮೆಯನ್ನು ತಿಳಿಸುವ ಮೂಲಕ ಬಾನು ಮುಷ್ತಾಕ್ ಅವರು ಕಮಲ್ ಹಾಸನ್‌ಗೆ ಪರೋಕ್ಷವಾಗಿ ತಿರುಗೇಟು ನೀಡಿದ್ದಾರೆ.**

**ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ತಮ್ಮ ಕತೆಗಳ ಮೂಲಕ ಮತ್ತು ಅನುವಾದದ ಮೂಲಕ ಕನ್ನಡಕ್ಕೆ ಕೀರ್ತಿ ತಂದ ಬಾನು ಮುಷ್ತಾಕ್, ದೀಪಾ ಬಾಸ್ತಿ ಅವರಿಗೆ ತಲಾ 10 ಲಕ್ಷ ಪುರಸ್ಕಾರ ನೀಡಲಾಗುವುದು ಎಂದು ಘೋಷಿಸಿದರು. ಮುಷ್ತಾಕ್ ಅವರ ಪುಸ್ತಕಗಳನ್ನು ಕರ್ನಾಟಕದ ಎಲ್ಲಾ ಸರ್ಕಾರಿ ಗ್ರಂಥಾಲಯಗಳಲ್ಲಿ ಲಭ್ಯವಾಗುವಂತೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.**

## 108 ಅಡಿ ಎತ್ತರದ ವಿಷ್ಣು ವಿಗ್ರಹ: ಬೆಂಗಳೂರಿನ ಈಜಿಪುರದಲ್ಲಿ ಪ್ರತಿಷ್ಠಾಪನೆ

• ಉದಯವಾಹಿನಿ, ಬೆಂಗಳೂರು

ವಿಶ್ವದಲ್ಲೇ ಅತಿ ಎತ್ತರದ ವಿಷ್ಣುವಿನ 108 ಅಡಿ ಎತ್ತರದ ಏಕಶಿಲಾ ಪ್ರತಿಮೆಯನ್ನು ಈಜಿಪುರದಲ್ಲಿ ಪ್ರಾಣ ಪ್ರತಿಷ್ಠೆ ಕಾರ್ಯಕ್ರಮ ನೆರವೇರುತ್ತಿದೆ. ತಮಿಳುನಾಡಿನ ತಿರುವಣ್ಣಾಮಲೈನಿಂದ ಗಣಿಗಾರಿಕೆ ಮಾಡಿದ 420 ಟನ್ ತೂಕದ ಏಕಶಿಲಾ ಕಲ್ಲನ್ನು 2019 ರಲ್ಲಿ 240 ಚಕ್ರಗಳ ಟ್ರಕ್‌ನಲ್ಲಿ ಆರು ತಿಂಗಳ ಅವಧಿಯಲ್ಲಿ ನಗರಕ್ಕೆ ತರಲಾಗಿತ್ತು.

ಏಕಶಿಲಾ ಪ್ರತಿಮೆಯ ಹಿಂದಿನ ವ್ಯಕ್ತಿ ನಿವೃತ್ತ ಸರ್ಕಾರಿ ವೈದ್ಯ ಡಾ. ಬಿ. ಸದಾನಂದ, ಅವರು 2010 ರಲ್ಲಿ ಈ ಕೆಲಸ ಆರಂಭಿಸಿದ್ದರು. ಈ ಪ್ರತಿಮೆಯು ಆಧ್ಯಾತ್ಮಿಕ ಏಕತೆ, ಸಾಂಸ್ಕೃತಿಕ ಪರಂಪರೆಯ ಸಂಕೇತವಾಗಿ ಕಾರ್ಯನಿರ್ವಹಿಸಬೇಕೆಂದು ವೈದ್ಯರು ಬಯಸುತ್ತಾರೆ. ಈ ಅವತಾರದಲ್ಲಿ ಅತ್ಯಂತ ಎತ್ತರ ಪ್ರತಿಮೆ ಎಂದು ಹೇಳಲಾಗುವ ವಿಶ್ವರೂಪ ಪ್ರತಿಮೆಯ ಕೆಲಸ 2010 ರಲ್ಲಿ ಪ್ರಾರಂಭವಾಯಿತು, ಮೊದಲ ಹಂತದಲ್ಲಿ ನಿರ್ಮಾಣ ಪೂರ್ವ ಕೆಲಸ ಮತ್ತು ಮುಖ್ಯ ದೇವರು ಮತ್ತು ಆದಿಶೇಷನ ಶಿಲ್ಪಕಲೆ ಸೇರಿದೆ. ಶಿಲ್ಪಕಲೆಯ ಕೆಲಸ ಪೂರ್ಣಗೊಳಿಸುವಿಕೆ, ಹೊಳಪು ನೀಡುವಿಕೆ, ಕ್ರೇನ್ ಕೆಲಸ, ಪ್ರತಿಮೆಯ ಕಟ್ಟಡ ಚೌಕಟ್ಟು ಮತ್ತು ಇತರ ಸಿವಿಲ್ ಕೆಲಸಗಳನ್ನು ಒಳಗೊಂಡಂತೆ ಪ್ರತಿಮೆಯನ್ನು ಪೂರ್ಣಗೊಳಿಸಲು ಒಟ್ಟು 2.60 ಕೋಟಿ ರೂಪಾಯಿ ವೆಚ್ಚವಾಗಿದೆ.



ಉದಯವಾಹಿನಿ ಚಿತ್ರ

ಈಜಿಪುರದಲ್ಲಿ ಭಕ್ತರು ವಿಷ್ಣುವಿನ ವಿರಾಟ ಸ್ವರೂಪವನ್ನು ವೀಕ್ಷಿಸಲು ಧಾವಿಸುತ್ತಿದ್ದಾರೆ. ಮೊನ್ನೆ ಶನಿವಾರದಿಂದ ಹೋಮ-ಹವನಗಳು ಆರಂಭಗೊಂಡವು. ಮುಖ್ಯ ಪ್ರಾಣ ಪ್ರತಿಷ್ಠಾ ಹೋಮ ಮತ್ತು ಮಹಾಕುಂಬಾಭಿಷೇಕ (ಪವಿತ್ರೀಕರಣ ಸಮಾರಂಭ) ಇಂದು ನಡೆಯುತ್ತಿದೆ. ಉಡುಪಿಯ ಪೇಜಾವರ ಮಠದ ವಿಶ್ವಪ್ರಸನ್ನ ಮತ್ತು ಮೈಸೂರಿನ ಪರಕಾಲ ಮಠದ ಅಭಿನವ ವಾಗೀಶ್ ಅವರು ಈ ಸಮಾರಂಭದಲ್ಲಿ ಭಾಗವಹಿಸುತ್ತಿದ್ದಾರೆ.

ಈ ಶಿಲ್ಪಕಲೆಯು ಈ ರೀತಿ ಕೆತ್ತನೆಯಾಗಿ ಪ್ರಾಣ ಪ್ರತಿಷ್ಠೆಯಾಗುತ್ತಿರುವುದು ಮೊದಲನೆಯದು ಮತ್ತು ಇದುವರೆಗೆ ಸ್ಥಾಪಿಸಲಾದ ಇತರ ರೀತಿಯ ವಿಷ್ಣು ಪ್ರತಿಮೆಗಳಿಗಿಂತ ಭಿನ್ನವಾಗಿದೆ. ಪರಮಾತ್ಮನ ಶಿವ ಕೇಶವ ಸ್ವರೂಪಂ ಮಹಾ ವಿಷ್ಣು, ಶಿವ, ಬ್ರಹ್ಮ, ಸ್ಕಂದ, ವಿನಾಯಕ, ನರಸಿಂಹ, ಆಂಜನೇಯ, ಗರುಡ, ಅಗ್ನಿ ಮತ್ತು ಋಷಿ ಮುನಿಗಳನ್ನು ಪ್ರತಿನಿಧಿಸುವ ಹಲವಾರು ತೋಳುಗಳು ಮತ್ತು ತಲೆಗಳನ್ನು ಹೊಂದಿದೆ ಎಂದು ಪ್ರಾಜೆಕ್ಟ್‌ನಲ್ಲಿ ಭಾಗಿಯಾಗಿದ್ದವರು ಹೇಳಿದರು.

ಕೋದಂಡ ರಾಮಸ್ವಾಮಿ ದೇವಸ್ಥಾನ ಚಾರಿಟೇಬಲ್ ಟ್ರಸ್ಟ್ ಈ ಯೋಜನೆಯ ಮೇಲ್ವಿಚಾರಣೆಯನ್ನು ವಹಿಸಿಕೊಂಡಿತ್ತು. ಈ ಪ್ರತಿಮೆ ಹಿಂದೂ ಧರ್ಮದ ಅನುಯಾಯಿಗಳಲ್ಲಿ ಏಕತೆಯನ್ನು ಸೃಷ್ಟಿಸಲು ಸಂಕೇತವಾಗಿದೆ ಎಂದರು.

## ಕಾಮಗಾರಿ ಶೀಘ್ರಗತಿಯಲ್ಲಿ ಪೂರ್ಣ: ಎಸ್.ಸುರೇಶ್ ಕುಮಾರ್

• ಉದಯವಾಹಿನಿ, ಬೆಂಗಳೂರು

ರಾಜಾಜಿನಗರ ವಿಧಾನಸಭಾ ಕ್ಷೇತ್ರ: ನವರಂಗ್ ವೃತ್ತದಿಂದ ರಾಜಾಜಿನಗರ ಪ್ರವೇಶ ದ್ವಾರದವರಗೆ ವೈಟ್ ಟಾಪಿಂಗ್ ರಸ್ತೆ ನಿರ್ಮಾಣ ಕಾಮಗಾರಿ ಪರಿಶೀಲನೆ. ಮಾಜಿ ಶಿಕ್ಷಣ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರು, ಬೆಸ್ಕಾಂ, ಬಿಬಿಎಂಪಿ ಜಲಮಂಡಳಿ ಹಾಗೂ ಸಂಚಾರಿ ಪೊಲೀಸ್ ಅಧಿಕಾರಿಗಳ ಜೊತೆಯಲ್ಲಿ ಕಾಮಗಾರಿಗಳ ಪರಿಶೀಲನೆ ಮಾಡಿದರು. ಇದೇ ಸಂದರ್ಭದಲ್ಲಿ ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಸರಿ ಸುಮಾರು 2.2 ಕಿಲೋ ಮೀಟರ್ ಉದ್ದದ ವೈಟ್ ಟಾಪಿಂಗ್ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ.

ಕಾಮಗಾರಿ ರಸ್ತೆ ಮುಗಿದ ಮೇಲೆ ರಸ್ತೆ ಅಗೆಯುವ ಪ್ರಮೇಯ ಬರಬಾರದು ಅದರಿಂದ ಬಿಬಿಎಂಪಿ, ಬೆಸ್ಕಾಂ, ಜಲಮಂಡಳಿ, ಸಂಚಾರ ಪೊಲೀಸ್ ವಿಭಾಗದ ಜೊತೆಯಲ್ಲಿ ಸಮನ್ವಯ ಸಾಧಿಸಿ ಕಾಮಗಾರಿಯನ್ನು ಶರವೇಗದಲ್ಲಿ ಮುಗಿಸಲು ಕ್ರಮ ಕೈಗೊಳ್ಳಲಾಗಿದೆ. ಸರಿ ಸುಮಾರು 35ಕೋಟಿ ರೂಪಾಯಿ ವೆಚ್ಚ ಅದರಲ್ಲಿ 27ಕೋಟಿ ರೂಪಾಯಿ ರಸ್ತೆ ನಿರ್ಮಾಣ 7ಕೋಟಿ ರೂಪಾಯಿ ಜಲಮಂಡಳಿ, ಬೆಸ್ಕಾಂ ಸಂಚಾರ ವಿಭಾಗಕ್ಕೆ ವೆಚ್ಚವಾಗಲಿದೆ. ನವರಂಗ್ ವೃತ್ತದಿಂದ ರಾಜಾಜಿನಗರ ಪ್ರವೇಶದ್ವಾರ ಸಾವಿರಾರು ವಾಹನ ಸಂಚಾರಿ ಮಾಡುತ್ತದೆ, ಸಂಚಾರಕ್ಕೆ ಅಡಚಣೆಯಾಗದಂತೆ ಕಾಮಗಾರಿ ಮುಗಿಸಲು ಚರ್ಚಿಸಲಾಗಿದೆ. ರಾಜಾಜಿನಗರ 50ನೇ ಅಡ್ಡರಸ್ತೆ ಹೈಟೆಕ್ ರಸ್ತೆ ನಿರ್ಮಾಣ ಕಾಮಗಾರಿ ಭರದಿಂದ ಸಾಗಿದೆ, ಮಳೆ ನಿಂತ ನಂತರ ಡಾಂಬರೀಕರಣ ಕಾಮಗಾರಿ ಮಾಡಲಾವುದು ಎಂದು ಹೇಳಿದರು. ಮಂಡಲದ ಅಧ್ಯಕ್ಷರಾದ ಸುದರ್ಶನ್, ಬಿಜೆಪಿ ಮುಖಂಡರುಗಳಾದ ಕಾಮಧೇನು ಸುರೇಶ್, ಯಶಸ್ ನಾಯಕ್, ಪ್ರವೀಣ್, ವಿಶ್ವನಾಥ, ಪುಟ್ಟ, ಗೌತಮ್ ರವರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ**


## ಜೂ.8ರವರೆಗೆ ರಾಜ್ಯದಲ್ಲಿ ಸಾಧಾರಣ ಮಳೆ

• ಉದಯವಾಹಿನಿ, ಬೆಂಗಳೂರು

ರಾಜ್ಯಾದ್ಯಂತ ಅಬ್ಬರಿಸಿದ್ದ ಮಳೆ ಇದೀಗ ಕೊಂಚ ಬಿಡುವು ಪಡೆದಿದ್ದು, ಜೂನ್ 8ರವರೆಗೆ ಸಾಧಾರಣ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

ಕಳೆದ ಎರಡು ವಾರದಿಂದ ಕರ್ನಾಟಕದಾದ್ಯಂತ ಭಾರೀ ಮಳೆಯಾದ ಪರಿಣಾಮ ನಾನಾ ಅವಾಂತರ ಸೃಷ್ಟಿಯಾಗಿ ಜನಜೀವನ ಅಸ್ತವ್ಯಸ್ತಗೊಂಡಿತ್ತು. ಇದೀಗ ಜೂ.8ರವರೆಗೂ ಕರ್ನಾಟಕದಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕರ್ನಾಟಕದ ಕರಾವಳಿ, ದಕ್ಷಿಣ ಒಳನಾಡಿನ ಜಿಲ್ಲೆಗ್ಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರ ಒಳನಾಡಿನಲ್ಲಿ ಒಣಹವೆ ಇರಲಿದೆ ಎಂದು ತಿಳಿಸಿದೆ.



ಕ್ಯಾಸಲ್‌ರಾಕ್, ಬಂಟ್ವಾಳ, ಗೇರುಸೊಪ್ಪ, ಕೋಟಾ, ಆಗುಂಬೆ, ಮಂಕಿ, ಕದ್ರಾ, ಮಾಣಿ, ಕುಮಟಾ, ಸಿದ್ದಾಪುರ, ಉಡುಪಿ, ಕಾರವಾರ, ಕಾರ್ಕಳ, ಮೂಡುಬಿದಿರೆ, ಪಣಂಬೂರು, ಕುಂದಾಪುರ, ಮುಲ್ಕಿ, ಪುತ್ತೂರು, ಉಪ್ಪಿನಂಗಡಿ, ಹೊನ್ನಾವರದಲ್ಲಿ ಭಾರೀ ಪ್ರಮಾಣದಲ್ಲಿ ಮಳೆಯಾಗಿದೆ.

# ನಾಯಂಡಹಳ್ಳಿ ಜಂಕ್ಷನ್ ಬಳಿ ಹೆಚ್ಚುವರಿ ಬ್ರಿಡ್ಜ್ ನಿರ್ಮಾಣ

### ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ನಾನಾ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

• ಉದಯವಾಹಿನಿ, ಬೆಂಗಳೂರು

ಹೊರವರ್ತುಲ ರಸ್ತೆಯ ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ ಕೈಗೆತ್ತಿಕೊಂಡಿರುವ ಮೇಲ್ಸೇತುವೆ ಕಾಮಗಾರಿಯನ್ನು ಮುಂದಿನ ಮೂರು ತಿಂಗಳೊಳಗೆ ಪೂರ್ಣಗೊಳಿಸಿ, ವಾಹನ ಸಂಚಾರಕ್ಕೆ ಮುಕ್ತಗೊಳಿಸಬೇಕು, ಎಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅಧಿಕಾರಿಗಳಿಗೆ ತಾಕೀತು ಮಾಡಿದರು. ರಾಜರಾಜೇಶ್ವರಿನಗರ ವಲಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ನಾನಾ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ ನಡೆಸಿದ ಅವರು, ಹೊಸಕೆರೆಹಳ್ಳಿ ಜಂಕ್ಷನ್‌ನಲ್ಲಿ 500 ಮೀಟರ್ ಉದ್ದದ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದ್ದು, ಶೇ.75ರಷ್ಟು ಪೂರ್ಣಗೊಂಡಿದೆ. ಒಂದು ಬದಿಯಲ್ಲಿ ಡೌನ್ ರ್‍ಯಾಂಪ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ, ಎಂದು ತಿಳಿಸಿದರು. ಸರ್ವೀಸ್ ರಸ್ತೆಯನ್ನು ವಿಸ್ತರಿಸುವ ಸಂಬಂಧ ಪ್ರಸ್ತಾವನೆ ಸಲ್ಲಿಕೆಯಾಗಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರಪೂರ್ಣಗೊಳಿಸಿ ಸಂಚಾರ ಪೊಲೀಸ್ ವಿಭಾಗದೊಂದಿಗೆ ಸಮನ್ವಯ ಸಾಧಿಸಿ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಬೇಕು, ಎಂದು ಸೂಚಿಸಿದರು.



ಉದಯವಾಹಿನಿ ಚಿತ್ರ

**3 ತಿಂಗಳಲ್ಲಿ ಫ್ಲೈ ಓವರ್ ಸಂಚಾರಕ್ಕೆ ಮುಕ್ತ**

**ನಾಯಂಡಹಳ್ಳಿ ಜಂಕ್ಷನ್ ಪರಿಶೀಲನೆ:** ನಾಯಂಡಹಳ್ಳಿ ಜಂಕ್ಷನ್ ಬಳಿಯ ಪಾದಚಾರಿ ಮಾರ್ಗದಲ್ಲಿ ಸುರಿದಿರುವ ಅನುಪಯುಕ್ತ ವಸ್ತುಗಳನ್ನು ತೆಗೆದು ಹಾಕಿ, ಒತ್ತುವರಿ ತೆರವುಗೊಳಿಸಬೇಕು. ಮೇಲ್ಸೇತುವೆ ಕೆಳಭಾಗದಲ್ಲಿ ವಾಹನಗಳ ನಿಲುಗಡೆಯನ್ನು ನಿರ್ಬಂಧಿಸಬೇಕು, ಎಂದು ಹೇಳಿದರು.

ನಾಯಂಡಹಳ್ಳಿ ಜಂಕ್ಷನ್‌ನ ವೃಷಭಾವತಿ ವ್ಯಾಲಿಯ ಮೇಲ್ಭಾಗದಲ್ಲಿ ಹೆಚ್ಚುವರಿಯಾಗಿ ಬ್ರಿಡ್ಜ್‌ವೆಂಟ್ ನಿರ್ಮಿಸಲು ವಿಶ್ವಬ್ಯಾಂಕ್‌ನಿಂದ ಅನುದಾನ ಪಡೆದು ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು.

ಅನುದಾನ ಲಭಿಸಿದ ಕೂಡಲೇ ಟೆಂಡರ್ ಪ್ರಕ್ರಿಯೆ ಅಂತಿಮಗೊಳಿಸಿ, ಕಾಲಮಿತಿಯೊಳಗೆ ಕೆಲಸ ಪೂರ್ಣಗೊಳಿಸಲು ಸಿದ್ಧತೆ ಮಾಡಿಕೊಳ್ಳಲಾಗುವುದು, ಎಂದು ತಿಳಿಸಿದರು.

ವೃಷಭಾವತಿ ವ್ಯಾಲಿಯಲ್ಲಿ ಒಳಚರಂಡಿ ಕೊಳವೆಗಳು ಹಾದು ಹೋಗಿದ್ದು, ಅವು ಸೋರುತ್ತಿವೆ. ತಕ್ಷಣವೇ ಸೋರಿಕೆ ತಡೆಗೆ ಕ್ರಮ ಕೈಗೊಳ್ಳಬೇಕು, ಎಂದು ಜಲಮಂಡಳಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಕೆ.ಆರ್ ಮಾರುಕಟ್ಟೆ ಸುತ್ತಲೂ ಸ್ವಚ್ಛತೆ ಕಾಪಾಡಿ:** ಮಹೇಶ್ವರ್ ರಾವ್. ನಗರದ ಕೆ.ಆರ್. ಮಾರುಕಟ್ಟೆಯ ಸುತ್ತಮುತ್ತಲಿನ ಪ್ರದೇಶ ಹಾಗೂ ರಸ್ತೆಗಳಲ್ಲಿ ಸ್ವಚ್ಛತೆ ಕಾಪಾಡಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೆ.ಆರ್ ಮಾರುಕಟ್ಟೆಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ಕೆ.ಆರ್ ಮಾರುಕಟ್ಟೆ ಸುತ್ತಮುತ್ತಲಿನ ಪ್ರದೇಶಗಳು, ರಸ್ತೆಗಳನ್ನು ಪ್ರೆಶರ್ ಜೆಟ್ಟಿಂಗ್ ಯಂತ್ರಗಳ ಮೂಲಕ ಸ್ವಚ್ಛಗೊಳಿಸಲು ಸೂಚಿಸಿದರು. ಮಾರುಕಟ್ಟೆಯಲ್ಲಿ ಉತ್ಪತ್ತಿ ಆಗುವ ತ್ಯಾಜ್ಯವನ್ನು ಸಮರ್ಕವಾಗಿ ವಿಲೇವಾರಿ ಮಾಡಬೇಕು. ಎಲ್ಲಿಯೂ ತ್ಯಾಜ್ಯ ಬಿಸಾಡದಂತೆ ನೋಡಿಕೊಂಡು ಸದಾ ಸ್ವಚ್ಛತೆಯಿರುವಂತೆ ನೋಡಿಕೊಳ್ಳಲು ಮಾರ್ಷಲ್ ಮೇಲ್ವಿಚಾರಕರಿಗೆ ಸೂಚನೆ ನೀಡಿದರು.

ಮಾರುಕಟ್ಟೆಯಲ್ಲಿ ವ್ಯಾಪಾರ ಮಾಡುತ್ತಿರುವವರ ಸಮೀಕ್ಷೆ ಮಾಡಿ, ಹೆಚ್ಚುವರಿ ಜಾಗ ಆಕ್ರಮಿಸಿಕೊಂಡು ವ್ಯಾಪಾರ ಮಾಡದಂತೆ ಅಗತ್ಯ ಕ್ರಮವಹಿಸಬೇಕು. ಅಂಗಡಿಗಳ ನಡುವಿನ ಅಂತರಕ್ಕಾಗಿ ಮಾಸ್ಟರ್ ಪ್ಲಾನ್ ಮಾಡಲು ಸೂಚಿಸಿದರು.

**ಭೂಸ್ವಾಧೀನ ವಿಳಂಬದಿಂದ ಕೆಲಸ ಸ್ಥಗಿತ**

**ಮೈಸೂರು ರಸ್ತೆಯ ರಾಜರಾಜೇಶ್ವರಿನಗರ ಪ್ರವೇಶ ದ್ವಾರದ ಬಳಿ ಕೈಗೊಂಡಿರುವ ಕಾಮಗಾರಿಗೆ 33 ಸ್ವತ್ತುಗಳನ್ನು ಸ್ವಾಧೀನಪಡಿಸಿಕೊಳ್ಳಬೇಕಿದೆ. ಭೂಸ್ವಾಧೀನ ವಿಳಂಬದಿಂದ ಕಾಮಗಾರಿ ಸ್ಥಗಿತಗೊಂಡಿದೆ. ಆದಷ್ಟು ಬೇಗ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ಕಾಮಗಾರಿ ಕೈಗೊಳ್ಳಬೇಕು. ಈ ಜಾಗದಲ್ಲಿರುವ ರಾಜಕಾಲುವೆಯ ಸರ್ವೇ ಕಾರ್ಯ ಕೈಗೊಂಡು ಒತ್ತುವರಿಯಾಗಿದ್ದರೆ ತೆರವುಗೊಳಿಸಬೇಕು. ಬಿಎಚ್‌ಇಎಲ್ ಜಂಕ್ಷನ್ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು, ಎಂದು ಮಹೇಶ್ವರ ರಾವ್ ಅಧಿಕಾರಿಗಳಿಗೆ ಸೂಚಿಸಿದರು.**

ಅಂತರಾಳದಿಂದ.. EDITORIAL

# ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ: ವಿಳಂಬವಿಲ್ಲದೆ ಭರವಸೆ ಈಡೇರಿಸಿ



ಈ ಕಡತವನ್ನು ಪ್ರಧಾನಿಯವರ ಜೊತೆ ಹಾಗೂ ನೀತಿ ಆಯೋಗದ ಸದಸ್ಯರ ಜೊತೆ ಹಂಚಿಕೊಳ್ಳಲಾಗಿದೆ ಎಂದಿದ್ದಾರೆ. ಬೇಡಿಕೆಗೆ ಬಲ ನೀಡಲು ವಿಧಾನಸಭೆಯ ವಿಶೇಷ ಅಧಿವೇಶನ ಕರೆಯಬೇಕು ಎಂಬ ಸಲಹೆಗೆ ಅವರು ಒಪ್ಪಿಗೆ ಸೂಚಿಸಿಲ್ಲ. ಆದರೆ, ಅವರ ನಿಲುವು ಬಹಳ ಸ್ಪಷ್ಟವಾಗಿದೆ. ಅಬ್ದುಲ್ಲಾ ಅವರು ಮುಖ್ಯಮಂತ್ರಿ ಆದ ನಂತರದಲ್ಲಿ ಈ ಬೇಡಿಕೆಯನ್ನು ಹಲವು ಬಾರಿ ಮಂಡಿಸಿದ್ದಾರೆ. ಕಾಶ್ಮೀರಕ್ಕೆ ರಾಜ್ಯದ ಸ್ಥಾನವನ್ನು ಅದಷ್ಟು ಬೇಗ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ 2023ರಲ್ಲಿ ಸುಪ್ರೀಂ ಕೋರ್ಟ್ ಹೇಳಿದೆ. ರಾಜ್ಯದ ಸ್ಥಾನವನ್ನು ಮತ್ತೆ ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭರವಸೆ ಇತ್ತಿದ್ದಾರೆ. ಆದರೆ, ಅವರಿಬ್ಬರೂ ಇದನ್ನು ಕಾಲಮಿತಿಯಲ್ಲಿ ಮಾಡುವುದಾಗಿ ಹೇಳಿಲ್ಲ. ಭರವಸೆಗಳನ್ನು ನೀಡಲಾಗಿದ್ದರೂ ರಾಜ್ಯದ ಸ್ಥಾನವನ್ನು ಮತ್ತೆ ನೀಡುವ ಉದ್ದೇಶ ನಿಜವಾಗಿಯೂ ಇದೆಯೇ ಎಂಬುದರ ಬಗ್ಗೆ ಗಂಭೀರ ಅನುಮಾನಗಳು ಇವೆ. ಪಹಲ್ಗಾಮ್‌ನಲ್ಲಿ ಏಪ್ರಿಲ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಕಾರಣಕ್ಕೆ ರಾಜ್ಯದ ಸ್ಥಾನಮಾನ ಕುರಿತ 'ಚರ್ಚೆ'ಯ ಬಗ್ಗೆ ಪ್ರಸ್ತಾಪ ಆಗಿದೆ. ಭಯೋತ್ಪಾದಕ ದಾಳಿಯು ಈ ಬೇಡಿಕೆ ಈಡೇರಿಸುವುದನ್ನು ಕಷ್ಟವಾಗಿಸಿದೆ ಎಂಬ ದೃಷ್ಟಿಕೋನವು ತಪ್ಪು. ದಾಳಿಯ ನಂತರದಲ್ಲಿ, ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನವನ್ನು ಮತ್ತೆ ನೀಡುವ ಅಗತ್ಯವು ಮೊದಲಿಗಿಂತಲೂ ಹೆಚ್ಚಾಗಿದೆ. ಈಗಿನ ವ್ಯವಸ್ಥೆಯಲ್ಲಿ ಜಮ್ಮು ಮತ್ತು ಕಾಶ್ಮೀರದ ಚುನಾಯಿತ ಸರ್ಕಾರಕ್ಕೆ ಬಹಳ ಸೀಮಿತ ಅಧಿಕಾರ ಇದೆ. ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ಅಧಿಕಾರ, ಅಂದರೆ ಹಿರಿಯ ಅಧಿಕಾರಿಗಳ ವರ್ಗಾವಣೆ ಹಾಗೂ ಅವರ ನಿಯೋಜನೆಗೆ ಸಂಬಂಧಿಸಿದ ಅಧಿಕಾರವು ಚುನಾಯಿತರಲ್ಲದ ಲೆಫ್ಟಿನೆಂಟ್ ಗವರ್ನರ್ ಬಳಿ ಇರುತ್ತದೆ. ಈ ವಿಚಾರಗಳಲ್ಲಿ ರಾಜ್ಯ ಸರ್ಕಾರಕ್ಕೆ ಪಾತ್ರವೇ ಇಲ್ಲವಾಗಿದೆ. ಭದ್ರತೆಯನ್ನು ಖಾತರಿಪಡಿಸುವಲ್ಲಿ ಅಗತ್ಯವಿರುವ ಒಂದು ಪ್ರಮುಖ ಹೆಜ್ಜೆ ಎಂದರೆ, ಆ ಪ್ರಕ್ರಿಯೆಯಲ್ಲಿ ಸ್ಥಳೀಯರನ್ನು ತೊಡಗಿಸಿಕೊಳ್ಳುವುದು. ಈಗಿನ ಆಡಳಿತದಲ್ಲಿ ರಾಜ್ಯದ ಜನರಿಗೆ ಭದ್ರತೆಗೆ ಸಂಬಂಧಿಸಿದ ವ್ಯವಸ್ಥೆಯಲ್ಲಿ ಪಾತ್ರವೇ ಇಲ್ಲ. ಜಮ್ಮು ಮತ್ತು ಕಾಶ್ಮೀರದ ಭದ್ರತೆಯ ವಿಚಾರದಲ್ಲಿ ಚುನಾಯಿತ ಸರ್ಕಾರವು ಹೊರಗಿನವರಂತೆ ಇರಬೇಕಾಗಿದೆ. ಪಹಲ್ಗಾಮ್ ದಾಳಿಯ ನಂತರ ನಡೆದ ಭದ್ರತೆಗೆ ಸಂಬಂಧಿಸಿದ ಸಂಪುಟ ಸಮಿತಿಯ ಸಭೆಗೆ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರಿಗೆ ಆಹ್ವಾನ ಇರಲಿಲ್ಲ. ಕಾಶ್ಮೀರದ ಭದ್ರತಾ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ, ಸಶಸ್ತ್ರ ಪಡೆಗಳು, ಗುಪ್ತಚರ ವ್ಯವಸ್ಥೆ ಹಾಗೂ ಲೆಫ್ಟಿನೆಂಟ್ ಗವರ್ನರ್ ಮಾತ್ರವೇ ಭಾಗೀದಾರರಾಗಿ ಇರಬಾರದು. ಈ ವ್ಯವಸ್ಥೆಯಲ್ಲಿ ಅಲ್ಲಿನ ಜನರನ್ನು ಪ್ರತಿನಿಧಿಸುವ ಸರ್ಕಾರ ಕೂಡ ಪ್ರಮುಖ ಭಾಗೀದಾರನಾಗಿ ಇರಬೇಕು. ಕೇಂದ್ರ ಸರ್ಕಾರ ಹಾಗೂ ಜನರ ನಡುವಿನ ವಿಶ್ವಾಸವು ಬಹಳ ಮುಖ್ಯವಾಗುತ್ತದೆ. ಚುನಾಯಿತ ಸರ್ಕಾರವೊಂದಕ್ಕೆ ಅದಕ್ಕೆ ಕೊಡಬೇಕಿರುವ ಅಧಿಕಾರವನ್ನು ಕೊಡದೇ ಇದ್ದಾಗ ಅವಿಶ್ವಾಸದ ಸಂದೇಶವೊಂದನ್ನು ರವಾನಿಸಿದಂತೆ ಆಗುತ್ತದೆ. ಭರವಸೆಗಳನ್ನು ಮಾತ್ರ ನೀಡಿ. ಅದಕ್ಕೆ ಅನುಗುಣವಾಗಿ ಕ್ರಮಗಳನ್ನು ಕೈಗೊಳ್ಳದೇ ಇದ್ದಾಗ ಆ ಅವಿಶ್ವಾಸವು ಹೆಚ್ಚಾಗುತ್ತದೆ. ಭಯೋತ್ಪಾದನೆಯು ರಾಜಕೀಯ ಸಮಸ್ಯೆಯೂ ಹೌದು. ಅದನ್ನು ರಾಜಕೀಯವಾಗಿಯೂ ನಿರ್ವಹಿಸುವ ಕೆಲಸ ಆಗಬೇಕು. ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನವನ್ನು ಮತ್ತೆ ನೀಡಿದರೆ ಅಲ್ಲಿನ ಪ್ರಜಾತಂತ್ರವು ವಾಸ್ತವಕ್ಕೆ ಇನ್ನಷ್ಟು ಹತ್ತಿರವಾಗುತ್ತದೆ. ಅಲ್ಲಿನ ಆಡಳಿತವು ಇನ್ನಷ್ಟು ಜನಕೇಂದ್ರಿತವಾಗುತ್ತದೆ. ಜನರ ಭಾಗೀದಾರಿಕೆ ಹೆಚ್ಚಾಗುತ್ತದೆ. ರಾಜ್ಯದ ಸ್ಥಾನ ನೀಡುವುದನ್ನು ರಾಷ್ಟ್ರ ಮತ್ತು ಜನರ ನಡುವಿನ ಒಪ್ಪಂದದಂತೆ ಕಾಣಬೇಕು. ಕಾಶ್ಮೀರದ ಒಳಿತಿಗಾಗಿ, ದೇಶದ ಒಳಿತಿಗಾಗಿ ಅದನ್ನು ಗೌರವಿಸಬೇಕು.

> **ಕೇಂದ್ರಾಡಳಿತ ಪ್ರದೇಶವಾಗಿರುವ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನವನ್ನು ಪುನಃ ನೀಡಬೇಕು ಎಂಬ ಬೇಡಿಕೆಯನ್ನು ಅಲ್ಲಿನ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಮತ್ತೊಮ್ಮೆ ಪ್ರಸ್ತಾಪಿಸಿದ್ದಾರೆ. 'ರಾಜ್ಯದ ಸ್ಥಾನಮಾನ ಕುರಿತ ಚರ್ಚೆಯು ಕೊನೆಗೊಂಡಿಲ್ಲ' ಎಂದು ಅವರು ಹೇಳಿದ್ದಾರೆ. ನೀತಿ ಆಯೋಗದ ಈಚಿನ ಕಡತವೊಂದು ರಾಜ್ಯದ ಸ್ಥಾನಮಾನ ನೀಡುವ ಬಗ್ಗೆ ಸ್ಪಷ್ಟವಾಗಿ ಪ್ರಸ್ತಾಪ ಮಾಡಿದೆ ಎಂಬುದನ್ನು ಅವರು ತಿಳಿಸಿದ್ದಾರೆ.**

# ಸಾರ್ಥಕ ಬದುಕಿಗೆ ಏನಿರಬೇಕು ಹೇಗಿರಬೇಕು



**ವಿಶ್ವಾಸ್.ಡಿ.ಗೌಡ**
**ಉದಯವಾಹಿನಿ, ವಿಶೇಷ**

ದೇವಾಲಯವೊಂದರ ದೇವರು ಭಕ್ತರು ಬೇಡಿದ ವರಗಳನ್ನು ಈಡೇರಿಸುವ ದೇವರೆಂದು ಪ್ರಖ್ಯಾತಿ ಪಡೆದಿದ್ದನಂತೆ. ದೇವಾಲಯದಲ್ಲಿ ಹರಕೆ ಹೊತ್ತ ಭಕ್ತರು ದೇವರಿಗೆ ಏನೇನೋ ಉತ್ಸವಗಳನ್ನು-ಸೇವೆಗಳನ್ನು ಸಲ್ಲಿಸುತ್ತಿದ್ದರು. ದೇವಾಲಯದ ಆನೆಯ ಮೇಲೆ ಅಂಬಾರಿಯನ್ನು ಕಟ್ಟಿ ಅದರೊಳಗೆ ದೇವರಮೂರ್ತಿಯನ್ನು ಇಟ್ಟು ದೇವಾಲಯದ ಸುತ್ತ ಪ್ರದಕ್ಷಿಣೆ ಬರುವ ಆ ಅಂಬಾರಿ ಬಹಳ ಜನಪ್ರಿಯವಾಗಿತ್ತು. ಆ ಉತ್ಸವದ ಆನೆಯು ಹಲವಾರು ವರ್ಷಗಳಿಂದ ಕೆಲಸವನ್ನು ನಿಭಾಯಿಸುತ್ತಿತ್ತು.

ಭಕ್ತರ ಹರಕೆಗಳನ್ನೂ, ಸೇವೆಯನ್ನೂ ಮೆಚ್ಚಿಕೊಂಡು ವರಗಳನ್ನು ಕೊಡುವ ದೇವರು ಮೂಕಪ್ರಾಣಿಯ ಸೇವೆಯನ್ನು ಮೆಚ್ಚದೆ ಹೋಗುತ್ತಾನೆಯೇ ಒಂದು ದಿನ ದೇವರು ಆನೆಯ ಕನಸಿನಲ್ಲಿ ಪ್ರತ್ಯಕ್ಷವಾಗಿ ನಿನಗೇನು ವರ ಬೇಕು ಎಂದು ಕೇಳಿದನಂತೆ. ಆನೆ ಕೊಂಚ ಯೋಚಿಸಿ ನಾನು ಇತರ ಪ್ರಾಣಿಗಳನ್ನು ಗಮನಿಸಿದ್ದೇನೆ. ನನ್ನ ದೇಹ ಸುಂದರವಾಗಿಲ್ಲವೆಂದು ನನಗೆ ಅನೇಕ ಬಾರಿ ಅನ್ನಿಸಿದೆ. ತೆಳ್ಳನೆಯ ಕಾಲುಗಳಿದ್ದರೆ, ದಪ್ಪವಾದ ಕತ್ತು ಉದ್ದವಾಗಿದ್ದರೆ ಚೆನ್ನಾಗಿರುತ್ತಿತ್ತೇನೋ ಎಂಬಾಸೆ.

ಬೆನ್ನಿನ ಭಾಗದಲ್ಲಿ ಡುಬ್ಬವಿದ್ದರೆ, ನೀರನ್ನು ಇಟ್ಟುಕೊಳ್ಳಬಹುದೆಂಬ ಆಸೆ. ಜಿಂಕೆಯಂತೆ ಓಡುವಾಸೆ, ನವಿಲಿನಂತೆ ರೆಕ್ಕೆಯಿದ್ದು ಬಣ್ಣ ಬಣ್ಣವಾಗಿರಲು ಎಂಬಾಸೆ. ದೇವರೇ, ಸಾಧ್ಯವಿದ್ದರೆ ನನ್ನ ಆಸೆಗಳನ್ನು ಈಡೇರಿಸು ಎಂದು ಕೇಳಿಕೊಂಡಿತು. ಆನೆಯ ಮಾತುಗಳನ್ನು ಕೇಳಿ ಚಿಂತೆಗೊಳಗಾದ ದೇವರು ನಿನ್ನ ಆಸೆಗಳನ್ನು ಈಡೇರಿಸುವುದು ನನಗೆ ಕಷ್ಟವೇನಲ್ಲ. ಆದರೆ ಇವೆಲ್ಲಾ ನಿನಗೆ ಬೇಕಾ ಎಂದು ನೀನೇ ಯೋಚಿಸುವುದು ಒಳ್ಳೆಯದು! ಆಯಿತು, ನಾಳೆ ಮುಂಜಾನೆಯ ಹೊತ್ತಿಗೆ ನಿನ್ನಾಸೆಯಂತೆ ನಿನ್ನ ದೇಹ ಹೊಸ ರೂಪವನ್ನು ತಾಳಿರುತ್ತದೆ ಎಂದು ಹೇಳಿ ಮಾಯವಾದನಂತೆ. ಮರುದಿನ ಮುಂಜಾನೆ ಆನೆಯ ಕತ್ತು ಜಿರಾಫೆಯಂತೆ ಉದ್ದವಾಗಿತ್ತು. ಬೆನ್ನಿನಲ್ಲಿ ಡುಬ್ಬಗಳಿದ್ದವು. ಕಾಲುಗಳು ಒಂಟೆಯ ಕಾಲುಗಳಂತೆ ಉದ್ದುದ್ದವಾಗಿದ್ದವು. ಮೈಯಲ್ಲಿ ನವಿಲಿನಂತೆ ಬಣ್ಣ ಬಣ್ಣದ ರೆಕ್ಕೆ-ಪುಕ್ಕಗಳು, ಜಿಂಕೆಯಂತೆ ಚಿತ್ರ ವಿಚಿತ್ರವಾಗಿತ್ತು. ಈ ವಿಚಿತ್ರ ಪ್ರಾಣಿಯನ್ನು ಕಂಡ ಮಾವುತ ಹೆದರಿ ಓಡಿಹೋದ. ವಿಚಿತ್ರ ಆಕೃತಿಯ ಪ್ರಾಣಿಯನ್ನು ಅಂಬಾರಿ ಉತ್ಸವಕ್ಕೆ ಬಳಸುವುದು ಹೇಗೆಂಬ ಸಮಸ್ಯೆ ದೇವಾಲಯದವರಿಗೆ ಉಂಟಾಯಿತು. ಅವರು ಆನೆ, ಒಂಟೆ, ಜಿರಾಫೆ, ನವಿಲು, ಜಿಂಕೆ ಯಾವುದೂ ಅಲ್ಲದ, ವಿಚಿತ್ರ ರೂಪದ ಪ್ರಾಣಿಯನ್ನು ದೇವಾಲಯದ ಹಿಂಭಾಗದಲ್ಲಿ ಮರಕ್ಕೆ ಕಟ್ಟಿಬಿಟ್ಟರು. ಬೇರೊಂದು ಆನೆಯನ್ನು ತರಿಸಿ ಅಂಬಾರಿ ಉತ್ಸವಕ್ಕೆ ಬಳಸತೊಡಗಿದರು. ಹೊಸ ಆನೆಯು ಅಂಬಾರಿ ಉತ್ಸವವನ್ನು ಗತ್ತಿನಿಂದ ಹೊತ್ತು ಬರುವುದನ್ನು, ವಿರೂಪಗೊಂಡ ಆನೆ ಅಸೂಯೆಯಿಂದ ನೋಡುತ್ತಿತ್ತು. ಈಗ ಅದನ್ನು ಆದರಿಸುವವರು ಯಾರೂ ಇಲ್ಲ ಆಗ ಅದು ದೇವರ ಮುಂದೆ ಕಣ್ಣೀರಿಟ್ಟಿತು. ದೇವರು, ನೀನು ಕೇಳಿದ ವರವನ್ನೇ ಕೊಟ್ಟಿದ್ದೇನೆ.

ವರವನ್ನು ಸರಿಯಾಗಿ ಕೇಳದಿದ್ದುದು ನಿನ್ನ ತಪ್ಪು ಎಂದು ಬಿಟ್ಟನು. ಆನೆ ನಾನೇನು ಕೇಳಬೇಕಿತ್ತು ಅದನ್ನಾದರೂ ತಿಳಿಸು ಎಂದು ಕೇಳಿಕೊಂಡಿತು.

ದೇವರು, ಅವರನ್ನು ನೋಡಿ, ಅವರಂತಾಗಬೇಕು, ಇವರನ್ನು ನೋಡಿ ಇವರಂತಾಗಬೇಕು, ಎಂದು ಬೇಡುವ ಬದಲು ನಿನಗೆ ಏನೇನು ಲಭ್ಯವಿತ್ತೋ ಅದನ್ನೇ ಶಕ್ತಿಯುತವಾಗಿ, ಚಾಕಚಕ್ಯತೆಯಿಂದ ಬಳಸಿಕೊಳ್ಳುವ, ಬೆಳೆಸಿಕೊಳ್ಳುವ ವರವನ್ನು ಬೇಡಿದ್ದರೆ ಒಳ್ಳೆಯದಾಗುತ್ತಿತ್ತು ಎಂದು ಹೇಳಿದನಂತೆ. ಆಗ ಆನೆಯು ತನ್ನ ಮೂರ್ಖತನಕ್ಕೆ ಜಿಗುಪ್ಸೆಗೊಂಡು ತನ್ನ ತಲೆಯನ್ನು ದೇವಾಲಯದ ಗೋಡೆಗೆ ಬಡಿಯತೊಡಗಿತಂತೆ. ಹಾಗೆ ಬಡಿದಾಗ ನೋವಾಯಿತು.

ನೋವಿನಿಂದ ಅದಕ್ಕೆ ಎಚ್ಚರವಾಯಿತು. ಆಗ ಅದಕ್ಕೆ ತಾನು ಕಂಡಿದ್ದು ಕನಸೆಂದು ಅರಿವಾಯಿತು. ತನ್ನ ದೇಹ ಮೊದಲಿನಂತೆ ಇದೆಯೆಂದು ಸಂತೋಷವಾಯಿತು. ಅಂದಿನಿಂದ ಅದು ತನ್ನ ಸೇವೆಯನ್ನು ಇನ್ನೂ ಹೆಚ್ಚು ಉತ್ಸಾಹದಿಂದ ಮಾಡತೊಡಗಿತು. ಅದರಂತೆ ನಮಗೂ ಯಾರನ್ನಾದರೂ ನೋಡಿದಾಗ ಅವರಷ್ಟು ರೂಪ ನಮಗಿರಬೇಕಿತ್ತು, ಅವರಷ್ಟು ಅದೃಷ್ಟ ನಮಗಿರಬೇಕಿತ್ತು. ಅವರಿಗೆ ಸಿಕ್ಕ ಶ್ರೀಮಂತಿಕೆ, ಅಧಿಕಾರ, ಪದವಿಗಳು ನಮಗೂ ಸಿಗಬೇಕಿತ್ತು ಎನಿಸಿದಾಗ, ಆನೆಯನ್ನು ಜ್ಞಾಪಿಸಿಕೊಳ್ಳುವುದು ಒಳ್ಳೆಯದು. ನಮಗೇನೇನು ಸಿಕ್ಕಿದೆಯೋ ಅದನ್ನು ಬೆಳಸಿಕೊಳ್ಳುವ, ಬಳಸಿಕೊಳ್ಳುವ ವರವನ್ನು ಬೇಡಿಕೊಳ್ಳುವುದು ಒಳ್ಳೆಯದಲ್ಲವೇ ಬದುಕು ಸಾರ್ಥಕವಾಗಲು ಅಷ್ಟೇ ಸಾಕಲ್ಲವೇ



**ನಿನ್ನಾಸೆಯಂತೆ ನಿನ್ನ ದೇಹ ಹೊಸರೂಪ**

# ಭರತನಾಟ್ಯ ರಂಗಪ್ರವೇಶ ಕಲಾಸಕ್ತರಿಂದ ಆಸ್ವಾದನೆ

**ಉದಯವಾಹಿನಿ, ಬೆಂಗಳೂರು**

ನಾಟ್ಯೇಶ್ವರ ನೃತ್ಯ ಶಾಲೆ ಹಾಗೂ ನೃತ್ಯ ಕುಟೀರ ಇವುಗಳ ಸಂಯುಕ್ತಾಶ್ರಯದಲ್ಲಿ ಮೇ 31ರಂದು ಮಲ್ಲೇಶ್ವರ ಶ್ರೀಕೃಷ್ಣದೇವರಾಯ ಕಲಾಮಂದಿರ ತೆಲುಗು ವಿಜ್ಞಾನ ಸಮಿತಿದಲ್ಲಿ ಗುರು ಕೆ.ಪಿ ಸತೀಶ್ ಬಾಬು ರವರ ಹಿರಿಯ ವಿದ್ಯಾರ್ಥಿನಿ ಕು|| ಕೆ. ಹರಿಣಿ ಹಾಗೂ ನೃತ್ಯ ಕುಟೀರದ ಗುರು ವಿ|| ಲಿಖಿತಾರವರ ಶಿಷ್ಯೆ ಕು|| ಕೆ. ಪ್ರಗತಿ ಇವರುಗಳ ಭರತನಾಟ್ಯ ರಂಗಪ್ರವೇಶ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ಮೂಡಿಬಂತು. ವಾದ್ಯವೃಂದದಲ್ಲಿ: ಗುರುಗಳಾದ ಕಲಾಯೋಗಿ ಶ್ರೀ ಕೆ.ಪಿ. ಸತೀಶ್ ಬಾಬು, ವಿ|| ಯು.ಕೆ. ಲಲಿತಾ (ನಟುವಾಂಗ), ವಿದ್ವಾನ್ ಶ್ರೀವತ್ಸ (ಹಾಡುಗಾರಿಕೆ), ವಿ|| ಪಿ. ಜನಾರ್ದನ (ಮೃದಂಗ), ವಿ|| ಆರ್ ಪಿ ಪ್ರಶಾಂತ್ (ವೀಣೆ), ವಿ|| ರಘುಸಿಂಹ ಕೊಳಲು, ವಿ|| ಧನುಷ್ (ರಿದಂ ಪ್ಯಾಡ್ ಕಾರ್ಯಕ್ರಮ ನಿರ್ವಹಣೆ, ನಿರೂಪಣೆ ವಾಣಿ ಸತೀಶ್ ಬಾಬು. ಪಾರಂಪರಿಕ ನೃತ್ಯ ಬಂಧಗಳಾದ ಪುಷ್ಪಾಂಜಲಿ, ವಿನಾಯಕ ಸ್ತುತಿ, ಗುರುಶ್ಲೋಕ, ರಸಿಕಪ್ರಿಯ, ಜತಿಸ್ವರ, ದಶಾವತಾರ, ವೆಂಕಟೇಶ್ವರ ಪದವರ್ಣ, ಶಿವಕೀರ್ತನೆ, ದೇವಿಸ್ತುತಿ ಹಾಗೂ ಕೊನೆಯಲ್ಲಿ ಕದನ ಕೂತೂಹಲ ತಿಲ್ಲಾನ, ಶ್ರೀರಾಮಚಂದ್ರನ ಮಂಗಳದೊಂದಿಗೆ ಸುಸಂಪನ್ನವಾಯಿತು. ಅತಿಥಿಗಳಾಗಿ ಕಲಾಯೋಗಿ ಶ್ರೀಮತಿ ರೇಖಾ ಜಗದೀಶ್ ನಿರ್ದೇಶಕರು, ಶ್ರೀ ಲಲಿತ ಕಲಾ ನಿಕೇತನ, ಕಲಾಯೋಗಿ ಶ್ರೀ ಎಸ್ . ರಘುನಂದನ್ (ನಿರ್ದೇಶಕರು ಕೇಶವ ಸಂಗೀತ ಮತ್ತು ನೃತ್ಯ ಶಾಲೆ ಹಾಗೂ ಡಾ ಶ್ರೀಮತಿ ಮಾನಸಿ ರಘುನಂದನ್ (ನಿರ್ದೇಶಕರು, ಅಭಿವ್ಯಕ್ತಿ ಸಾಂಸ್ಕೃತಿಕ ಸಂಸ್ಥೆ) ನೃತ್ಯ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಇಡೀ ಸಭಾಂಗಣ ಕಿರಿಯ, ಹಿರಿಯ ವಿದ್ಯಾರ್ಥಿ ವೃಂದ , ಕಲಾರಸಿಕರು ಪೋಷಕರಿಂದ ತುಂಬಿ ಕರತಾಡನದಿಂದ ಕಂಗೊಳಿಸಿತು. ಕಾರ್ಯಕ್ರಮವನ್ನು ಪೋಷಕರಾದ ಡಾ. ಕುಮಾರ್ ಮತ್ತು ಶ್ರೀಮತಿ ಎಸ್. ಜಯಶ್ರೀ ಅಚ್ಚುಕಟ್ಟಾಗಿ ನಿರ್ವಹಿಸಿದರು.



ಉದಯವಾಹಿನಿ ಚಿತ್ರ

# ಮನೆ ಬಾಗಿಲಿಗೆ ಇ-ಖಾತಾ

**ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ವ್ಯಾಪ್ತಿಯ ಆಸ್ತಿ ಮಾಲೀಕರು ಮನೆಯಲ್ಲಿ ಕುಳಿತೇ ಇ-ಖಾತಾವನ್ನು ಜನಸೇವಕರಿಂದ ಪಡೆದು ಕೊಳ್ಳುವ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ರಾಜ್ಯ ಸರ್ಕಾರದ ಹಲವು ಸೇವೆಗಳನ್ನು ಮನೆಗೆ ಒದಗಿಸುವ https://janasevaka. karnataka .gov.in/ವೆಬ್‌ಸೈಟ್ ಮೂಲಕ ಬಿಬಿಎಂಪಿ ಇ-ಖಾತಾವನ್ನೂ ಪಡೆಯಬಹುದಾಗಿದೆ.

ವೆಬ್‌ಸೈಟ್ ಅಥವಾ 080-49203888ಗೆ ಮಾಲೀಕರು ಕರೆ ಮಾಡಿ, ಜನಸೇವಕರು' ಮನೆಗೆ ಬರುವ ಸಮಯವನ್ನು ನಿಗದಿಪಡಿಸಿಕೊಳ್ಳಬೇಕು. ಮಾಲೀಕರ ಆಧಾರ್, ಆಸ್ತಿ ತೆರಿಗೆ ಎಸ್‌ಎಎಸ್ ಅರ್ಜಿ ಸಂಖ್ಯೆ, ಸ್ವತ್ತಿನ ಕ್ರಯಪತ್ರ, ಬೆಸ್ಕಾಂ ಖಾತೆ ಸಂಖ್ಯೆ. ಸ್ವತ್ತಿನ ಚಿತ್ರವನ್ನು ಸಿದ್ಧವಾಗಿಟ್ಟುಕೊಂಡಿರಬೇಕು. ಜನಸೇವಕರು ಬಂದಾಗ ಈ ದಾಖಲೆಗಳನ್ನು ನೀಡಿದರೆ, ಅವರು ಇ-ಖಾತೆಗೆ ಅರ್ಜಿ ಸಲ್ಲಿಸುತ್ತಾರೆ. ಎರಡು ಅಥವಾ ಮೂರು ದಿನಗಳಲ್ಲಿ ಇ-ಖಾತೆಯನ್ನು ಪಡೆದುಕೊಳ್ಳಬಹುದು ಎಂದು ಬಿಬಿಎಂಪಿ ಪ್ರಕಟಣೆ ತಿಳಿಸಿದೆ. ಇ-ಖಾತಾ ಅರ್ಜಿಗೆ ರೂ.45, ಪ್ರತಿ ಪುಟ ಸ್ಕ್ಯಾನ್, ಅಪ್‌ಲೋಡ್‌ಗೆ ರೂ.5, ಮನೆ ಬಾಗಿಲಿಗೆ ಜನಸೇವಕನ ಸೇವೆಗೆ ರೂ.115 ಶುಲ್ಕ ಪಾವತಿಸಬೇಕಾಗುತ್ತದೆ. ದಾಖಲೆಗಳ ಪುಟ ಹೆಚ್ಚಿದ್ದರೆ, ಪ್ರತಿ ಪುಟಕ್ಕೆ ರೂ.5 ಹೆಚ್ಚಾಗುತ್ತದೆ. ಬಿಬಿಎಂಪಿಯ ಯಾವುದೇ ಕಚೇರಿಗೆ ಭೇಟಿ ನೀಡಬೇಡಿ ಅಥವಾ ಕರೆ ಮಾಡಬೇಡಿ ಎಂಬ ಘೋಷವಾಕ್ಯದಡಿ ನಿಮ್ಮ ಮನೆಯಲ್ಲೇ ಕುಳಿತು ಬಿಬಿಎಂಪಿ ಇ-ಖಾತೆಯನ್ನು ಪಡೆದುಕೊಳ್ಳಿ ಯೋಜನೆಯನ್ನು ಜಾರಿಗೆ ತರಲಾಗಿದೆ.




# ಇದ್ದಕ್ಕಿದಂತೆ ಕಣ್ಣುಗಳಲ್ಲಿ ನೀರು?

ಕಣ್ಣುಗಳಲ್ಲಿ ಪದೇ ಪದೇ ನೀರು ಬರುವುದು ಒಳ್ಳೆಯ ಲಕ್ಷಣವಲ್ಲ ಎನ್ನುತ್ತಾರೆ ಆರೋಗ್ಯ ತಜ್ಞರು! ಯಾಕೆಂದ್ರೆ ಇವೆಲ್ಲಾ ರೋಗಲಕ್ಷಣಗಳು, ಕಣ್ಣುಗಳಲ್ಲಿ ಗಂಭೀರ ಕಾಯಿಲೆ ರೋಗ ಲಕ್ಷಣಗಳನ್ನು ಸೂಚಿಸುತ್ತದೆ! ಹೀಗಾಗಿ ಕಾರಣಗಳಿಲ್ಲದೆ, ಕಣ್ಣುಗಳಲ್ಲಿ ಪದೇ ಪದೇ ನೀರು ಬರುತ್ತಲೇ ಇದ್ದರೆ ಕೂಡಲೇ ವೈದ್ಯರ ಬಳಿ ಹೋಗಿ ಪರೀಕ್ಷೆ ಮಾಡಿಸಿಕೊಂಡರೆ ಒಳ್ಳೆಯದು ಎನ್ನುತ್ತಾರೆ ಆರೋಗ್ಯ ತಜ್ಞರು. ನಮ್ಮ ದೇಹದ ಎಲ್ಲಾ ಅಂಗಾಂಗಗಳಂತೆ ಕಣ್ಣುಗಳಿಗೆ ಕೂಡ ಪ್ರಮುಖ ಸ್ಥಾನವನ್ನು ನೀಡಲಾಗಿದೆ. ದೇಹದ ಬೇರೆ ಅಂಗಾಂಗಗಳಿಗೆ ಹೋಲಿಸಿದರೆ ಬಹಳ ಸೂಕ್ಷ್ಮವಾದ ಅಂಗಗಳು ಎಂದರೆ ಅದು ನಮ್ಮ ಕಣ್ಣು ಹಾಗೂ ಕಿವಿಗಳು ಆಗಿರುತ್ತವೆ ಎಂದರೆ ತಪ್ಪಾಗಲಾರದು. ದಿನನಿತ್ಯ ನಾವು ಹಾಸಿಗೆ ಯಿಂದ ಮೇಲೆದ್ದ ತಕ್ಷಣದಿಂದ ಹಿಡಿದು ರಾತ್ರಿ ಕಣ್ಣು ಮುಚ್ಚಿ ಮಲಗುವವರೆಗೂ ಕಣ್ಣುಗಳ ಕೆಲಸ ನಿರಂತರವಾಗಿ ನಡೆಯುತ್ತಲೇ ಇರುತ್ತದೆ. ಇಂತಹ ಕಣ್ಣುಗಳ ಆರೋಗ್ಯವನ್ನು ನಾವು ಕೊನೆಯವರೆಗೂ ಅಚ್ಚುಕಟ್ಟಾಗಿ ಕಾಪಾಡಿಕೊಳ್ಳಬೇಕು ಎಂದರೆ ಅದಕ್ಕೆ ಬೇಕಾದ ಪೂರ್ವ ತಯಾರಿಯನ್ನು ಮಾಡಿಕೊಳ್ಳಬೇಕು. ಆದರೆ ಕೆಲವೊಮ್ಮೆ ನಾವು ಮಾಡುತ್ತಿರುವ ಕೆಲವೊಂದು ತಪ್ಪಿನಿಂದಾಗಿ ಹಾಗೂ ಅನುವಂಶೀಯ ಕಾರಣಗಳಿಂದಾಗಿ ನಮ್ಮ ಕಣ್ಣುಗಳಲ್ಲಿ ಸಮಸ್ಯೆ ಕಾಣಿಸಿಕೊಳ್ಳಲು ಶುರುವಾಗುತ್ತಿದೆ..

**ಕಣ್ಣುಗಳಲ್ಲಿ ಇದ್ದಕ್ಕಿದಂತೆ ನೀರು ಬರುವುದು:** ಕಣ್ಣುಗಳಲ್ಲಿ ಇದ್ದಕ್ಕಿದಂತೆ ನೀರು ಬರುವುದು ಕೂಡ ಹಲವಾರು ರೋಗಗಳ ಲಕ್ಷಣಗಳನ್ನು ಸೂಚಿಸುತ್ತದೆ. ಒಂದು ವೇಳೆ ಈ ರೀತಿಯ ರೋಗ ಲಕ್ಷಣಗಳು ಕಾಣಿಸಿಕೊಂಡರೆ, ಕೂಡಲೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿಕೊಳ್ಳಿ, ಯಾಕೆಂದ್ರೆ ಇವೆಲ್ಲಾ ಲಕ್ಷಣಗಳು ಗಂಭೀರ ಕಾಯಿಲೆಯ ರೋಗಲಕ್ಷಣಗಳು ಆಗಿರುವ ಸಾಧ್ಯತೆ ಹೆಚ್ಚಿರುತ್ತದೆ. ಅದರಲ್ಲೂ ನಿರಂತರ ಕಂಪ್ಯೂಟರ್, ಲ್ಯಾಪ್‌ಟಾಪ್ ಅಥವಾ ಮೊಬೈಲ್‌ನಲ್ಲಿ ಹೆಚ್ಚು ಸಮಯ ಕಳೆಯುತ್ತಿದ್ದರೆ, ಕಣ್ಣುಗಳು ಒಣಗುವ ಸಮಸ್ಯೆ ಉಂಟಾಗಬಹುದು. ಕಣ್ಣುಗಳು ಒಣಗುವುದರಿಂದ ಆಗಾಗ್ಗೆ ನೀರು ಬರುವ ಸಾಧ್ಯತೆ ಕೂಡ ಹೆಚ್ಚಿರುತ್ತದೆ ಎನ್ನುತ್ತಾರೆ ಆರೋಗ್ಯ ತಜ್ಞರು.

**ಇದು ಗಂಭೀರ ಕಾಯಿಲೆಯ ಲಕ್ಷಣಗಳಾಗಿರಬಹುದು**

ಆಗಾಗ್ಗೆ ಯಾವುದೇ ಕಾರಣವಿಲ್ಲದೆ ಕಣ್ಣುಗಳಲ್ಲಿ ನೀರು ಬರಲು ಪ್ರಾರಂಭಿಸಿದರೆ ಆದಷ್ಟು ಎಚ್ಚರಿಕೆ ವಹಿಸಬೇಕು. ಇದು ಕಣ್ಣಿನಲ್ಲಿ ಕಾಣಿಸಿಕೊಂಡಿರುವ ಗಂಭೀರ ಕಾಯಿಲೆಯ ಲಕ್ಷಣವಾಗಿರುವ ಸಾಧ್ಯತೆ ಹೆಚ್ಚಿರುತ್ತದೆ. ಕೆಲವೊಮ್ಮೆ ಕಣ್ಣುಗಳಿಗೆ ಧೂಳು, ಅಥವಾ ಗಾಳಿಯ ಮೂಲಕ ಸಣ್ಣಗೆ ಇರುವ ಕಸ ಹೋದರೂ ಕೂಡ ಈ ರೀತಿಯ ಸಮಸ್ಯೆ ಕಾಣಿಸಿಕೊಳ್ಳಬಹುದು ಇನ್ನು ಕೆಲವೊಮ್ಮೆ ಧೂಳಿನ ಕಣಗಳು ಕಣ್ಣುಗಳಲ್ಲಿ ತುರಿಕೆ ಅಥವಾ ಅಸ್ವಸ್ಥತೆಯನ್ನು ಉಂಟುಮಾಡದ ಸ್ಥಳದಲ್ಲಿ ಇರುತ್ತವೆ, ಆದರೆ ಕಣ್ಣಿನ ವ್ಯವಸ್ಥೆಯು ಅವುಗಳನ್ನು ತೆಗೆದುಹಾಕಲು ನೀರಿನ ಸಹಾಯವನ್ನು ಪಡೆಯುತ್ತದೆ. ಇದಲ್ಲದೆ, ಕಣ್ಣಿನಿಂದ ಪದೇ ಪದೇ ನೀರು ಬರಲು ಕಾರಣವಾಗುವ ಕೆಲ ವೊಂದು ಆರೋಗ್ಯ ಸಮಸ್ಯೆಗಳು ಇವೆ, ಅವುಗಳ ಬಗ್ಗೆ ನೋಡೋಣ....


**ಈ ಕಾಯಿಲೆಗಳಲ್ಲಿ, ಕಣ್ಣುಗಳು ಪದೇ ಪದೇ ನೀರು ಹರಿಸುತ್ತವೆ:** ಎಂಎಂಜಿ ಆಸ್ಪತ್ರೆಯ ಹಿರಿಯ ಕಣ್ಣಿನ ಶಸ್ತ್ರಚಿಕಿತ್ಸಕ ಡಾ. ನರೇಂದ್ರ ಕುಮಾರ್, ಅವರು ಹೇಳುವ ಪ್ರಕಾರ ಯಾವುದೇ ಕಾರಣವಿಲ್ಲದೆ ಕಣ್ಣುಗಳು ನೀರು ಬರುತ್ತಲೇ ಇದ್ದರೆ ಕಣ್ಣೀರಿನ ಗ್ರಂಥಿಗಳ ಸಮಸ್ಯೆಗಳ ಲಕ್ಷಣವಾಗಿದೆ ಎಂದು ಹೇಳಲಾಗುತ್ತದೆ. ಕಣ್ಣೀರಿನ ನಾಳದಲ್ಲಿ ಯಾವುದೇ ಅಡಚಣೆ ಇದ್ದರೆ, ಕಣ್ಣುಗಳು ಪದೇ ಪದೇ ನೀರು ಹರಿಸುತ್ತವೆ ಎನ್ನುತ್ತಾರೆ ವೈದ್ಯರು Bell's palsy ಎನ್ನುವ ಆರೋಗ್ಯ ಸಮಸ್ಯೆ: ಇದಲ್ಲದೆ, ಕಣ್ಣು ರೆಪ್ಪೆಗಳಲ್ಲಿ ಏನಾದರೂ ಸಮಸ್ಯೆ ಇದ್ದರೆ, ಕಣ್ಣುಗಳಿಂದ ನೀರು ಬರುತ್ತದೆ. ಕಣ್ಣುರೆಪ್ಪೆಗಳು ಹೊರಕ್ಕೆ ಅಥವಾ ಒಳಮುಖವಾಗಿ ತಿರುಗುವುದರಿಂದಲೂ ಇದು ಸಂಭವಿಸುತ್ತದೆ. ಇನ್ನೂ ಕೆಲವೊಮ್ಮೆ Bell's palsy ಎನ್ನುವ ಆರೋಗ್ಯ ಸಮಸ್ಯೆ ಕಾಣಿಸಿಕೊಂಡಾಗಲೂ ಕೂಡ, ಕಣ್ಣುಗಳಲ್ಲಿ ಈ ರೀತಿಯಾಗಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತದೆಯಂತೆ! Bell's palsy ಎನ್ನುವುದು ನರವೈಜ್ಞಾನಿಕ ಅಸ್ವಸ್ಥತೆಯಾಗಿದ್ದು ಮುಖದ ಸ್ನಾಯುಗಳ ಮೇಲೆ ಪರಿಣಾಮ ಬೀರುತ್ತವೆ. ಇದರಿಂದಾಗಿ ಕಣ್ಣುಗಳು ಮುಚ್ಚುವ ಅಥವಾ ಕಣ್ಣುರೆಪ್ಪೆಗಳು ಸರಿಯಾಗಿ ಮುಚ್ಚದಿರುವ ಸಮಸ್ಯೆ ಉಂಟಾಗಬಹುದು. ಇದರಿಂದಾಗಿ ಕಣ್ಣುಗಳು ಪದೇ ಪದೇ ನೀರು ಬರುತ್ತವೆಯಂತೆ

**ಕೊನೆ ಮಾತು:** ಕಣ್ಣುಗಳ ಆರೋಗ್ಯವನ್ನು ರಕ್ಷಣೆ ಮಾಡಿಕೊಳ್ಳಬೇಕು ಎಂದರೆ ನಮ್ಮ ಆಹಾರ ಪದ್ಧತಿಯಲ್ಲಿ ಕಣ್ಣುಗಳಿಗೆ ಅಗತ್ಯವಾದ ಪೌಷ್ಟಿಕಾಂಶಗಳನ್ನು ಒಳಗೊಂಡಿರುವ ಆಹಾರಗಳನ್ನು ಸೇರಿಸಿ ಕೊಳ್ಳಬೇಕು ಹಾಗೂ ವೈದ್ಯರ ಸಲಹೆಗಳನ್ನು ಪಡೆದುಕೊಂಡು ಸಮಯಕ್ಕೆ ಸರಿಯಾಗಿ ಕಣ್ಣುಗಳ ಪರೀಕ್ಷೆ ಮಾಡಿಸಿಕೊಳ್ಳಬೇಕು



## ವೈದ್ಯರಿಂದ ತಪಾಸಣೆ ಮಾಡಿಸಿ

**ನಿಮ್ಮ ಕಣ್ಣುಗಳು ಪದೇ ಪದೇ ನೀರು ಬರುತ್ತಿದ್ದರೆ, ಕೂಡಲೇ ವೈದ್ಯರಿಂದ ತಪಾಸಣೆ ಮಾಡಿಸಿಕೊಳ್ಳಬೇಕು ಎನ್ನುತ್ತಾರೆ ಡಾ. ನರೇಂದ್ರ ಕುಮಾರ್ ಅವರು. ಅಲ್ಲದೆ ಈ ಸಮಸ್ಯೆಗೆ ನುರಿತ ತಜ್ಞರ ಸಲಹೆ ಪಡೆದುಕೊಳ್ಳದೆ ಮನೆ ಮದ್ದುಗಳನ್ನು ಮಾಡುವುದು ಹಾಗೂ ನಿರ್ಲಕ್ಷ್ಯ ಮಾಡುವುದರಿಂದ ಕೂಡ ಕಣ್ಣುಗಳಿಗೆ ಹಾನಿಕಾರಕವಾಗಬಹುದು. ವೈದ್ಯರು ನಿಮ್ಮನ್ನು ಪರೀಕ್ಷಿಸಿ, ಕಣ್ಣುಗಳಿಂದ ಆಗಾಗ್ಗೆ ನೀರು ಬರುವುದಕ್ಕೆ ನಿಜವಾದ ಕಾರಣವನ್ನು ಕಂಡುಹಿಡಿದು ನಂತರ ನಿಮಗೆ ಚಿಕಿತ್ಸೆ ನೀಡುತ್ತಾರೆ. ನೆನೆಪಿಡಿ ಈ ಸಮಸ್ಯೆಯನ್ನು ನಿರ್ಲಕ್ಷ್ಯ ಮಾಡುತ್ತಾ ಹೋದರೆ ಗಂಭೀರ ಆರೋಗ್ಯ ಸಮಸ್ಯೆಗಳು ಕಾಣಿಸಿ ಕೊಳ್ಳುವ ಸಾಧ್ಯತೆ ಇರುತ್ತದೆ!**



# ರಾಮಾಯಣ



**ದಶರಥ ರಾಯನ ಶರೀರವನ್ನು ಎಣ್ಣೆಯ ಕೊಪ್ಪರಿಗೆಯಲ್ಲಿ ಇಟ್ಟಿದ್ದು**

ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಭರತನು ಮಿತ್ರರೆ, ನನ್ನ ಮನಸ್ಸಿಗೆ ವ್ಯಥೆಯು ಬಂದ ನಿಮಿತ್ತವನ್ನು ಕೇಳಿರಿ: ನಾನು ಒಂದು ದುಃಸ್ವಪ್ನವನ್ನು ಕಂಡೆನು: ಆ ಸ್ವಪ್ನದಲ್ಲಿ ನನ್ನ ತಂದೆಯಾದ ದಶರಥರಾಯನು ಕಪ್ಪಾದ ಶರೀರವುಳ್ಳವನಾಗಿ ತಲೆಯನ್ನು ಕೆದರಿಕೊಂಡು ಒಂದು ಪರ್ವತದ ಕೋಡುಗಲ್ಲಿನಿಂದ ಅದರ ಕೆಳಗಿದ್ದ ಗೋಮಯದ ಕೆಸರಿನ ಹಳ್ಳದಲ್ಲಿ ಬಿದ್ದು ತೇಲಾಡುತ್ತ ತೈಲವನ್ನು ಕುಡಿಯುತ್ತ ಅಡಿಗಡಿಗೆ ನಗುತ್ತ ತಲೆಕೆಳಗಾಗಿ ಕೈಮೈಗೆಲ್ಲ ತೈಲವನ್ನು ಹಚ್ಚಿಕೊಂಡು ಎಣ್ಣೆಯಲ್ಲಿ ಮುಳುಗಿರುವ ಹಾಗೆ ಕಂಡನು. ಆಮೇಲೆ ನೀರಿಲ್ಲದೆ ಬತ್ತಿದ ಸಮುದ್ರವನ್ನೂ ಅಂತರಿಕ್ಷಮಾರ್ಗದಿಂದ ಭೂಮಿಯಲ್ಲಿ ಬಿದ್ದ ಚಂದ್ರ ಮಂಡಲವನ್ನೂ ಕಂಡನು, ಮಹತ್ತಾದ ಅಂಧಕಾರವು ಭೂಮಂಡಲವನ್ನು ಆವರಿಸಿಕೊಂಡ ಹಾಗೂ ಕಂಡೆನು. ದಶರಥರಾಯನು ಏರುತ್ತಿದ್ದ ಆನೆಯ ಕೋರೆಹಲ್ಲುಗಳು ತುಂಡುತುಂಡಾಗಿ ಬಿದ್ದದ್ದನ್ನೂ ಉರಿಯುತ್ತಿದ್ದ ಅಗ್ನಿಜ್ವಾಲೆಯನ್ನೂ ಭೂಮಿಯು ಒಡೆದು ವಿಭಾಗವಾದದ್ದನ್ನೂ ನಾನಾಪ್ರಕಾರವಾದ ಒಣಗಿದ ಮರಗಳಿಂದ ಹೊಗೆ ಏಳುತ್ತಿದ್ದ ಪರ್ವತಗಳನ್ನೂ ಒಡೆದು ಬಿದ್ದ ಪರ್ವತಗಳನ್ನೂ ಕಂಡೆನು. ಕಬ್ಬಿಣದ ಮಣೆಯಮೇಲೆ ಕುಳಿತುಕೊಂಡು ಕಪ್ಪಿನ ಹೊದಿಕೆಯನ್ನು ಹೊದ್ದುಕೊಂಡಿದ್ದ ದಶರಥ ರಾಯನನ್ನು ಕಂಡು ಕಪ್ಪಾದ ಸ್ತ್ರೀಯರು ಆತನ ಎದುರಾಗಿ ನಗುವುದನ್ನು ಕಂಡೆನು. ಆತನು ಕೆಂಪಾದ ಮಾಲೆಗಳನ್ನು ಧರಿಸಿಕೊಂಡು ಗಾರ್ದಭಗಳಿಂದ ಮೇಲ್ಕೈಸಿದ ರಥವನ್ನು ಹತ್ತಿಕೊಂಡು ಶೀಘ್ರದಲ್ಲಿ ನಡೆಯಿಸುತ್ತ ದಕ್ಷಿಣಮುಖವಾಗಿ ಹೋಗುತ್ತಿರಲು ಆತನ ಎದುರಾಗಿ ಕೆಂಪಾದ ವಸ್ತ್ರವನ್ನುಟ್ಟುಕೊಂಡು ನಗುತ್ತ ಕೋರೆದಾಡೆಗಳಿಂದ ಭಯಂಕರವಾದ ಮುಖವುಳ್ಳ ಒಬ್ಬ ರಾಕ್ಷಸಿಯು ಸೆರಗುಹಿಡಿದು ಸೆಳೆಯುತ್ತಿದ್ದುದನ್ನು ಕಂಡೆನು. ಈ ಪ್ರಕಾರದಲ್ಲಿ ನಾನು ಸ್ವಪ್ನವನ್ನು ಕಂಡು ರಾತ್ರಿಯನ್ನು ಭಯದಿಂದ ಕಳೆದೆನು. ಈ ಸ್ವಪ್ನವು ದಶರಥರಾಯನಾಗಲಿ ಶ್ರೀರಾಮನಾಗಲಿ ನಾನಾಗಲಿ ಲಕ್ಷ್ಮಣನಾಗಲಿ ಲೋಕಾಂತರವನ್ನೈದುವುದಕ್ಕೆ ಸೂಚಕವಾಗಿದೆ. ಯಾವನು ಗಾರ್ದಭಯುಕ್ತವಾದ ರಥದಲ್ಲಿ ಕುಳಿತು ಹೋಗುವಂತೆ ತೋರುವನೋ ಆತನ ಚಿತೆಯ ಧೂಮವು ಶೀಘ್ರದಲ್ಲಿಯೇ ಕಾಣಿಸುವುದು. ಇಂಥ ದುಃಸ್ವಪ್ನವನ್ನು ಕಂಡಕಾರಣ ಕಂಗೆಟ್ಟು ದೀನನಾಗಿದ್ದೇನೆ. ನನ್ನ ಗಂಟಲು ಒಣಗುತ್ತಿದೆ. ಮನಸ್ಸು ಸ್ವಸ್ಥವಿಲ್ಲ ಭಯಕಾರಣವನ್ನು ಕಾಣದಿದ್ದರೂ ಭಯವುಂಟಾಗಿದೆ. ನನ್ನ ಸ್ವರಗುಂದಿದೆ. ನನ್ನ ತನುಕಾಂತಿಗುಂದಿದೆ. ನನ್ನ ಶರೀರವು ನನಗೆ ಅಸಹ್ಯವಾಗಿದೆ. ಇದಕ್ಕೆ ಕಾರಣವನ್ನು ಕಾಣೆನು. ಹಿಂದೆಂದೂ ಕಾಣದೆ ಇದ್ದ, ಯೋಚಿಸಲೂ ಆಗದಂಥ ವಿರೂಪವುಳ್ಳ ದಶರಥರಾಯನನ್ನು ಸ್ವಪ್ನದಲ್ಲಿ ಕಂಡು ನಾನು ವ್ಯಥೆಪಡುತ್ತಿದ್ದೇನೆ. ಯಾವ ವಿನೋದ ಗೋಷ್ಠಿಗಳಿಂದಲೂ ನನ್ನ ಚಿತ್ತವು ನೆಮ್ಮದಿಯನ್ನು ಪಡೆಯಲಾರದು ಎಂದು ಹೇಳಿದನು.

**ಅಯೋಧ್ಯಾ ಪಟ್ಟಣಕ್ಕೆ ಭರತನ ಪ್ರಯಾಣ :** ಈ ರೀತಿಯಲ್ಲಿ ಭರತನು ತನ್ನ ಪ್ರಿಯ ಸಖರೊಡನೆ ತಾನು ಕಂಡ ಸ್ವಪ್ನವನ್ನು ಹೇಳುತ್ತಿರುವ ಸಮಯದಲ್ಲಿ ಅಯೋಧ್ಯಾಪಟ್ಟಣದಿಂದ ಬಂದ ಊಳಿಗದವರು ಬೆವರಿದ ಕುದುರೆಗಳುಳ್ಳವರಾಗಿ ಬೆಳಗಿನ ಜಾವದಲ್ಲಿ ಕೇಕಯರಾಯನ ಪಟ್ಟಣದ ಬಾಗಿಲಿಗೆ ಹೋಗಿ ತಾವು ಬಂದ ವೃತ್ತಾಂತವನ್ನು ಆ ರಾಯನಿಗೆ ಹೇಳಿಕಳುಹಿಸಿದರು. ಅನಂತರ ಅರಮನೆಯ ಒಳಗೆ ಹೋಗಿ ಆ ರಾಯನನ್ನೂ ಭರತನನ್ನೂ ಕಂಡರು.

ಮುಂದುವರಿಯುವುದು...

# ಹಿಂದೂ ಸಂಘಟನೆಗಳ ವತಿಯಿಂದ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಮನವಿ!

**ಉದಯವಾಹಿನಿ, ಬೆಂಗಳೂರು**

ಮೇ 27 ರಂದು ಬಂಟ್ವಾಳದಲ್ಲಿ ಅಬ್ದುಲ್ ರೆಹಮಾನ್ ಹತ್ಯೆ ನಂತರ, ಇಡೀ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಿಂದೂ ನಾಯಕರನ್ನು ಗುರಿಯಾಗಿಸಿ ಷಡ್ಯಂತ್ರಗಳು ನಡೆಯುತ್ತಿವೆ. ಪೊಲೀಸರು ಕಾನೂನು ನಿಯಮಗಳನ್ನು ಗಾಳಿಗೆ ತೂರಿ, ರಾತ್ರೋರಾತ್ರಿ ಹಿಂದೂ ಕಾರ್ಯಕರ್ತರ ಮನೆಗೆ ತೆರಳಿ, ಕಾರ್ಯಕರ್ತರ ಫೋಟೋ ತೆಗೆಯುವುದು, ಮನೆಗೆ ಜಿಪಿಎಸ್ ಅಳವಡಿಸುವುದು, ನೋಟೀಸ್ ನೀಡದೇ ಠಾಣೆಗೆ ಕರೆಯುವುದು, ಮುಂತಾದ ಕಾನೂನು ಬಾಹಿರ ಕೃತ್ಯಗಳನ್ನು ಮಾಡುತ್ತಿದ್ದು, ಅದರಿಂದ ಹಿಂದೂ ಕಾರ್ಯಕರ್ತರ ಮನೆಯಲ್ಲಿ ಭಯದ ವಾತವರಣ ನಿರ್ಮಾಣವಾಗಿದೆ.

ಕಳೆದ ರಾತ್ರಿ 15 ಹಿಂದೂ ನಾಯಕರು, ಕಾರ್ಯಕರ್ತರ ಮೇಲೆ ಪ್ರಕರಣಗಳು ದಾಖಲಾಗಿವೆ. ಹಲವು ನಾಯಕರಿಗೆ ಗಡಿಪಾರು ಮಾಡಲಾಗಿದೆ. ಆದರೆ ದ್ವೇಷ ಭಾಷಣವನ್ನು ಮಾಡುವ ಎಸ್‌ಡಿಪಿಐ ಮುಖಂಡರ ಮೇಲೆ ಯಾವುದೇ ಪ್ರಕರಣ ದಾಖಲಾಗುವುದಿಲ್ಲ. ಕೋಮು ಹಿಂಸಾಚಾರ ತಡೆ ದಳವನ್ನು ಕೇವಲ ಹಿಂದೂ ಸಂಘಟನೆಗಳ ವಿರುದ್ಧ ಮಾತ್ರ ಪ್ರಯೋಗಿಸಲಾಗುತ್ತಿದೆ ಎಂದು ಹಿಂದೂ ಜನ ಜಾಗೃತಿ ಸಮಿತಿಯ ರಾಜ್ಯ ವಕ್ತಾರರಾದ ಶ್ರೀ. ಮೋಹನ ಗೌಡ ವ್ಯಕ್ತಪಡಿಸಿದ್ದಾರೆ.

ಅವರು 2 ಜೂನ್ 2025 ಸೋಮವಾರದಂದು ಬೆಂಗಳೂರಿನ ಪೊಲೀಸ್ ಪ್ರಧಾನ ಕಛೇರಿಯಲ್ಲಿ, ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಎಮ್ ಎ ಸಲೀಮ್ ಇವರಿಗೆ ಸಮಸ್ತ ಹಿಂದೂ ಸಂಘಟನೆಗಳ ಒಕ್ಕೂಟದಿಂದ ಮನವಿ ನೀಡಿ ಮಾತನಾಡಿದರು.

ಈ ವೇಳೆ ಶ್ರೀರಾಮ ಸೇನೆಯ ಸಂಸ್ಥಾಪಕ ಅಧ್ಯಕ್ಷರಾದ ಶ್ರೀ. ಪ್ರಮೋದ ಮುತಾಲಿಕ, ವಕೀಲರಾದ ಅಮೃತೇಶ ಎನ್ ಪಿ, ಶ್ರೀ. ಪುನೀತ ಕೆರೆಹಳ್ಳಿ, ಶ್ರೀ. ಸಂತೋಷ ಕೆಂಚಾಂಬ ಭಜರಂಗದಳದ ಪ್ರಾಂತ ಸಹ ಸಂಯೋಜಕರಾದ ಶ್ರೀ. ಗೋವರ್ಧನ್ ಸಿಂಗ್, ವಿಶ್ವ ಹಿಂದೂ ಪರಿಷತ್‌ನ ಪ್ರಾಂತ ಸಹ ಕಾರ್ಯದರ್ಶಿ ಶ್ರೀ. ಸುರೇಶ್ ಕುಮಾರ್ ಬಿ, ಹಿಂದೂ ಜಾಗರಣ ವೇದಿಕೆಯ ದಕ್ಷಿಣ ಪ್ರಾಂತ ಸಹ ಸಂಯೋಜಕರಾದ ಶ್ರೀ. ರಾಜಣ್ಣ, ಸೇರಿದಂತೆ ಅನೇಕ ಹಿಂದೂ ಕಾರ್ಯಕರ್ತರು ಮತ್ತು ವಕೀಲರು ಉಪಸ್ಥಿತರಿದ್ದರು. ಶ್ರೀ. ಮೋಹನ ಗೌಡ ಮುಂದುವರೆಸಿ, ದಕ್ಷಿಣ ಕನ್ನಡದಲ್ಲಿ ದ್ವೇಷ ಭಾಷಣ ಮಾಡುವ ಅನ್ಯ ಸಮುದಾಯದ ಮುಖಂಡರ ವಿರುದ್ಧ ದೂರು ನೀಡಿದರೂ ಸಹ ದೂರು ನೊಂದಣಿಯಾಗುವುದಿಲ್ಲ. ಹಿಂದೂಗಳು ಸಾಮಾಜಿಕ ಜಾಲತಾಣದಲ್ಲಿ ಏನೇ ಬರೆದರೂ ಅವರ ಮೇಲೆ ಪ್ರಕರಣವನ್ನು ದಾಖಲಿಸಿ, ಹಿಂದೂಗಳ ವಾಕ್ ಸ್ವಾತಂತ್ರ್ಯವನ್ನು ಹತ್ತಿಕ್ಕಲಾಗುತ್ತದೆ. ಈ ಎಲ್ಲಾ ಘಟನೆಗಳಲ್ಲಿ ಸರಕಾರ ಪೊಲೀಸ್ ಇಲಾಖೆಯನ್ನು ಬಳಸಿ ಹಿಂದೂ ನಾಯಕರ ಧ್ವನಿ ಅಡಗಿಸುವ ಷಡ್ಯಂತ್ರ ನಡೆಸುತ್ತಿದೆ.

ಸುಹಾಸ್ ಶೆಟ್ಟಿ ಹತ್ಯೆಯ ಪ್ರಕರಣದಲ್ಲಿ ನಿಷೇಧಿತ ಪಿಎಫ್‌ಐನ ಅನೇಕ ಸದಸ್ಯರು ಭಾಗಿಯಾಗಿರುವ ಶಂಕೆಯಿದೆ. ಆದರೆ ಪೊಲೀಸರು ಈ ಪ್ರಕರಣದಲ್ಲಿ ಸರಿಯಾಗಿ ತನಿಖೆ ನಡೆಸದೇ ಅನೇಕ ಮುಸಲ್ಮಾನ್ ಧಾರ್ಮಿಕ ರಾಜಕೀಯ ಮುಖಂಡರ ಒತ್ತಡದಿಂದ ಹಿಂದೂ ನಾಯಕರ ಮೇಲೆ ಪ್ರಕರಣ ದಾಖಲಿಸುತ್ತಿದ್ದಾರೆ. ಇದಲ್ಲದೇ ಮೇ 28 ರಂದು ಬಂಟ್ವಾಳದಲ್ಲಿ ನಡೆದ ಅಬ್ದುಲ್ ರೆಹಮಾನ್ ಅಂತಿಮ ಯಾತ್ರೆ ವೇಳೆ, ದುಷ್ಕರ್ಮಿಗಳು ಬಲವಂತವಾಗಿ ಅಂಗಡಿಗಳನ್ನು ಮುಚ್ಚಿಸಿದ್ದಾರೆ, ಮಾಧ್ಯಮ ಪ್ರತಿನಿಧಿಗಳ ಮೇಲೆ ಹಲ್ಲೆ ಹಾಗೂ ಕಲ್ಲು ತೂರಾಟ ನಡೆದಿದೆ. ಆದರೆ ಅವರ ಮೇಲೆ ಯಾವುದೇ ಪ್ರಕರಣ ದಾಖಲಾಗಲಿಲ್ಲ.

**ಶ್ರೀ. ಪ್ರಮೋದ್ ಮುತಾಲಿಕ್ ಮಾತನಾಡಿ, ದಕ್ಷಿಣ ಕನ್ನಡ ಜಿಲ್ಲೆಯ ಅನೇಕ ಹಿಂದೂ ನಾಯಕರಿಗೆ ಜೈಶ್ ಎ ಮೊಹಮ್ಮದ್ ಭಯೋತ್ಪಾದಕ ಸಂಘಟನೆಯ ಹೆಸರಿನಲ್ಲಿ ಪಾಕಿಸ್ತಾನ, ಅಫ್ಘಾನಿಸ್ತಾನ ಮತ್ತು ಸೌದಿ ಅರೆಬಿಯಾ ವಾಟ್ಸ್ ಆಪ್ ಆಡಿಯೋ ಸಂದೇಶಗಳು ಬರುತ್ತಿದೆ. ಇಂತಹ ಬೆದರಿಕೆಗಳು ಹತ್ಯೆಗೆ ಮುನ್ನ ಸುಹಾಸ್ ಶೆಟ್ಟಿಯವರಿಗೂ ಬಂದಿದ್ದು, ನಂತರ ಅವರ ಹತ್ಯೆಯಾಗಿತ್ತು. ಇದು ಅತ್ಯಂತ ಗಂಭೀರ ವಿಷಯವಾಗಿದ್ದು, ಅದೇ ರೀತಿಯಲ್ಲಿ ಮಂಗಳೂರಿಗೆ ಕೇರಳದಿಂದ ಸಾವಿರಾರು ಸಂಖ್ಯೆಯಲ್ಲಿ ಮುಸಲ್ಮಾನರು ಪ್ರತಿಭಟನೆಗೆ ಬುರುವುದು ಅತ್ಯಂತ ಗಂಭೀರ ವಿಷಯವಾಗಿದೆ ಪಿಎಫ್‌ಐ ಸದಸ್ಯರು ಈಗಲೂ ಸಕ್ರಿಯವಾಗಿದ್ದು, ಅವರು ಎಸ್‌ಡಿಪಿಐ ಮೂಲಕ ಕಾರ್ಯ ಮಾಡುತ್ತಿದ್ದಾರೆ, ಸರಕಾರವು ಅವರ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹ ಮಾಡಿದರು.**

ಈ ರೀತಿಯಾಗಿ ಸರಕಾರ ಪೊಲೀಸ್ ಇಲಾಖೆಯನ್ನು ಬಳಸಿ ಕೇವಲ ಏಕಮುಖವಾಗಿ ಹಿಂದೂ ನಾಯಕರ ವಿರುದ್ಧ ಪ್ರಕರಣವನ್ನು ದಾಖಲಿಸಿ, ಹಿಂದೂ ನಾಯಕರ ಧ್ವನಿ ಹತ್ತಿಕ್ಕುವ ಷಡ್ಯಂತ್ರ ನಡೆಯುತ್ತಿದೆ ಎಂದರು.



ಉದಯವಾಹಿನಿ ಚಿತ್ರ

# ಹೊಣೆಗಾರಿಕೆಯೇ ಇಲ್ಲದ 'ಸಿಎಸ್‌ಆರ್'

• ಉದಯವಾಹಿನಿ ಸಂಡೂರು

ಸಿಎಸ್‌ಆರ್, ಅಂದರೆ... ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ.' ಸಂಡೂರು ತಾಲ್ಲೂಕಿನ ಸಂಪತ್ತು ಬಗೆಯುವ, ಅದರಿಂದ ಉತ್ಪನ್ನ ತಯಾರಿಸುವ ಕಂಪನಿಗಳು ಈ ಹೊಣೆಗಾರಿಕೆಯನ್ನು ಲೆಕ್ಕಕ್ಕೆ ಮಾತ್ರ ತೋರಿಸುತ್ತಿವೆಯೇ ಹೊರತು, ಸಾಮಾಜಿಕ ಜವಾಬ್ದಾರಿಯೇ ಇಲ್ಲ ಎಂಬಂತಾಗಿದೆ.

ಸಂಡೂರಿನಲ್ಲಿ ಇತ್ತೀಚೆಗೆ ರಸ್ತೆ ಅಪಘಾತ ನಡೆದು ಕುಟುಂಬವೊಂದರ ಐವರು ಮೃತಪಟ್ಟ ಬಳಿಕ ಇಲ್ಲಿನ ವ್ಯವಸ್ಥೆಯ ವಿರುದ್ಧ ಪ್ರಶ್ನೆಗಳೇಳಲು ಆರಂಭವಾಗಿದೆ. ಸಿಎಸ್‌ಆರ್ ನಿಧಿ ಸಮರ್ಪಕವಾಗಿ ಬಳಕೆಯಾಗಿದ್ದಿದ್ದರೆ ಸಂಡೂರಿನಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯೇ ಕಟ್ಟಬಹುದಿತ್ತು. ಜನರಿಗೆ ಅಗತ್ಯ ಸೇವೆಗಳನ್ನು ಸಂಡೂರಿನಲ್ಲೇ ನೀಡಬಹುದಿತ್ತು. ಅದಿರು ಸಾಗಿಸಲು ಪ್ರತ್ಯೇಕ ಕಾರಿಡಾರ್ ನಿರ್ಮಿಸಬಹುದಿತ್ತು. ಅಪಘಾತಗಳನ್ನು ತಪ್ಪಿಸಬಹುದಿತ್ತು ಎಂಬ ವಾದ


ಉದಯವಾಹಿನಿ ಚಿತ್ರ

ಕೇಳಿ ಬಂದಿದೆ. ಸಂಡೂರಿನಲ್ಲಿ ಜೆಎಸ್‌ಡಬ್ಲ್ಯೂ, ರಾಷ್ಟ್ರೀಯ ಖನಿಜ ಅಭಿವೃದ್ಧಿ ನಿಗಮ(ಎನ್‌ಎಂಡಿಸಿ), ಸ್ಮಯೋರ್, ಎಂಎಂಎಲ್,

> ಸಂಡೂರು ತಾಲ್ಲೂಕಿನ ಗಣಿ ಬಾಧಿತ ಗ್ರಾಮಗಲ್ಲಿನ ಮೂಲ ಸೌಲಭ್ಯಗಳ ಅಭಿವೃದ್ಧಿಗೆ ಸಿಎಸ್‌ಆರ್ ಅನುದಾನವು ಜಿಲ್ಲಾಧಿಕಾರಿಗಳ ಆದೇಶ ಸೂಚನೆಯ ಮೇರೆಗೆ ಸಮರ್ಪಕವಾಗಿ ಬಳಕೆಯಾಗುತ್ತಿದೆ -ಅನಿಲ್ ಕುಮಾರ್ ಜಿ.
> ಸಂಡೂರಿನ ತಹಶೀಲ್ದಾರ್

ವೆಸ್ಕೋ, ಬಿಕೆಜಿ, ಸೇರಿದಂತೆ ಹಲವು ಗಣಿ ಕಂಪನಿಗಳು, ಸಣ್ಣ, ಬೃಹತ್ ಪ್ರಮಾಣದ ಕೈಗಾರಿಕೆಗಳಿವೆ. ಇವೆಲ್ಲವೂ ವಾರ್ಷಿಕ ಕೋಟ್ಯಂತರ ವಹಿವಾಟು ನಡೆಸುತ್ತವೆ. ಈ ವಹಿವಾಟಿನ ಶೇ 2 ಅನ್ನು ಸಿಎಸ್‌ಆರ್ ಮೂಲಕ ಜನರ ಕಲ್ಯಾಣಕ್ಕೆ ಬಳಸಬೇಕಾಗಿತ್ತು. ಮೂಲಸೌಕರ್ಯಗಳ ಯೋಜನೆಗಳು ಪರಿಣಾಮಕಾರಿಯಾಗಿ ಜಾರಿಗೆ ತರಬೇಕಾಗಿತ್ತು. ಆದರೆ, ಅದರ ಲವಲೇಶವೂ ಸಂಡೂರಿನಲ್ಲಿ ಕಾಣುತ್ತಿಲ್ಲ. 2024-25ನೇ ಸಾಲಿನಲ್ಲಿ 'ಸಿ' ವರ್ಗದ 13 ಗಣಿಗಳು ಸಂಡೂರಿನಿಂದ 88,26,951.06 ಟನ್ ಅದಿರು ಸಾಗಿಸಿವೆ. 'ಎ' ಮತ್ತು 'ಬಿ' ವರ್ಗದ 31 ಗಣಿಗಳು 3,38,63,480 ಟನ್ ಅದಿರು ಬಗೆದಿವೆ. ಒಂದು ಟನ್‌ಗೆ ಸದ್ಯ 4 ಸಾವಿರದಿಂದ 5 ಸಾವಿರದ ವರೆಗೆ ಬೆಲೆ ಇದೆ.

ಈ ಎಲ್ಲಾ ವಹಿವಾಟಿನಿಂದ ತೆಗೆದಿಡಲಾದ ಸಿಎಸ್‌ಆರ್ ಅನುದಾನ ಏನಾಯ್ತು ಎಂಬ ಪ್ರಶ್ನೆ ಜನರನ್ನು ಕಾಡಲಾರಂಭಿಸಿದೆ. ತಾಲ್ಲೂಕಿನ ಗಣಿ ಬಾಧಿತ ಗ್ರಾಮಗಳಾದ ರಾಮಘಡ, ಕಮ್ಮತ್ತೂರು(ದೇವಗಿರಿ ಹಳ್ಳಿ), ಸೋಮನಹಳ್ಳಿ, ತೋಣಸಿಗೇರಿ, ನಾರಾಣಪುರ, ಸೇರಿದಂತೆ ಇತರೆ ಹಳ್ಳಿಗಳಲ್ಲಿ ಸಾಮಾಜಿಕ ಸಾಂಸ್ಥಿಕ ಜವಾಬ್ದಾರಿಯ ಚಟುವಟಿಕೆಗಳು ನಡೆದ ಕುರುಹುಗಳೇ ಇಲ್ಲ.

## ರಸ್ತೆ ದುರಸ್ತಿಗೆ ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕಮಲಾಪೂರ

ಕಲ್ಬುರ್ಗಿ ಜಿಲ್ಲೆಯ ಕಮಲಾಪುರ ತಾಲ್ಲೂಕಿನ ಮಹಾಗಾಂವ ಕ್ರಾಸ್-ಚಿಂಚೋಳಿ ರಾಜ್ಯ ಹೆದ್ದಾರಿಯ ನಾಗೂರು ಗ್ರಾಮದಿಂದ ಹೇರೂರು ಕ್ರಾಸ್ ವರ್ಗೆ ಸಂಪೂರ್ಣವಾಗಿ ಹದಗೆಟ್ಟಿದ್ದೆ, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗ್ರಾಮೀಣ ಶಾಸಕ ಬಸವರಾಜ್ ಮತ್ತಿಮೊಡ್ ಅವರು ಕೂಡಲೇ ಈ ನಮ್ಮ ರಸ್ತೆಯನ್ನು ದುರಸ್ತಿ ಮಾಡಿಕೊಡುವಂತೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಹೇಳಿಕೆ ಒಂದು ವೇಳೆ ಸ್ಪಂದನೆ ಮಾಡದೆ ಇದ್ದರೆ ನಾವು ನಿಮ್ಮ ವಿರೋಧ ಪ್ರತಿಭಟನೆ ಮಾಡಬೇಕಾಗಬಹುದೆಂದು ಎಚ್ಚರಿಸಿದ್ದಾರೆ.

## ರಸ್ತೆ ಅವ್ಯವಸ್ಥೆ: ಸವಾರರಿಗೆ ಸಂಕಷ್ಟ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕುಷ್ಟಗಿ

ಬೇರೆ ತಾಲ್ಲೂಕುಗಳಿಗೆ ಹೋಲಿಸಿದರೆ ಕುಷ್ಟಗಿ ತಾಲ್ಲೂಕಿನ ರಸ್ತೆಗಳ ಸ್ಥಿತಿ ಉತ್ತಮವಾಗಿಯೇ ಇದೆ. ಗುಂಡಿ ಬಿದ್ದು ಸಂಚಾರಕ್ಕೆ ಎರವಾಗಿರುವ ರಸ್ತೆಗಳು ಬೆರಳೆಣಿಕೆಯಲ್ಲಿ ಕಂಡುಬರುತ್ತವೆ. ಆದರೆ ಗುಣಮಟ್ಟದ ಕೊರತೆಯೇ ಇಲ್ಲಿಯ ಪ್ರಮುಖ ಸಮಸ್ಯೆ. ಮೂಲ ಗುತ್ತಿಗೆದಾರರ ಬದಲು ಬೇನಾಮಿ, ಉಪ ಗುತ್ತಿಗೆದಾರರ ಮೂಲಕ ರಸ್ತೆ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿರುವುದರಿಂದ ಕಾಮಗಾರಿ ಕಳಪೆಯಾಗಿವೆ ಎಂಬ ಅಸಮಾಧಾನ ಇಲ್ಲಿಯ ಜನರದ್ದು. ದೋಟಿಹಾಳ ಬಳಿಯ ರಾಜ್ಯ ಹೆದ್ದಾರಿ, ಮುದೇನೂರು ರಸ್ತೆಯಲ್ಲಿ ಗುಂಡಿಗಳು ನಿರ್ಮಾಣಗೊಂಡು ಮಳೆಗಾಲದಲ್ಲಿ ನೀರಿನಿಂದ ಆವೃತವಾಗಿ ವಾಹನ ಸವಾರರು ಪರದಾಡುವುದು ಸಾಮಾನ್ಯವಾಗಿದೆ. ಪಟ್ಟಣದ ಸಂದೀಪ್ ನಗರದ ಬಳಿ ನಿರ್ಮಾಣಗೊಂಡಿರುವ ರಸ್ತೆ ವರ್ಷದೊಳಗೇ ಹಾಳಾಗಿ ಜನ ತೊಂದರೆ ಅನುಭವಿಸುವಂತಾಗಿದೆ.

ನಂದಾಪುರ ಹಾಗಲದಾಳದ ಮಧ್ಯದ ಸಂಪರ್ಕ ರಸ್ತೆಯ ಸಂಪೂರ್ಣ ಕಿತ್ತುಹೋಗಿದ್ದು ವಾಹನಗಳ ಅದರಲ್ಲೂ ಬೈಕ್ ಸವಾರರು ಫಜೀತಿಗೀಡಾಗುವಂತಾಗಿದೆ. ಕುಷ್ಟಗಿ ಟೆಂಗುಂಟಿ ಮಧ್ಯದಲ್ಲಿ ಲೋಕೋಪಯೋಗಿ ಇಲಾಖೆಗೆ ಸೇರಿದ ರಾಜ್ಯ ಹೆದ್ದಾರಿ, ಕುಷ್ಟಗಿ ವಜ್ರಬಂಡಿ ರಸ್ತೆಗಳ ಸ್ಥಿತಿಯೂ ಅದೇ ಆಗಿದ್ದು ಸಂಚಾರ ವ್ಯವಸ್ಥೆ ಅಸ್ತವ್ಯಸ್ತಗೊಂಡಿದೆ ಎಂಬ ಕೊರಗು ಅಲ್ಲಿಯ ಜನರದು.


ಉದಯವಾಹಿನಿ ಚಿತ್ರ

• ರಾಜ್ಯದಲ್ಲೇ ಅತಿ ಹೆಚ್ಚು ಭೂಕುಸಿತ ಸಂಭವಿಸುವ ಜಿಲ್ಲೆಯಲ್ಲಿ ಕುಸಿತ ತಡೆಗೆ ಶಾಶ್ವತ ಪರಿಹಾರ ಕೈಗೊಳ್ಳಲು ಆಡಳಿತ ವ್ಯವಸ್ಥೆ ಎಡವಿದೆ

# ಉತ್ತರ ಕನ್ನಡ ಜಿಲ್ಲೆಯಲ್ಲಿ ಭೂಕುಸಿತದ ಆತಂಕ ಜೀವಂತ

• ಉದಯವಾಹಿನಿ ಕಾರವಾರ

ರಾಜ್ಯದಲ್ಲೇ ಅತಿ ಹೆಚ್ಚು ಭೂಕುಸಿತ ಸಂಭವಿಸುವ ಜಿಲ್ಲೆಯಲ್ಲಿ ಕುಸಿತ ತಡೆಗೆ ಶಾಶ್ವತ ಪರಿಹಾರ ಕೈಗೊಳ್ಳಲು ಆಡಳಿತ ವ್ಯವಸ್ಥೆ ಎಡವಿದೆ ಎಂಬ ಆರೋಪಗಳ ನಡುವೆಯೇ ಮಳೆಗಾಲ ಆರಂಭಗೊಂಡಿದೆ. ಕಳೆದ ಸಾಲಿನಲ್ಲಿ ಸಂಭವಿಸಿದ ದುರಂತಗಳ ಬಳಿಕವೂ ಜಿಲ್ಲಾಡಳಿತ ಎಚ್ಚೆತ್ತುಕೊಳ್ಳದಿರುವುದು ಜನರ ಅಸಮಾಧಾನಕ್ಕೆ ಕಾರಣವಾಗಿದೆ. ದಶಕದಿಂದ ಈಚೆಗೆ ಜಿಲ್ಲೆಯಲ್ಲಿ 588ರಷ್ಟು ಭೂಕುಸಿತದ ಘಟನೆಗಳು ನಡೆದಿವೆ. ಜಿಲ್ಲೆಯಲ್ಲಿ 439 ಸ್ಥಳಗಳಲ್ಲಿ ಕುಸಿತ ಸಂಭವಿಸಬಹುದು ಎಂದು ಜಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾ (ಜಿಎಸ್‌ಐ) ತಜ್ಞರು ವರದಿ ನೀಡಿ ಮೂರು ವರ್ಷ ಕಳೆದಿದೆ. ಆದರೆ, ಈವರೆಗೂ ಕುಸಿತ ಸಂಭವಿಸಿದ ಸ್ಥಳಗಳ ಪೈಕಿ ಕೆಲವಷ್ಟರಲ್ಲಿ ಮಾತ್ರ ತಡೆಗೋಡೆಯೊಂದನ್ನು ನಿರ್ಮಿಸಲಾಗಿದೆ. ಅದರ ಹೊರತಾಗಿ ಯಾವುದೇ ಸುರಕ್ಷಿತಾ ಕ್ರಮವಾಗಿಲ್ಲ.

ಕಾರವಾರದ ಮಂದ್ರಾಳಿಯಲ್ಲಿ ತಡೆಗೋಡೆ ನಿರ್ಮಿಸಿದ್ದರ ಹೊರತಾಗಿಯೂ ಕಳೆದ ಮಳೆಗಾಲದಲ್ಲಿ ಭೂಕುಸಿತ ಸಂಭವಿಸಿ, ಹೆದ್ದಾರಿ ಮತ್ತು ಮನೆಗಳ ಮೇಲೆ ಮಣ್ಣಿನ ರಾಶಿ ಎರಗಿತ್ತು. ಈಗಲೂ ಅಲ್ಲಿ ಆತಂಕ ಮುಂದುವರಿದಿದೆ. ಅಣಶಿ ಘಟ್ಟದಲ್ಲಿ ಗೇಬ್ರಿಯನ್ ವಾಲ್ ನಿರ್ಮಿಸಿದ್ದರೂ ಆಗಾಗ ಕುಸಿತ ಸಂಭವಿಸುತ್ತಲೇ ಇದೆ. ಅಧಿಕಾರಿಗಳು ಕುಸಿತ ತಡೆಗೆ ಸಭೆಗಳನ್ನು ನಡೆಸಿ ಚರ್ಚಿಸಿದ್ದರ ಹೊರತಾಗಿ, ಸ್ಥಳದಲ್ಲಿ ಯಾವುದೇ ಕ್ರಮವೂ ಆಗುತ್ತಿಲ್ಲ ಎಂಬುದು ಜನರ ಆರೋಪ. ಶಿರಸಿ ತಾಲ್ಲೂಕಿನ ಮತ್ತಿಘಟ್ಟ ಕೆಳಗಿನಕೇರಿ ಸಮೀಪದ ಕಲಗದ್ದೆಯಲ್ಲಿ ಈಚಿನ ವರ್ಷದಲ್ಲಿ ಎರಡು ಸಾರಿ ಭೂಕುಸಿತ ಸಂಭವಿಸಿದ್ದು, ಈ ಬಾರಿ ಮಳೆ ಅಧಿಕವಾದರೆ ಮತ್ತೆ ಇಲ್ಲಿ ಭೂ ಕುಸಿತವಾಗುವ ಸಾಧ್ಯತೆ ದಟ್ಟವಾಗಿದೆ. ಕುಸಿತವಾದ ಪ್ರದೇಶದ ಸುತ್ತಲಿನ ಅಡಿಕೆ ತೋಟ ಮತ್ತಷ್ಟು ನಾಶವಾಗುವ ಆತಂಕದಲ್ಲಿ ಸ್ಥಳೀಯರಿದ್ದಾರೆ. ಸಮೀಪದ ಮಾಡಲಮನೆಯಲ್ಲಿ ಕಳೆದ ವರ್ಷ ಭೂಕುಸಿತ ಉಂಟಾಗಿದ್ದು, ಈ ಬಾರಿಯೂ ಆತಂಕದ ಸ್ಥಿತಿ ಇದೆ ಎನ್ನುತ್ತಾರೆ ಸೀತಾರಾಮ ಭಟ್. ಯಲ್ಲಾಪುರ ತಾಲ್ಲೂಕಿನ ವಜ್ರಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಳಚೆ, ತಳಕೆಬೈಲ್, ಬೀಗಾರ ಹಾಗೂ ಡಬ್ಗುಳಿ ಭೂ ಕುಸಿತದ ಸಾಧ್ಯತೆ ಇರುವ ಸ್ಥಳಗಳಾಗಿವೆ. ತಳಕೇ ಬೈಲಿನಲ್ಲಿ ರಸ್ತೆ ಕುಸಿತದ ನಂತರ ಅಪಾಯ ತಪ್ಪಿಸಲು ತಂತಿ ಅಳವಡಿಸಿ ಜನ ಸಮೀಪ ಹೋಗದಂತೆ ತಡೆಯಲಾಗಿದೆ. ಜೊಯಿಡಾ ತಾಲ್ಲೂಕಿನಲ್ಲಿ ಹಾದು ಹೋಗಿರುವ ಸದಾಶಿವಗಡ-ಔರಾದ್ ರಾಜ್ಯ ಹೆದ್ದಾರಿ ಮಳೆಗಾಲದಲ್ಲಿ ಅಣಶಿ ಘಟ್ಟ, ದೋಣಪಾ ಮತ್ತು ಚಾಪೋಲಿ ಬಳಿ ಕುಸಿಯುತ್ತಿದೆ. ದೋಣಪಾದಲ್ಲಿ ತಡೆಗೋಡೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.

ಡಿಗ್ಗಿ ಭಾಗದ ಸುಮಾರು 10 ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಉಳವಿ-ಗೋವಾ ಗಡಿ ರಾಜ್ಯ ಹೆದ್ದಾರಿ ಕಾಳಪೆ, ಪಣಸಗಾಳಿ ಬಳಿ ರಸ್ತೆಯಲ್ಲಿ ಹಲವು ಕಡೆಗಳಲ್ಲಿ ಮಣ್ಣು ಕುಸಿದು ಸಂಚಾರ ಸಮಸ್ಯೆ ಎದುರಾಗುತ್ತದೆ. ಕಾಳಪೆಯ ಒಂದು ಕಡೆ ಮಾತ್ರ ತಡೆಗೋಡೆ ನಿರ್ಮಿಸಲಾಗಿದೆ. ದೋಣಪಾದಲ್ಲಿ ರಾಜ್ಯ ಹೆದ್ದಾರಿಯಲ್ಲಿ ಸೇತುವೆಯ ಒಂದು ಭಾಗದ ಮಣ್ಣು ಕುಸಿಯುತ್ತಿದ್ದು ಮಳೆ ಪ್ರಾರಂಭವಾದರೂ ಲೋಕೋಪಯೋಗಿ ಇಲಾಖೆ ಇನ್ನೂ ಕ್ರಮ ಕೈಗೊಂಡಿಲ್ಲ ಎಂಬುದು ಜನರ ಆರೋಪ.

ಗೋಕರ್ಣದ ಮುಖ್ಯ ಸಮುದ್ರ ತೀರದಲ್ಲಿರುವ ರಾಮತೀರ್ಥದ ದೇವಸ್ಥಾನದ ಬಳಿ, ಕಳೆದ ಜುಲೈ ತಿಂಗಳಲ್ಲಿ ಬಂದ ಭಾರಿ ಮಳೆಗೆ ಕುಸಿದು ಬಿದ್ದ ಗುಡ್ಡದ ಕಲ್ಲು, ಮಣ್ಣಿನ ರಾಶಿ ಈವರೆಗೂ ತೆರವುಗೊಂಡಿಲ್ಲ. ಈ ವರ್ಷದ ಮಳೆಗೆ ದೇವಸ್ಥಾನಕ್ಕೂ ಹಾನಿಯಾಗಬಹುದು ಎಂಬ ಆತಂಕವನ್ನು ಅಂಬೇಕರ ವ್ಯಕ್ತಪಡಿಸುತ್ತಾರೆ.


ಉದಯವಾಹಿನಿ ಚಿತ್ರ

### ಮುಟ್ಟಳ್ಳಿಯಲ್ಲಿ ಆತಂಕ

ಭಟ್ಕಳ ತಾಲ್ಲೂಕಿನ ಮುಟ್ಟಳ್ಳಿಯಲ್ಲಿ ಮೂರು ವರ್ಷದ ಹಿಂದೆ ಗುಡ್ಡ ಕುಸಿದು 4 ಜನ ಮೃತಪಟ್ಟಿದ್ದರು. ಈ ಸ್ಥಳದಲ್ಲಿ ಈವರೆಗೆ ಗುಡ್ಡ ಕುಸಿತ ತಡೆಗೆ ಸುರಕ್ಷತಾ ಕ್ರಮವಾಗಿಲ್ಲ. ಪ್ರತಿ ವರ್ಷ ಮಳೆಗಾಲದಲ್ಲಿ ಗುಡ್ಡದ ತಪ್ಪಲಿನಲ್ಲಿರುವ ನಿವಾಸಿಗಳಿಗೆ ಮನೆ ಖಾಲಿ ಮಾಡಲು ಕಂದಾಯ ಇಲಾಖೆ ನೋಟಿಸ್ ಜಾರಿ ಮಾಡುತ್ತದೆ. ಅದರ ಹೊರತಾಗಿ ಯಾವುದೇ ಪರಿಹಾರ ಕಾರ್ಯವಾಗಿಲ್ಲ ಎನ್ನುತ್ತಾರೆ ಸ್ಥಳೀಯರಾದ ಲೋಕೇಶ ನಾಯ್ಕ. ಮುಟ್ಟಳ್ಳಿಯ ಮುನ್ನನಮನೆಯಲ್ಲಿ ಈ ಮಳೆಗೆ ಭೂಕುಸಿತವಾಗಿದೆ.



### ಶಿರೂರು: ಎಚ್ಚರಗೊಳ್ಳದ ಆಡಳಿತ

ಅಂಕೋಲಾ ತಾಲ್ಲೂಕಿನ ಶಿರೂರು ಗುಡ್ಡ ಕುಸಿತದಂತಹ ಘೋರ ದುರಂತ ಸಂಭವಿಸಿದರೂ ಜಿಲ್ಲಾಡಳಿತ ಎಚ್ಚರಗೊಂಡಿಲ್ಲ. ಶಿರೂರು ಗುಡ್ಡ ಕುಸಿತದಿಂದ ಮಗ್ಗಲಿನಲ್ಲಿರುವ ಗಂಗಾವಳಿ ನದಿಯಲ್ಲಿ ತುಂಬಿದ ಮಣ್ಣು ವರ್ಷವಾದರೂ ತೆರವುಗೊಳಿಸಿಲ್ಲ. ಸುತ್ತಮುತ್ತಲಿನ ಗ್ರಾಮಗಳಾದ ಬೆಳಸೆ ವಾಸರ ಕುದ್ರಿಗೆ ಸಗಡಗೇರಿ ಮೊಗಟಾ ಉಳುವರೆ ಗ್ರಾಮಸ್ಥರು ಪ್ರವಾಹ ಭೀತಿ ಎದುರಿಸುತ್ತಿದ್ದಾರೆ. ಪುನಃ ಗುಡ್ಡ ಕುಸಿಯುವ ಆತಂಕವೂ ಸ್ಥಳೀಯರಲ್ಲಿದೆ. ನಿತ್ಯ ನೂರಾರು ವಾಹನಗಳು ಗುಡ್ಡ ಕುಸಿತದ ಸ್ಥಳದ ರಾಷ್ಟ್ರೀಯ ಹೆದ್ದಾರಿ ಮೂಲಕವೇ ಸಂಚರಿಸುತ್ತವೆ ಆದರೂ ಕೂಡಾ ಇಲ್ಲಿಯವರೆಗೆ ಯಾವುದೇ ಮುಂಜಾಗ್ರತೆ ಕ್ರಮ ಕೈಗೊಂಡಿಲ್ಲ.


# ಹೈದರಾಬಾದ್- ಬೀದರ್ ನಡುವೆ ವಂದೇ ಭಾರತ್ ಆರಂಭಿಸಿ
## ಕೇಂದ್ರ ಸಚಿವರಿಗೆ ಮನವಿ ಸಲ್ಲಿಸಿದ ಬಂಡೆಪ್ಪ ಖಾಶೆಂಪುರ್

• ಉದಯವಾಹಿನಿ ಬೀದರ್

ಬೀದರ್‌ನಿಂದ ಹೈದರಾಬಾದ್ ನಗರಕ್ಕೆ ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಪ್ರಾರಂಭಿಸಬೇಕು ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವರಾದ ವಿ ಸೋಮಣ್ಣರವರಿಗೆ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಮನವಿ ಮಾಡಿದ್ದಾರೆ.

ವಿವಿಧ ರೈಲ್ವೆ ಯೋಜನೆಗಳ ಶಂಕುಸ್ಥಾಪನೆಗಾಗಿ ಬೀದರ್ ರೈಲ್ವೆ ನಿಲ್ದಾಣಕ್ಕೆ ಆಗಮಿಸಿದ್ದ ಕೇಂದ್ರ ಸಚಿವ ವಿ ಸೋಮಣ್ಣರವರನ್ನು ಭೇಟಿಯಾದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು, ತಾವು ಬರೆದಿದ್ದ ಮನವಿ ಪತ್ರವನ್ನು ಸಲ್ಲಿಸಿ, ದೈನಂದಿನ ವಂದೇ ಭಾರತ್ ಎಕ್ಸ್ ಪ್ರೆಸ್ ರೈಲ್ವೆ ಸೇವೆಯ ಅವಶ್ಯಕತೆಯ ಬಗ್ಗೆ ಕೇಂದ್ರ ಸಚಿವರಿಗೆ ಮನವರಿಕೆ ಮಾಡುವ ಪ್ರಯತ್ನ ಮಾಡಿದರು.

'ನೀವು ನಮ್ಮ ಬೀದರ್ ಜಿಲ್ಲೆಗೆ ಭೇಟಿ ನೀಡುತ್ತಿದ್ದೀರಿ ಎಂದು ಕೇಳಿ ನನಗೆ ತುಂಬಾ ಸಂತೋಷವಾಯಿತು. ಬೀದರ್ ಜನರ ಪರವಾಗಿ ನಾನು ನಿಮ್ಮನ್ನು ಹೃತ್ಪೂರ್ವಕವಾಗಿ


ಉದಯವಾಹಿನಿ ಚಿತ್ರ

ಸ್ವಾಗತಿಸುತ್ತೇನೆ. ಈ ಸ್ವಾಗತದ ಜೊತೆಗೆ, ಸಾರ್ವಜನಿಕ ಹಿತಾಸಕ್ತಿಯ ವಿಷಯಕ್ಕೆ ಸಂಬಂಧಿಸಿದಂತೆ ನಾನು ನಿಮ್ಮ ಮುಂದೆ ಒಂದು ವಿನಮ್ರ ವಿನಂತಿಯನ್ನು ಇಡಲು ಬಯಸುತ್ತೇನೆ.

ಕರ್ನಾಟಕದ ಉತ್ತರ ತುದಿಯಲ್ಲಿರುವ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶದ ಭಾಗವಾಗಿರುವ ನಮ್ಮ ಬೀದರ್ ಜಿಲ್ಲೆ ಹೈದರಾಬಾದ್ ನಗರದಿಂದ ಕೇವಲ 130 ಕಿ.ಮೀ ದೂರದಲ್ಲಿದೆ. ಬೀದರ್ನಿಂದ ಗಮನಾರ್ಹ ಸಂಖ್ಯೆಯ ಜನರು ಉದ್ಯೋಗ, ಶಿಕ್ಷಣ, ಆರೋಗ್ಯ ರಕ್ಷಣೆ, ವ್ಯಾಪಾರ ಮತ್ತು ಇತರ ಸೇವೆಗಳಿಗಾಗಿ ಪ್ರತಿದಿನ ಹೈದರಾಬಾದ್‌ಗೆ ಪ್ರಯಾಣಿಸುತ್ತಾರೆ.

### ಅಪಾರ ಪ್ರಯೋಜನಕಾರಿ

ಬೀದರ್ ಮತ್ತು ಹೈದರಾಬಾದ್ ನಡುವೆ ಈಗಾಗಲೇ ಇಂಟರ್‌ಸಿಟಿ ರೈಲುಗಳು ಕಾರ್ಯನಿರ್ವಹಿಸುತ್ತಿದ್ದರೂ, ಇವುಗಳಿಗೆ ಹೋಲಿಸಿದರೆ, ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಹೆಚ್ಚು ವೇಗವಾಗಿರುತ್ತವೆ ಮತ್ತು ಸುಧಾರಿತ ಸೌಲಭ್ಯಗಳು ಮತ್ತು ಆಧುನಿಕ ಸೌಲಭ್ಯಗಳನ್ನು ಹೊಂದಿವೆ. ಬೀದರ್ ಮತ್ತು ಹೈದರಾಬಾದ್ ನಡುವೆ ದೈನಂದಿನ ವಂದೇ ಭಾರತ್ ಎಕ್ಸ್‌ಪ್ರೆಸ್ (ಹೈ-ಸ್ಪೀಡ್ ರೈಲು) ಸೇವೆಯನ್ನು ಪರಿಚಯಿಸಲು ವ್ಯವಸ್ಥೆ ಮಾಡಿದರೆ, ಅದು ಅಪಾರ ಪ್ರಯೋಜನಕಾರಿಯಾಗುತ್ತದೆ.

## ಸಮಾಜ ಸೇವೆಯೇ ನಿಜವಾದ ತಪಸ್ಸು: ಶ್ರೀ

• ಉದಯವಾಹಿನಿ ಬಸವಕಲ್ಯಾಣ

ನಿಸ್ವಾರ್ಥ ಭಾವ ಹಾಗೂ ಶುದ್ಧ ಅಂತಃ ಕರಣದಿಂದ ಮಾಡುವ ಸಮಾಜ ಸೇವೆಯೇ ನಿಜವಾದ ತಪಸ್ಸು ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ಕಮಲಾಪುರ ತಾಲ್ಲೂಕಿನ ಕಲಕುಟಗಾ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಹನುಮಾನ ಮಂದಿರದ ಉದ್ಘಾಟನೆ, ಆಂಜನೇಯ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಸಮಾರಂಭದ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು ನಮ್ಮ ದೇಹವೇ ಒಂದು ನಡೆದಾಡುವ ಮಂದಿರವಾಗಿದ್ದು, ಅದರ ಪಾವಿತ್ರ್ಯತೆಗೆ ಧಕ್ಕೆ ಬಾರದಂತೆ ಸದಾಕಾಲ ಜಾಗೃತರಾಗಿರಬೇಕು.

ದೇಹವೆಂಬ ಮಂದಿರದಲ್ಲಿ ಅರಿಷಡ್ ವೈರಿಗಳೆಂಬ ಕಸ ಬೀಳದಂತೆ ವಿವೇಕ ಪ್ರಜ್ಞೆಯ ಎಚ್ಚರಿಕೆಯ ಗಂಟೆ ಮೊಳಗುತ್ತಿರಬೇಕು.

ಪ್ರತಿಯೊಬ್ಬರ ಹೃದಯ ವೀರ ಹನುಮಾನ ದೇವರ ಆವಾಸಸ್ಥಾನವಾದಾಗ ರಾಮ ದೇವರ ಅನುಗ್ರಹ ದೊರಕುತ್ತದೆ. ಯುವಶಕ್ತಿ ನಮ್ಮ ದೇಶದ ದೊಡ್ಡ ಆಸ್ತಿಯಾಗಿರುವುದರಿಂದ,


ಉದಯವಾಹಿನಿ ಚಿತ್ರ

ದೇಶದ ತಾರುಣ್ಯ ಅಡ್ಡದಾರಿ ಹಿಡಿಯದೆ, ರಾಷ್ಟ್ರ ಕಟ್ಟುವ ಬೃಹತ್ ಕಾರ್ಯಕ್ಕೆ ಹೆಗಲು ನೀಡಬೇಕು, ಅಂದಾಗ ಮಾತ್ರ ಸಮರ್ಥ ಸಮಾಜ, ಸದೃಢ ರಾಷ್ಟ್ರ ನಿರ್ಮಾಣವಾಗಲು ಸಾಧ್ಯ. ಅನ್ಯ ಭಾವವಿಲ್ಲದೆ ಅನೋನ್ಯತೆಯಿಂದ ಬಾಳುತ್ತಿರುವ ಕಲಕುಟಗಾ ಗ್ರಾಮದ ಸಮಸ್ತ ಜನತೆಗೆ ವೀರ ಹನುಮಾನ ಮಂದಿರ ಸ್ಫೂರ್ತಿಯ ಕೇಂದ್ರವಾಗಲಿ, ಹಾರಕೂಡಧೀಶ ಸರ್ವರಿಗೂ ಒಳಿತು ಮಾಡಲಿ ಎಂದು ಶುಭ ಹಾರೈಸಿದರು.

ಚಂದ್ರಕಾಂತ ಬಿರಾದಾರ, ಶಮಸುದ್ದಿನ್ ಪಟೇಲ್, ಖಮರುದ್ದಿನ್ ಪಟೇಲ್, ತಾಜುದ್ದೀನ್ ಪಟೇಲ್, ಮಾಹಾಂತಪ್ಪ ಗೋಳೇದ, ಶರಣಪ್ಪ ಬಿರಾದಾರ, ವಿಜಯಕುಮಾರ ಉಪಸ್ಥಿತರಿದ್ದರು.

## ರಾಷ್ಟ್ರೀಯ ಹೆದ್ದಾರಿ ತಡೆಗೋಡೆಯಲ್ಲಿ ಬಿರುಕು: ಸ್ಥಳೀಯರಲ್ಲಿ ಆತಂಕ

• ಉದಯವಾಹಿನಿ ಉಪ್ಪಿನಂಗಡಿ

ರಾಷ್ಟ್ರೀಯ ಹೆದ್ದಾರಿ ಅಗಲೀಕರಣ ನಿಮಿತ್ತ ನಿರ್ಮಿಸಲಾದ ತಡೆಗೋಡೆಯ ಗುಣಮಟ್ಟವನ್ನು ಪ್ರಶ್ನಿಸುವಂತೆ ಉಪ್ಪಿನಂಗಡಿಯಲ್ಲಿ ತಡೆಗೋಡೆಯಲ್ಲಿ ಬಿರುಕು ಕಾಣಿಸಿಕೊಂಡಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿದೆ. ಹದಿನೈದು ಅಡಿಗಿಂತಲೂ ಎತ್ತರವಾದ ತಡೆಗೋಡೆ ನಿರ್ಮಾಣದ ಸಮಯದಲ್ಲಿಯೇ ಸ್ಥಳೀಯ ಜಾಗೃತ ನಾಗರಿಕರು ತಡೆಗೋಡೆಯ ಗುಣಮಟ್ಟದ ಬಗ್ಗೆ ಸಂದೇಹವನ್ನು ವ್ಯಕ್ತಪಡಿಸಿ ಇಲಾಖಾಧಿಕಾರಿಗಳ ಗಮನ ಸೆಳೆದಿದ್ದರು.

ಆ ವೇಳೆ ತಂತ್ರಜ್ಞರಿಂದ ಅನುಮೋದನೆ ಪಡೆದ ರೀತಿಯಲ್ಲೇ ತಡೆಗೋಡೆಗಳ ನಿರ್ಮಾಣ ಕಾರ್ಯ ಮಾಡಲಾಗುತ್ತಿದೆ ಎಂದು ಸ್ಪಷ್ಟನೆ ನೀಡಲಾಗಿತ್ತು. ಇದೀಗ ಕಾಮಗಾರಿ ನಡೆದು ವರ್ಷವೂ ಕಳೆದಿಲ್ಲ. ಅದಾಗಲೇ ತಡೆಗೋಡೆಯ ಮಧ್ಯ ಭಾಗದಲ್ಲೇ ಗುರುತರವಾದ ಬಿರುಕು ಕಾಣಿಸಿಕೊಂಡಿದ್ದು, ಇದು ಸುರಕ್ಷತೆಯನ್ನು ಸಂಶಯಿಸುವಂತೆ ಮಾಡಿದೆ. ಇದೇ ಭಾಗದ ಹೆದ್ದಾರಿಯ ಇನ್ನೊಂದು ಪಾರ್ಶ್ವದಲ್ಲಿ ಇದೇ ರೀತಿ ನಿರ್ಮಾಣವಾದ ತಡೆಗೋಡೆಯು ಎರಡು ವರ್ಷಗಳ ಹಿಂದೆ ಬುಡದಿಂದಲೇ ಮಗುಚಿ ಬಿದ್ದಿದ್ದು, ಅಂದು ಜನ ಸಂಚಾರವಿಲ್ಲದ ಸ್ಥಳವಾಗಿದ್ದರಿಂದ ಯಾವುದೇ ಜೀವ ಹಾನಿ ಉಂಟಾಗಿರಲಿಲ್ಲ. ಆದರೆ ಇದೀಗ ಬಿರುಕು ಕಾಣಿಸಿಕೊಂಡ ತಡೆಗೋಡೆಯು ಶಾಲಾ ರಸ್ತೆಯ ಪಾರ್ಶ್ವದಲ್ಲಿರುವುದರಿಂದ ಮತ್ತೆ ಅದೇ ರೀತಿ ಮಗುಚಿ ಬಿದ್ದರೆ ಊಹಿಸಲಸಾಧ್ಯವಾದ ಅನಾಹುತ ಸಂಭವಿಸಬಹುದಾಗಿದೆ.

> ಕಾಮಗಾರಿ ನಡೆದ ಕೆಲ ತಿಂಗಳಲ್ಲೇ ಈ ರೀತಿಯ ಬಿರುಕು ಕಾಣಿಸಿರುವುದು ಕಾಮಗಾರಿಯ ಗುಣಮಟ್ಟವನ್ನು ಶಂಕಿಸುವಂತೆ ಮಾಡಿದೆ. ಮುಖ್ಯವಾಗಿ ಶಾಲಾ ಮಕ್ಕಳ ಸಂಚಾರದ ರಸ್ತೆಯಲ್ಲಿರುವ ಈ ತಡೆಗೋಡೆಯ ಬಿರುಕಿನ ಬಗ್ಗೆ ಸೂಕ್ತ ಪರಿಶೀಲನೆ ನಡೆಸಬೇಕು. ಜನರ ಸುರಕ್ಷತೆ ವಿಚಾರದಲ್ಲಿ ಯಾವುದನ್ನೂ ಲಘುವಾಗಿ ಪರಿಗಣಿಸಬೇಡಿ
> -ಅಶೋಕ್ ರೈ, ಶಾಸಕ


ಉದಯವಾಹಿನಿ ಚಿತ್ರ

ಈ ಕಾರಣದಿಂದ ಈ ರೀತಿ ಬಿರುಕು ಮೂಡಲು ಕಾರಣವಾದ ಕಾಮಗಾರಿಯ ಗುಣಮಟ್ಟದ ಬಗ್ಗೆ ಸಂಬಂಧಿತ ಇಲಾಖೆ ನಿಗಾವಹಿಸಬೇಕಾಗಿದೆ.ಘಟನಾ ಸ್ಥಳಕ್ಕೆ ಪುತ್ತೂರು ಶಾಸಕ ಅಶೋಕ್ ಕುಮಾರ್ ರೈಯವರ ಸೂಚನೆಯ ಮೇರೆಗೆ ರಾಷ್ಟ್ರೀಯ ಹೆದ್ದಾರಿ ಇಲಾಖಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಯಾವುದನ್ನೂ ಲಘುವಾಗಿ ಪರಿಗಣಿಸದಿರಿ:** ಶಾಸಕಹೆದ್ದಾರಿ ಕಾಮಗಾರಿಯಲ್ಲಿ ನಿರ್ಮಿತವಾದ ತಡೆಗೋಡೆಯಲ್ಲಿ ಬಿರುಕು ಕಾಣಿಸಿಕೊಂಡ ಬಗ್ಗೆ ಕಳವಳ ವ್ಯಕ್ತಪಡಿಸಿದ ಪರಿಶೀಲನೆಗೆ ಒಳಪಡಿಸಲಾಗುವುದು ಯೋಜನಾಧಿಕಾರಿ ಬಿರುಕು ಕಾಣಿಸಿಕೊಂಡ ತಡೆಗೋಡೆಯನ್ನು ವೀಕ್ಷಿಸಿದ ಕೆಎನ್‌ಆರ್ ಸಂಸ್ಥೆಯ ಯೋಜನಾಧಿಕಾರಿ ಮಹೇಂದ್ರ ಕುಮಾರ್ ಸಿಂಗ್.

## ರಸಗೊಬ್ಬರ ಪ್ರಮಾಣ ಇಳಿಕೆ ಅಗತ್ಯ

• ಉದಯವಾಹಿನಿ ಗದಗ

ರಾಜ್ಯದಲ್ಲಿ ರಸಗೊಬ್ಬರ ಬಳಕೆಯ ಪ್ರಮಾಣವು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. 2000-01ರಲ್ಲಿ 27.91 ಲಕ್ಷ ಮೆ.ಟನ್ ನಷ್ಟು ಇದ್ದ ಬಳಕೆ ಪ್ರಮಾಣವು 2024-25ನೇ ಸಾಲಿಗೆ 48.86 ಲಕ್ಷ ಮೆ.ಟನ್ ಆಗಿದೆ. ರಸಗೊಬ್ಬರ ಬಳಕೆಯ ಪ್ರಮಾಣವನ್ನು ಮಣ್ಣಿನ ಆರೋಗ್ಯ ಕಾಪಾಡುವ ದೃಷ್ಟಿಯಿಂದ ಕಡಿಮೆಗೊಳಿಸಬೇಕಾಗಿದೆ.

ಮಣ್ಣಿನ ಆರೋಗ್ಯವು ಚೆನ್ನಾಗಿರಬೇಕಾದಲ್ಲಿ (ಸಾರಜನಕ:ರಂಜಕ:ಪೊಟ್ಯಾಶ್) ಅನುಪಾತವು 4:2:1 ಇರಬೇಕು. ರಾಜ್ಯದಲ್ಲಿ 2024-25ರಲ್ಲಿ 4.79:2.45:1.00 ಆಗಿದೆ, ಅದೇ ಗದಗ ಜಿಲ್ಲೆಯಲ್ಲಿ 7.44:4.31:1.00 ಇದೆ. ಯೂರಿಯಾ ಮತ್ತು ಡಿ.ಎ.ಪಿ.ರಸಗೊಬ್ಬರಗಳ ಹೆಚ್ಚಿನ ಬಳಕೆಯಿಂದ ಮಣ್ಣಿನ ಫಲವತ್ತತೆ ಕ್ಷೀಣಿಸುತ್ತಿದೆ.

ಕಾರಣ, ರೈತ ಬಾಂಧವರು ರಸಗೊಬ್ಬರಗಳ ಸಮತೋಲನ ಬಳಕೆ ಹಾಗೂ ಸಂಯುಕ್ತ ರಸಗೊಬ್ಬರಗಳ ಬಳಕೆಗೆ ಮುಂದಾಗಬೇಕು. ಮಣ್ಣಿನ ಫಲವತ್ತತೆ ಕಾಪಾಡಲು ಸಾವಯವ ಇಂಗಾಲ ಮುಖ್ಯವಾಗಿದೆ.


ಉದಯವಾಹಿನಿ ಚಿತ್ರ

ಪೋಷಕಾಂಶಗಳ ಲಭ್ಯತೆ, ನೀರು ಹಿಡಿದಿಟ್ಟುಕೊಳ್ಳುವ ಶಕ್ತಿ, ಮಣ್ಣಿನ ಭೌತಿಕ ಮತ್ತು ಜೈವಿಕ ಗುಣಧರ್ಮಗಳನ್ನು ಕಾಪಾಡಲು ಇದು ಅವಶ್ಯಕವಾಗಿದೆ. ಸಾವಯವ ಇಂಗಾಲದ ಪ್ರಮಾಣವು ಶೇ.0.5ಕ್ಕಿಂತ ಕಡಿಮೆ ಇದ್ದರೆ ಆ ಮಣ್ಣಲ್ಲಿ ಸಾವಯವ ಇಂಗಾಲದ ಕೊರತೆ ಇದೆ ಎಂದು ಪರಿಗಣಿಸಲಾಗುತ್ತದೆ. ರಾಜ್ಯಾದ್ಯಂತ ಮಣ್ಣು ಮಾದರಿಗಳ ಪರೀಕ್ಷೆಯ ಆಧಾರದ ಮೇಲೆ ರಾಜ್ಯದಲ್ಲಿ ಸಾವಯವ ಇಂಗಾಲದ ಕೊರತೆ ಶೇ. 42.15ರಷ್ಟು ಪ್ರದೇಶದಲ್ಲಿ ಕಂಡುಬಂದಿದೆ.

ಗದಗ ಜಿಲ್ಲೆಯಲ್ಲಿ ಶೇ.21.37ರಷ್ಟು ಪ್ರದೇಶದಲ್ಲಿ ಶೇ.0.5ಕ್ಕಿಂತ ಕಡಿಮೆ ಸಾವಯವ ಇಂಗಾಲ ಇದ್ದು, ಶೇ.78.63ರಷ್ಟು ಪ್ರದೇಶದಲ್ಲಿ ಶೇ.0.5ರಿಂದ 1 ಸಾವಯವ ಇಂಗಾಲ ಕಂಡುಬಂದಿದೆ.

## ವಿದ್ಯಾವಂತ ಯುವ ಪೀಳಿಗೆ ದೇಶದ ಆಸ್ತಿ : ಯಶ್ಪಾಲ್ ಸುವರ್ಣ

• ಉದಯವಾಹಿನಿ ಉಡುಪಿ

2025-26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಪ್ರಾರಂಭೋತ್ಸವ ಅಂಗವಾಗಿ ಉಡುಪಿ ವಿಧಾನಸಭಾ ಕ್ಷೇತ್ರದ ಉಡುಪಿ ನಗರಸಭೆಯ ವಳಕಾಡು ವಾರ್ಡಿನ ಸರ್ಕಾರಿ ಸಂಯುಕ್ತ ಪ್ರೌಢಶಾಲೆಗೆ ಉಡುಪಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಯಶ್ ಪಾಲ್ ಸುವರ್ಣ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸಿಹಿ ತಿಂಡಿ ವಿತರಿಸಿ, ಆತ್ಮೀಯವಾಗಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಯಶ್‌ಪಾಲ್ ಸುವರ್ಣ ದೇಶದ ಭವಿಷ್ಯ ರೂಪಿಸಲಿರುವ ಯುವ ಪೀಳಿಗೆಯ ವಿದ್ಯಾರ್ಥಿಗಳಿಗೆ ಗುಣ ಮಟ್ಟದ ಶಿಕ್ಷಣ ನೀಡಿ ದೇಶಕ್ಕೆ ಆಸ್ತಿಯನ್ನಾಗಿಸುವ ನಿಟ್ಟಿನಲ್ಲಿ ಉಡುಪಿ ಜಿಲ್ಲೆಯ ಶಿಕ್ಷಣ ಸಂಸ್ಥೆಗಳು ನಿರಂತರ ಸಾಧನೆ ಮಾಡುತ್ತಿದ್ದು, ಎಲ್ಲಾ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದರು.

## ವಿವಿಧ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ

• ಉದಯವಾಹಿನಿ ಕಾರಟಗಿ

110/11ಕೆವಿ ಕ.ವಿ.ಪ್ರನಿ, ವಿದ್ಯುತ್ ವಿತರಣಾ ಉಪ-ಕೇಂದ್ರದಲ್ಲಿ ಕಾರ್ಯ ನಿರ್ವಾಹಣೆ ಕೈಗೊಳ್ಳುವ ನಿಮಿತ್ತ ಜೂನ್ 03ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕಾರಟಗಿ ಉಪ-ವಿಭಾಗದ ಕಾರಟಗಿ ಶಾಖಾ ವ್ಯಾಪ್ತಿಯಲ್ಲಿ ಬೆಳಿಗ್ಗೆ 09:00 ರಿಂದ ಸಾಯಂಕಾಲ 06:00 ಗಂಟೆವರೆಗೆ 110/11ಕೆವಿ ಕಾರಟಗಿ ಕ.ವಿ.ಪ್ರನಿ, ವಿದ್ಯುತ್ ವಿತರಣಾ ಕೇಂದ್ರದಿಂದ ಸರಬರಾಜುಗೊಂಡಿರುವ ಕಾರಟಗಿ ಪಟ್ಟಣ, ಮೈಲಾಪೂರ, ಬಸವಣ್ಣಕ್ಯಾಂಪ್, ಬೇವಿನಾಳ, ನಾಗನಕಲ್, ಪನ್ನಾಪೂರ, ಚೆಳ್ಳೂರು, ಚೆಳ್ಳೂರುಕ್ಯಾಂಪ್, ತೊಂಡಿಹಾಳ, ಹಗೇದಾಳ, 28ನೇ ಕಾಲುವೆ, 29ನೇ ಕಾಲುವೆ, ಹುಳ್ಳಿಹಾಳ, ಹುಳಿಹಾಳ ಕ್ಯಾಂಪ್, ದುಂಡಗಿ, ಸೋಮನಾಳ, ಗುಡೂರು, ಸೋಮನಾಳ ಕ್ಯಾಂಪ್, ಹಳೇ ಜೂರಟಗಿ, ಹೊಸ ಜೂರಟಗಿ ಮರ್ಲಾನಹಳ್ಳಿ, ಎಚ್. ಬಸವಣ್ಣಕ್ಯಾಂಪ್, ಹಾಗೂ ಇನ್ನಿತರ ಸುತ್ತಮುತ್ತಲಿನ ಹಳ್ಳಿಗಳಲ್ಲಿ ವಿದ್ಯುತ್ ವ್ಯತ್ಯಯವಾಗುತ್ತದೆ. ಕಾರಣ ಜೆಸ್ಕಾಂ ಕಂಪನಿಯೊಂದಿಗೆ ಸಹಕರಿಸಲಾಗಿದೆ ಮೂಲಕ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೂಚನೆ - ಈ ಸದರಿ ಮೇಲಿನ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ ಕಾರ್ಯಗಳನ್ನು ಮಾಡಬಾರದೆಂದು ವಿನಂತಿಸಿದ್ದಾರೆ ಒಂದು ವೇಳೆ ದುರಸ್ತಿ ಕೆಲಸ ಮಾಡಿದಲ್ಲಿ ಜೆಸ್ಕಾಂ ಇಲಾಖೆ ಜವಾಬ್ದಾರರಲ್ಲ ಎಂದು ಈ ಮೂಲಕ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಕಾರ್ಯ ಮತ್ತು ಪಾಲನ ಉಪ ವಿಭಾಗ ಅಧಿಕಾರಿಗಳು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ .

# ಭೂಕುಸಿತ: ಇನ್ನೂ ಸಿಗದ ಪುನರ್ವಸತಿ, ಜನವಸತಿ ಸ್ಥಳಾಂತರಕ್ಕೆ ತಯಾರಿ

• ಮೂಡಿಗೆರೆ ತಾಲ್ಲೂಕಿನ ಮಲೆಮನೆ ಗ್ರಾಮದ ನಿರಾಶ್ರಿತರಿಗೆ ಆರು ವರ್ಷ ಕಳೆದರೂ ನೆಲೆಯಿಲ್ಲವಾಗಿದೆ

• ಉದಯವಾಹಿನಿ ಚಿಕ್ಕಮಗಳೂರು

ಗುಡ್ಡ ಕುಸಿತ ಮತ್ತು ಪ್ರವಾಹ ಪರಿಸ್ಥಿತಿಯನ್ನು ಪ್ರತಿ ವರ್ಷ ಎದುರಿಸುವ ಕಾಫಿನಾಡಿನಲ್ಲಿ ಭೂಕುಸಿತದಿಂದ ತೊಂದರೆಗೆ ಸಿಲುಕಿದ ಹಲವು ಕುಟುಂಬಗಳು ಇಂದಿಗೂ ಪುನರ್ವಸತಿ ಸಿಗದೆ ಪರದಾಡುತ್ತಿವೆ. ಮತ್ತೊಂದೆಡೆ ಭೂಕುಸಿತ ಸಂಭವಿಸಬಹುದಾದ ಮೂರು ಸ್ಥಳಗಳನ್ನು ಗುರುತಿಸಿರುವ ಜಿಲ್ಲಾಡಳಿತ, ಅಲ್ಲಿನ ಜನವಸತಿ ಸ್ಥಳಾಂತರಕ್ಕೆ ಸಿದ್ಧತೆ ನಡೆಸಿದೆ.

ಮೂಡಿಗೆರೆ ತಾಲ್ಲೂಕಿನ ಮಲೆಮನೆ ಗ್ರಾಮದ ನಿರಾಶ್ರಿತರಿಗೆ ಆರು ವರ್ಷ ಕಳೆದರೂ ನೆಲೆಯಿಲ್ಲವಾಗಿದೆ. ಬಣಕಲ್, ಮೂಡಿಗೆರೆ ಮತ್ತು ಚಿಕ್ಕಮಗಳೂರಿನಲ್ಲಿ ಬಾಡಿಗೆ ಮನೆಗಳಲ್ಲಿ ಜೀವನ ನಡೆಸುತ್ತಿದ್ದಾರೆ. ಪುನರ್ವಸತಿ ಅವರ ಪಾಲಿಗೆ ಮರೀಚಿಕೆಯೇ ಆಗಿದೆ.

ಮತ್ತೊಂದೆಡೆ ಕೊಪ್ಪ ತಾಲ್ಲೂಕಿನ ಗುಡ್ಡೆತೋಟ, ಚಿಕ್ಕಮಗಳೂರು ತಾಲ್ಲೂಕಿನ ಅರೆನೂರು ಹಾಗೂ ಬಾಳೆಹೊನ್ನೂರು ಸಮೀಪದ ಬಂಡಿಮಠದ ಹಲವು ಕುಟುಂಬಗಳನ್ನು ಸ್ಥಳಾಂತರಿಸಲು ಮುಂದಾಗಿದೆ.


ಉದಯವಾಹಿನಿ ಚಿತ್ರ

ಪುನರ್ವಸತಿ ಅವರ ಪಾಲಿಗೆ ಮರೀಚಿಕೆ

ಪ್ರತಿವರ್ಷ ಮಳೆಗಾಲದಲ್ಲಿ ಅನಾಹುತ ಸಂಭವಿಸುವುದು ಮಲೆನಾಡಿನಲ್ಲಿ ಈಗ ಸಾಮಾನ್ಯವಾಗಿದೆ. ಗುಡೇತೋಟ ಮತ್ತು ಅರೆನೂರು ಬಳಿ ಗುಡ್ಡ ಕುಸಿತದ ಆತಂಕ ಇದೆ. ಬಾಳೆಹೊನ್ನೂರಿನ ಬಂಡಿಮಠ ಹೊಳೆಬಾಗಿಲು ಪ್ರದೇಶದಲ್ಲಿ ಪ್ರವಾಹ ಭೀತಿ ಇದೆ.

ಅರೆನೂರು ಗ್ರಾಮದ ಸಮೀಪ 5 ಕೂಲಿ ಕಾರ್ಮಿಕ ಕುಟುಂಬಗಳು ಗುಡ್ಡ ಕುಸಿತವಾಗುವ ಸ್ಥಳದಲ್ಲಿ ವಾಸಿಸುತ್ತಿವೆ. ಈ ಕುಟುಂಬಗಳ ಸ್ಥಳಾಂತರಕ್ಕೆ ಜಿಲ್ಲಾಡಳಿತ ಸಿದ್ಧತೆ ನಡೆಸಿದೆ. ಈಗ ವಾಸಮಾಡುತ್ತಿರುವ ಸ್ಥಳ ಗೋಮಾಳವಾದರೂ ವಾಸಿಸಲು ಯೋಗ್ಯವಾಗಿಲ್ಲ. ಈ ಕುಟುಂಬಗಳನ್ನು ಇದೇ ಗ್ರಾಮ ವ್ಯಾಪ್ತಿಯ ಸರ್ವೆ ನಂಬರ್ 32ರಲ್ಲಿನ ಒಂದು ಎಕರೆ ಜಾಗಕ್ಕೆ ಸ್ಥಳಾಂತರ ಮಾಡಲು ತಹಶೀಲ್ದಾರ್ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲಿಸಿದ್ದಾರೆ. ಜಂಟಿ ಸರ್ವೆ ಮಾಡಿ ಜಿಲ್ಲಾಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಲು ತಯಾರಿ ನಡೆಸಿದ್ದಾರೆ. 'ಮಳೆಗಾಲದಲ್ಲಿ ಭೂಕುಸಿತ ಸಂಭವಿಸುವ ಅಪಾಯ ಇರುವುದರಿಂದ ಕೂಡಲೇ ಸ್ಥಳಾಂತರಕ್ಕೆ ಸಿದ್ಧತೆ ನಡೆಸಲಾಗಿದೆ. ಗುಡೇತೋಟ, ಬಂಡಿಮಠ, ಅರೆನೂರಿನಲ್ಲಿ ಅಪಾಯದ ಸ್ಥಿತಿಯಲ್ಲಿರುವ ಕುಟುಂಬಗಳನ್ನು ಕುಡಿಯುವ ನೀರು, ವಿದ್ಯುತ್, ರಸ್ತೆ ಸಂಪರ್ಕ ಇರುವ ಜಾಗಕ್ಕೆ ಶೀಘ್ರವೇ ಸ್ಥಳಾಂತರ ಮಾಡಲಾಗುವುದು' ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದರು.

### ಮಲೆಮನೆ: ಸಿಗದ ನೆಲೆ ತಪ್ಪದ ಅಜ್ಞಾತವಾಸ

2019ರಲ್ಲಿ ಸುರಿದ ಮಳೆಯಿಂದ ಬದುಕು ಕಳೆದುಕೊಂಡ ಮೂಡಿಗೆರೆ ತಾಲ್ಲೂಕಿನ ಜಾವಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲೆಮನೆ ಗ್ರಾಮದ ನಿರಾಶ್ರಿತರಿಗೆ ಆರು ವರ್ಷ ಕಳೆದರೂ ನೆಲೆಯಿಲ್ಲದೇ ಅಜ್ಞಾತವಾಸ ಅನುಭವಿಸುವಂತಾಗಿದೆ. ಮಹಾ ಮಳೆಯಿಂದ ಮಲೆಮನೆ ಗ್ರಾಮದ 6 ಮನೆಗಳ ಮೇಲೆ ಗುಡ್ಡ ಕುಸಿದು ಸಂಪೂರ್ಣವಾಗಿ ನೆಲಸಮವಾಗಿದ್ದವು. ಅಲ್ಲದೇ ಜೀವನಕ್ಕಾಗಿ ಬೆವರಿಳಿಸಿ ಉಳುಮೆ ಮಾಡಿದ್ದ ಕೃಷಿ ಭೂಮಿಯೂ ಕುಸಿತಕ್ಕೊಳಗಾಗಿ ಕ್ಷಣಾರ್ಧದಲ್ಲಿ ಕಣ್ಮರೆಯಾಗಿತ್ತು. ಘಟನೆ ಸಂಭವಿಸಿದಾಗ ಭರವಸೆಯ ಮಹಾಪೂರವನ್ನೇ ಹರಿಸಿದ್ದ ಜನಪ್ರತಿನಿಧಿಗಳು ಸರ್ಕಾರ ಪರಿಹಾರವನ್ನು ಮರೀಚಿಕೆಯನ್ನಾಗಿಸಿದೆ. ಆರೂ ಕುಟುಂಬಗಳ ಬದುಕು ಛಿದ್ರವಾಗಿದೆ.

### ಗುಡ್ಡತೋಟ: ಸ್ಥಳಾಂತರಕ್ಕೆ ತಯಾರಿ

ಕೊಪ್ಪ ತಾಲ್ಲೂಕಿನ ಮೇಗುಂದ ಹೋಬಳಿ ವ್ಯಾಪ್ತಿಯ ಗುಡ್ಡೆತೋಟದಲ್ಲಿ ಈ ಹಿಂದೆ ಅತಿವೃಷ್ಟಿ ಸಂದರ್ಭದಲ್ಲಿ ಭೂ ಕುಸಿತದಿಂದ ಆತಂಕ ಎದುರಿಸುತ್ತಿದ್ದ 17 ಕುಟುಂಬಗಳಿಗೆ ಪುನರ್ ವಸತಿ ಕಲ್ಪಿಸುವ ಕೆಲಸ ಪ್ರಗತಿಯಲ್ಲಿದೆ. ರಸ್ತೆ ಮೇಲ್ಭಾಗದಲ್ಲಿದ್ದ 13 ಮನೆಗಳ ಪೈಕಿ 8 ಮನೆಗಳಿಗೆ ಗ್ರಾಮದ ಸರ್ವೆ ನಂಬರ್ 153ರಲ್ಲಿ 10 ಗುಂಟೆಯಲ್ಲಿ ನಿವೇಶನ ಗುರುತಿಸಿ ಹಂಚಿಕೆ ಮಾಡಲಾಗಿದೆ. ಹಕ್ಕುಪತ್ರ ವಿತರಣೆಗೆ ದಾಖಲೆ ಸಿದ್ಧಪಡಿಸಲಾಗಿದೆ. 5 ಮನೆಗಳಿಗೆ ಭೈರೇದೇವರು ಗ್ರಾಮದ ನಾಯಕನಕಟ್ಟೆ ಎಂಬಲ್ಲಿ 189 ಸರ್ವೆ ನಂಬರ್‌ನಲ್ಲಿ ನಿವೇಶನ ಹಂಚಿಕೆಗೆ ಫಲಾನುಭವಿಗಳ ಆಯ್ಕೆ ನಡೆದಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ**: ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ.

**ವೃಷಭ**: ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ.

**ಮಿಥುನ**: ನಿಮ್ಮ ಅನುಮಾನದ ಪ್ರಕೃತಿ ನಿಮಗೆ ಸೋಲಿನ ಮುಖ ತೋರಿಸಬಹುದು. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚ ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ.

**ಕರ್ಕಾಟಕ**: ನಿಮ್ಮ ಮಗುವಿನಂಥ ಸ್ವಭಾವ ಕಾಣಿಸಿಕೊಳ್ಳುತ್ತದೆ ಮತ್ತು ನೀವು ಒಂದು ಆಹ್ಲಾದಕಾರಿ ಮನಸ್ಥಿತಿಯಲ್ಲಿರುತ್ತೀರಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

**ಸಿಂಹ**: ನೀವು ನಿಮ್ಮ ಪ್ರೀತಿಪಾತ್ರರೊಂದಿಗೆ ಎಲ್ಲಿಗಾದರೂ ಹೊರಗೆ ಹೋಗುತ್ತಿದ್ದರೆ ಬಟ್ಟೆಗಳನ್ನು ಚಿಂತನಶೀಲವಾಗಿ ಧರಿಸಿ. ನೀವು ಹಾಗೆ ಮಾಡದಿದ್ದರೆ ನಿಮ್ಮ ಪ್ರೇಮಿ ನಿಮ್ಮ ಮೇಲೆ ಕೋಪಗೊಳ್ಳಬಹುದು.

**ಕನ್ಯಾ**: ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ.

**ತುಲಾ**: ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ.

**ವೃಶ್ಚಿಕ**: ನಿಮ್ಮ ಮಾನಸಿಕ ಒತ್ತಡವನ್ನು ಹೊಡೆದೋಡಿಸಲು ಆಧ್ಯಾತ್ಮಿಕತೆ ಒಂದು ಅತ್ಯುತ್ತಮ ಆಯ್ಕೆಯಾಗಿರುವುದರಿಂದ ನೀವು ಅದರ ಸಹಾಯ ಪಡೆಯಲು ಈಗ ಒಳ್ಳೆಯ ಸಮಯ.

**ಧನಸ್ಸು**: ನಿಮ್ಮ ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ. ಸಹೋದ್ಯೋಗಿಗಳು ಮತ್ತು ಹಿರಿಯರ ಸಂಪೂರ್ಣ ಸಹಕಾರದಿಂದ ಕಛೇರಿಯಲ್ಲಿ ಕೆಲಸ ಬೇಗ ಮುಗಿಯುತ್ತದೆ.

**ಮಕರ**: ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ನಾಳೆ ಬಹಳ ತಡವಾಗುವುದರಿಂದ ನೀವು ನಿಮ್ಮ ಪ್ರಿಯತಮೆಗೆ ನಿಮ್ಮ ಸಂದೇಶವನ್ನು ಕೂಡಲೇ ತಿಳಿಸಬೇಕು.

**ಕುಂಭ**: ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ.

**ಮೀನ**: ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

## ಪಠ್ಯದ ಜೊತೆಗೆ ಕಂಪ್ಯೂಟರ್ ಕಲಿಕೆ ಅತ್ಯವಶ್ಯಕ: ರಾಜಶೇಖರ ಪುರಾಣಿಕ

• ಉದಯವಾಹಿನಿ, ಸೇಡಂ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪಾಲಕರು ತಮ್ಮ ಮಕ್ಕಳಿಗೆ ಪ್ರಾಥಮಿಕ ಶಿಕ್ಷಣದ ಪಠ್ಯಪುಸ್ತಕದ ಜೊತೆಗೆ ಕಂಪ್ಯೂಟರ್ ಕಲಿಸುಯುವುದು ಅತ್ಯವಶ್ಯಕತೆ ಇದೆ ಎಂದು ಮಾಜಿ ಗ್ರಾಮ್ ಪಂಚಾಯತ್ ಅಧ್ಯಕ್ಷರಾದ ರಾಜಶೇಖರ್ ಪುರಾಣಿಕ ಹೇಳಿದರು. ತಾಲ್ಲೂಕಿನ ಮಳಖೇಡ ಗ್ರಾಮದಲ್ಲಿರುವ ಸರ್ಕಾರಿ ಬಾಲಕಿಯ ಪ್ರೌಢಶಾಲೆಯಲ್ಲಿ ಮಳಖೇಡ ಗ್ರಾಪಂ ಹಾಗೂ ಮೈಕ್ರೋ ಕಂಪ್ಯೂಟರ್ ಕಲಿಕಾ ಕೇಂದ್ರ ಮಳಖೇಡ ಸಹಯೋಗದಲ್ಲಿ ಆಯೋಜಿಸಲಾಗಿರುವ ಕಂಪ್ಯೂಟರ್ ತರಬೇತಿಯ ಶಿಬಿರದ ಕೊನೆಯ ಕಂಪ್ಯೂಟರ್ ಪರೀಕ್ಷೆ ವೀಕ್ಷಣೆಗೆ ಭೇಟಿ ನೀಡಿದ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಮಾತನಾಡಿದ ಅವರು ಗ್ರಾಪಂ ಸುತ್ತಮುತ್ತ ವ್ಯಾಪ್ತಿಯಲ್ಲಿ ಬರುವ ಬಡ ವಿದ್ಯಾರ್ಥಿಗಳಿಗೆ ಪಂಚಾಯತಿ ವತಿಯಿಂದ ಉಚಿತ ಕಂಪ್ಯೂಟರ್ ಕಲಿಕೆ ನೀಡುತ್ತಿರುವುದು ಸಂತಸ ತಂದಿದೆ ಜೊತೆಗೆ ಇದರ ಸದುಪಯೋಗ


ಉದಯವಾಹಿನಿ ಚಿತ್ರ

ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.
ಈ ವೇಳೆಯಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ದಿನೇಶ್ ಪಾಟೀಲ್ ಸಣ್ಣೂರ್, ಮೈಕ್ರೋ ಕಂಪ್ಯೂಟರ್ ನಿರ್ದೇಶಕ ರಾದ ಮೊಹಮ್ಮದ್ ಸಿರಾಜ್, ಹಾಗೂ ಗ್ರಾಮ ಪಂಚಾಯತ ಸದಸ್ಯರಾದ ರಮೇಶ್ ನಂದೂರ್ ಅಕ್ಬರ್ ಭಾಗೋಡಿ, ಹಾಗೂ ವಿದ್ಯಾರ್ಥಿ ವಿದ್ಯಾರ್ಥಿನಿಯರು ಇದ್ದರು.

### ಈ ನಿಲ್ದಾಣ ಅನೇಕ ಸಮಸ್ಯೆಗಳ ತಾಣವಾಗಿದೆ, ಕಾಮಗಾರಿ ವಿಳಂಬದ ಜೊತೆಗೆ ಕಳಪೆಯಾಗುತ್ತಿರುವುದು ಬೇಸರ ಮೂಡಿಸಿದೆ

## ವಾಡಿ ರೈಲ್ವೆ ನಿಲ್ದಾಣದ ಅಭಿವೃದ್ಧಿಗಾಗಿ ಕೇಂದ್ರ ರೈಲ್ವೆ ಸಚಿವರಿಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ವಾಡಿ

ಪಟ್ಟಣದ ರೈಲ್ವೆ ನಿಲ್ದಾಣದ ತ್ವರಿತ ಕಾಮಗಾರಿ ಅಭಿವೃದ್ಧಿ ಗಾಗಿ ಬಿಜೆಪಿ ಮುಖಂಡರು ಕೇಂದ್ರ ರೈಲ್ವೆ ಸಚಿವ ವಿ.ಸೋಮಣ್ಣ ಅವರಿಗೆ ಮನವಿ ಸಲ್ಲಿಸಿದರು.

ಕಲಬುರಗಿ ನಗರಕ್ಕೆ ಆಗಮಿಸಿದ ಕೇಂದ್ರ ರೈಲ್ವೆ ಸಚಿವರನ್ನು ಮಾಜಿ ಲೋಕಸಭಾ ಸದಸ್ಯ ಡಾ ಉಮೇಶ್ ಜಾಧವ ಅವರೊಂದಿಗೆ, ಬಿಜೆಪಿ ಜಿಲ್ಲಾ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಬಸವರಾಜ ಪಂಚಾಳ, ವಾಡಿ ಬಿಜೆಪಿ ಮಹಾಶಕ್ತಿ ಕೇಂದ್ರ ಅಧ್ಯಕ್ಷ ವೀರಣ್ಣ ಯಾರಿ ಹಾಗೂ ಮುಖಂಡ ಸುಭಾಷ್ ವರ್ಮಾ ಅವರು ಕಲಬುರಗಿ ನಗರದ ಪ್ರವಾಸಿ ಮಂದಿರದಲ್ಲಿ ವಾಡಿ ರೈಲ್ವೆ ನಿಲ್ದಾಣದ ಅಭಿವೃದ್ಧಿಗಾಗಿ ಚರ್ಚಿಸಿ ಕೈಗೊಳ್ಳುಬೇಕಾದ ಕಾಮ ಗಾರಿಗಳ ಪಟ್ಟಿ ಸಲ್ಲಿಸಿ, ವಾಡಿ ಪಟ್ಟಣವು ತನ್ನದೆ ಆದ ಇತಿಹಾಸ ಹೊಂದಿದೆ, ಪುರಾತನ ರೈಲ್ವೆ ನಿಲ್ದಾಣದಲ್ಲಿ ಇದು ಒಂದಾಗಿದೆ, ಭಾರತ ರತ್ನ ಡಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಇಲ್ಲಿ ಭೇಟಿ ಕೊಟ್ಟಿದ್ದಾರೆ ಎಂದು ವಿವರಿಸಿದರು.

ನಮ್ಮ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿ ಜಿ ಅವರು ಅಮೃತ್ ಭಾರತ್ ಸ್ಟೇಷನ್ ಸ್ಕೀಮ್ ನಲ್ಲಿ ಈ ರೈಲ್ವೆ ನಿಲ್ದಾಣದ ಕಾಮಗಾರಿ ಕೈಗೆತ್ತಿಕೊಂಡಿದ್ದು ತುಂಬಾ ಖುಷಿಯಾಗಿದೆ ಅದಕ್ಕೆ ತಮ್ಮ ಸಹಕಾರ ವಿರುವುದರಿಂದ ಇದು ಸಾಧ್ಯವಾಗಿದೆ.

ಆದರೆ ಈ ನಿಲ್ದಾಣ ಅನೇಕ ಸಮಸ್ಯೆಗಳ ತಾಣವಾಗಿದೆ, ಕಾಮಗಾರಿ ವಿಳಂಬದ ಜೊತೆಗೆ ಕಳಪೆಯಾಗುತ್ತಿರುವುದು ಬೇಸರ ಮೂಡಿಸಿದೆ ಇದರ ಬಗ್ಗೆ ತಾವು ಹೆಚ್ಚಿನ ಗಮನ ಕೊಡಿ.ಸಮಸ್ಯೆಗಳ ಪಟ್ಟಿಯನ್ನು ನೀಡುತ್ತಿದ್ದು, ಅವುಗಳನ್ನು ಪರಿಹರಿಸಿ ಎಂದು ಕೇಳಿಕೊಂಡು ಕೆಳಗಿನ ಪಟ್ಟಿ ನೀಡಿದರು. ಆದಷ್ಟೂ ಬೇಗ ಪರಿಹರಿಸಿ ಎಂದು ಹೇಳಿದರು.

**ಅನೇಕ ಸಮಸ್ಯೆಗಳ ತಾಣ**

- ವಾಡಿ ನಿಲ್ದಾಣವನ್ನು ಗುಂತಕಲ್ ಅಥವಾ ಸಿಕಿಂದ್ರಬಾದ ವಿಭಾಗಕ್ಕೆ ಅಳವಡಿಸಿ, ಸುಮಾರು ವರ್ಷಗಳಿಂದ ಸೊಲ್ಲಾಪುರ ವಿಭಾಗದಿಂದ್ದರೂ ನಿಲ್ದಾಣದ ಅಭಿವೃದ್ಧಿ ಕುಂಠಿತಗೊಂಡಿದೆ.
- ಪ್ಲೈಓವರ ಹಾಗೂ ಬ್ರಿಡ್ಜ್ ಕಳಪೆ ಕಾಮಗಾರಿ ವಿರುದ್ಧ ಕ್ರಮಕೈಗೊಂಡು,ಗುಣಮಟ್ಟದೊಂದಿಗೆ ಆದಷ್ಟು ಬೇಗ ಪೂರ್ಣಗೊಳಿಸಿ.
- ವಾಡಿ ಪಟ್ಟಣದ ಸುತ್ತಾ ರೈಲ್ವೆ ಗೇಟ್ ಗಳು ಆವರಿಸಿಕೊಂಡಿರುವುದರಿಂದ,ಜನರು ಬಹಳಷ್ಟು ತೊಂದರೆ ಅನುಭವಿಸುತ್ತಿದ್ದು, ಎಸಿಸಿ ರೈಲ್ವೆ ಹಳಿ,ಲಕ್ಷ್ಮೀಪುರವಾಡಿ ಹಳಿ ಹಾಗೂ ನಿಜಾಮ ಗೇಟ್ ಹಳಿಗಳಿಗೆ ಒಳ ಸುತುವೆ ಅಥವಾ ಮೇಲ ಸೇತುವೆ ನಿರ್ಮಿಸಿ.
- ಹನುಮಾನ್ ನಗರ, ವಿಜಯ ನಗರ, ಸೋಮ್ಲಾ ತಾಂಡಾ ಹಾಗೂ ಇಂದಿರಾ ನಗರಕ್ಕೆ ಹೊಗಬೇಕಾದರೆ ರೈಲ್ವೆ ಹಳಿ ದಾಟಿಯೇ ಹೋಗಬೇಕು,
- ಸುಮಾರು ಏಳು ಎಂಟು ಸಾವಿರ ಬಡ ಕುಟುಂಬ ವಾಸಿಸುವ ಬಡಾವಣೆಗಳಿವೆ.
- ಇಲ್ಲಿನ ಜನರಿಗೆ ಸುರಕ್ಷಿತವಾಗಿ ಒಳ ಸೇತುವೆ ನಿರ್ಮಾಣ ಅತೀ ಅವಶ್ಯಕವಾಗಿದೆ.
- ಕೊಲ್ಲಾಪುರ ರೈಲನ್ನು ವಾಡಿ ಯಿಂದ ಪ್ರಾರಂಭಿಸಿ, ತಲುಪುವಂತೆ ಮಾಡಿ,
- ಕಾಚಿಗುಡಾ ಪ್ಯಾಸೆಂಜರ್ ರೈಲು ಕಲಬುರಗಿ ಯಿಂದ ಪ್ರಾರಂಭಿಸಿ,ತಲುಪುವಂತೆ ಹಾಗೂ ವಂದೇ ಭಾರತ ರೈಲನ್ನು ವಾಡಿ ನಿಲ್ದಾಣದಲ್ಲಿ ನಿಲ್ಲಿಸು ಸೂಚಿಸಿ ಇದ್ದರಿಂದ ಬಹಳಷ್ಟು ಜನತೆಗೆ ತುಂಬಾ ಅನುಕೂಲ ಆಗುತ್ತದೆ.
- ರೈಲ್ವೆ ನಿಲ್ದಾಣದ ಕೊಳಚೆ ನೀರು ವಾರ್ಡ್ ಸಂಖ್ಯೆ 20ರಲ್ಲಿ ಹರಿದು ಹೊಗುತ್ತಿರುವುದರಿಂದ,ಮಳೆಗಾಲದಲ್ಲಿ ಜನರು ಸಂಕಟಕ್ಕೆ ಸಿಲುಕುತ್ತಿದ್ದು ಇದನ್ನು ಪರಿಹರಿಸಿ.
- ನಿಲ್ದಾಣದಲ್ಲಿ ಶೌಚಾಲಯ ಮತ್ತು ವೇಟಿಂಗ್ ಹಾಲ ಸಮರ್ಕವಾದ ನಿರ್ವಾಣೆ ಇಲ್ಲದೇ ಇರುವುದರಿಂದ ಪ್ರಯಾಣಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ.
- ನಿಲ್ದಾಣದಲ್ಲಿ ಪ್ರಥಮ ಚಿಕಿತ್ಸೆ ಗಾಗಿ ವೈದ್ಯರೊಂದಿಗೆ
- ಔಷಧ ಅಂಗಡಿ, ಸ್ವದೇಶಿ ಮಳಿಗೆ ಪ್ರಾರಂಭಕ್ಕೆ ಒತ್ತು ನೀಡಿ.
- ಗುಟುಕಾ,ದೊಮ್ರಪಾನ ಹಾಗೂ ಪ್ಲಾಸ್ಟಿಕ್ ನಿಷೇಧಕ್ಕೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಿ.
- ಜನರ ಮತ್ತು ಜಾನುವಾರುಗಳ ಸುರಕ್ಷತೆಗಾಗಿ ನಿಲ್ದಾಣದ 3 ಕಿ ಮಿ ಸುತ್ತಲೂ ಬೇಲಿ ಹಾಕಿಸುವುದು.
- ನಿಲ್ದಾಣದಲ್ಲಿ ಎಕ್ಸಲೇಟರ್ ಅಳವಡಿಸಿ, ತುರ್ತು ಸಂಧರ್ಭದಲ್ಲಿ ಆ್ಯಂಬುಲೆನ್ಸ್ ಸಂಚಾರಿಸುವಂತೆ ಮಾಡುವುದು.
- ಹಳಿಗಳ ಮಧ್ಯ ಇರುವ ಸಾರ್ವಜನಿಕ ರುಧ್ರಭೂಮಿಗೆ ರಸ್ತೆ ಸಂಪರ್ಕ ಕಲ್ಪಿಸುವುದು

## ಜೂ. 6ರಂದು ಡಾ.ಬಾಬು ಜಗಜೀವನರಾಮರ 118ನೇ ಜಯಂತ್ಯೋತ್ಸವ: ವಿಜೃಂಭಣೆಯಿಂದ ಆಚರಣೆ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಸುಲೇಪೇಟ ಗ್ರಾಮದಲ್ಲಿ ಬರುವ ಜೂನ್ 6ರಂದು ಹಸಿರು ಕ್ರಾಂತಿಯ ಹರಿಕಾರ ಭಾರತದ ಮಾಜಿ ಉಪಪ್ರಧಾನಿ ಡಾ.ಬಾಬು ಜಗಜೀವನ ರಾಮ ಅವರ 118ನೇ ಜಯಂತ್ಯೋತ್ಸವವು ಅತ್ಯಂತ ವಿಜೃಂಭಣೆಯಿಂದ ಬೆಳಿಗ್ಗೆ 11ಗಂಟೆಗೆ ಭವ್ಯ ಮೆರವಣಿಗೆ ಸಾಯಂಕಾಲ 4ಗಂಟೆಗೆ ವೇದಿಕೆಯ ಬಹಿರಂಗ ಸಭೆ ಕಾರ್ಯಕ್ರಮ ಜರುಗಲಿದೆ ಎಂದು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ವಿನೋಧ ಓಂಕಾರ ಹೊಡೆಬೀರನಳ್ಳಿ ತಿಳಿಸಿದ್ದಾರೆ.



ಡಾ.ಜಗಜೀವನರಾಮ 118ನೇ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪರಮಪೂಜ್ಯ ಡಾ.ಚನ್ನವೀರ ಶಿವಾಚಾರ್ಯರು, ಡಾ.ಚನ್ನರುದ್ರಮುನಿ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ವೈದ್ಯಕೀಯ ಶಿಕ್ಷಣ ಸಚಿವರಾದ ಶರಣಪ್ರಕಾಶ ಪಾಟೀಲ, ಬೀದರ ಸಂಸದ ಸಾಗರ್ ಖಂಡ್ರೆ,ಮಾಜಿ ಸಂಸದ ಡಾ.ಉಮೇಶ ಜಾಧವ,ಶಾಸಕ ಡಾ.ಅವಿನಾಶ ಜಾಧವ, ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ, ಶಾಸಕ ಬಸವರಾಜ ಮತ್ತಿಮೂಡ, ಜೆಡಿಎಸ್ ಜಿಲ್ಲಾಧ್ಯಕ್ಷ ಬಾಲರಾಜ ಗುತ್ತೇದಾರ, ವಿಜಯಕುಮಾರ ರಾಮಕೃಷ್ಣ, ಗ್ರಾಪಂ ಅಧ್ಯಕ್ಷ ಸಂತೋಷ ರಾಠೋಡ, ಶಿವಕುಮಾರ ಪಾಟೀಲ, ಗೋಪಾಲರಾವ ಕಟ್ಟಿಮನಿ,ಜೆಡಿಎಸ್ ಮುಖಂಡ ಸಂಜೀವನ್ ಯಾಕಾಪೂರ ಸೇರಿದಂತೆ ಅನೇಕ ಗಣ್ಯಮಾನ್ಯರು ಆಗಮಿಸುತ್ತಿದ್ದು ಸಾರ್ವಜನಿಕರು ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

## ವಿಶ್ವತಂಬಾಕು ದಿನಾಚರಣೆ ಅಂಗವಾಗಿ ಕಾನೂನು ನೆರವು

• ಉದಯವಾಹಿನಿ, ಬೀದರ


ಉದಯವಾಹಿನಿ ಚಿತ್ರ

ಇತ್ತೀಚಿನ ದಿನಗಳಲ್ಲಿ ವಯಸ್ಸು ಆದವರಿಗಿಂತ ಯುವಕರೇ ಹೆಚ್ಚಾಗಿ ತಂಬಾಕು ಇರುವ ವಸ್ತುಗಳನ್ನು ಸೇವಿಸುತ್ತಿದ್ದಾರೆ. ಯುವಕರಿಗೆ ಅದರಿಂದ ಆಗುವ ಹಾನಿ, ತೊಂದರೆಗಳನ್ನು ಅರ್ಥ ಮಾಡಲು ಈ ದಿನ ಒಂದು ಪ್ರಯತ್ನವಾಗಿ ವಿಶ್ವದಾದ್ಯಮತ ಆಚರಿಸುತ್ತಾರೆಂದು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರ್ಜುನ ಬನಸೋಡೆ ಹೇಳಿದರು.

**ಕಾನೂನು ಅರಿವು-ನೆರವು**

ಅವರು ಜಿಲ್ಲಾ ಕಾನೂನು ಸೇವೆಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ತಂಬಾಕು ರಹಿತ ದಿನಾಚರಣೆ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಛೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮದಲ್ಲಿ ಮಾತನಾಡಿದರು.

ತಂಬಾಕು ಸೇವನೆಯಿಂದ ತಮಗೆ ಕಾಯಿಲೆಯನ್ನು ತಂದುಕೊಳ್ಳುವುದಲ್ಲದೆ ತಮ್ಮ ಅಕ್ಕಪಕ್ಕದಲ್ಲಿರುವವರಿಗೂ ಕಾಯಿಲೆಗಳನ್ನು ಬರಿಸುತ್ತಾರೆ.

ಹೀಗಾಗಿ ಬಹಳಷ್ಟು ಜನ ಸಾಯುತ್ತಿದ್ದಾರೆ. ಇದನ್ನು ತಡೆಯುವ ದಿನವನ್ನು ವಿಶ್ವ ತಂಬಾಕು ನಿಷೇಧ ದಿನವನ್ನಾಗಿ ಆಚರಿಸುತ್ತಾರೆಂದರು.

## ಕೆಎಚ್‌ಬಿ ಕಾಲೋನಿಗೆ ಮೂಲಭೂತ ಸೌಕರ್ಯ

• ಉದಯವಾಹಿನಿ, ವಿಜಯಪುರ

ನಗರ ಹೊರ ವಲಯದ ಇಟ್ಟಂಗಿಹಾಳ ರಸ್ತೆಯಲ್ಲಿರುವ ಕೆ. ಎಚ್. ಬಿ. ಕಾಲೋನಿಗೆ ಮುಂಬರುವ ದಿನಗಳಲ್ಲಿ ರಿಂಗ್ ರಸ್ತೆಯೊಂದಿಗೆ ಸಂಪರ್ಕ ಕಲ್ಪಿಸಿ, ಹೈಮಾಸ್ಟ್ ವಿದ್ಯುತ್ ದೀಪ, ಬಸ್ ಸೌಕರ್ಯ, ಚರಂಡಿ ವ್ಯವಸ್ಥೆ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಮೂಲಭೂತ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಕೆ. ಎಚ್.ಬಿ. ಕಾಲೋನಿಗೆ ರೂ. 90 ಲಕ್ಷ ವೆಚ್ಚದ ನೀರು ಸರಬರಾಜು ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಅವರು ನಂತರ ನಡೆದ ಕಾರ್ಯಕ್ರಮ


ಉದಯವಾಹಿನಿ ಚಿತ್ರ

ಉದ್ಘಾಟಿಸಿ ಮಾತನಾಡಿದರು.

ಗುಣಮಟ್ಟದ ಕಾಮಗಾರಿ ಕೈಗೊಳ್ಳುವಂತೆ ಸೂಚನೆ ನೀಡಿದ ಅವರು, ಬಡಾವಣೆಯ ನಾಗರಿಕರು 1500 ಗಿಡ ನೆಟ್ಟಿರುವುದು ಸಂತಸದ ತಂದಿದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಗಿಡಗಳನ್ನು ನೆಡುವ ಮೂಲಕ ಜಿಲ್ಲೆಯಲ್ಲಿ ಅರಣ್ಯ ಸರಾಸರಿ ಹೆಚ್ಚಿಸಲು ಎಲ್ಲರೂ ಸತತ ಪ್ರಯತ್ನ ಮುಂದುವರೆಸಬೇಕು ಎಂದು ಹೇಳಿದರು.

## ತಂದೆ ತಾಯಿ-ಗುರುಗಳನ್ನು ದೇವರೆಂದೇ ಪೂಜಿಸಿ: ಶಾಸಕ ಲಕ್ಷ್ಮಣ ಸವದಿ

• ಉದಯವಾಹಿನಿ, ಅಥಣಿ

ಮಕ್ಕಳಿಗಾಗಿ ಆಸ್ತಿ ಮಾಡದೆ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಉತ್ತಮ ಸಂಸ್ಕಾರಗಳನ್ನು ಕೊಟ್ಟು ಮಕ್ಕಳನ್ನು ಆಸ್ತಿಯನ್ನಾಗಿ ಮಾಡಿ. ಅವರು ಮುಂದೆ ಸಮಾಜದಲ್ಲಿ ಉನ್ನತ ಮಟ್ಟದಲ್ಲಿ ಬೆಳೆದು ನಮ್ಮ ಮನೆಯ ಆಸ್ತಿಯಾಗುತ್ತಾರೆ ಎಂದು ಮಾಜಿ ಉಪ-ಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ಇಲ್ಲಿನ ಗಚ್ಚಿನಮಠದ ಆವರಣದಲ್ಲಿ ತಮ್ಮ ತಂದೆ ತಾಯಿ ಹೆಸರಿನಲ್ಲಿ ಸ್ಥಾಪಿಸಿದ ಸತ್ಯ ಸಂಗಮ ಪ್ರತಿಷ್ಠಾನ ವತಿಯಿಂದ ಹಮ್ಮಿಕೊಂಡಿದ್ದ ಅಥಣಿ ಮತಕ್ಷೇತ್ರದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಶೇ 90% ಅಂಕ ಪಡೆದ ಸುಮಾರು 700 ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿ ಮಾತನಾಡುತ್ತಿದ್ದರು. ಈ ಪ್ರತಿಭಾ ಪುರಸ್ಕಾರ ಕಾರ್ಯ


ಉದಯವಾಹಿನಿ ಚಿತ್ರ

ಕ್ರಮವು ಪ್ರತಿ ವರ್ಷ ನಮ್ಮ ಪ್ರತಿಷ್ಠಾನ ವತಿಯಿಂದ ಮುಂದುವರೆಯಲಿದೆ. ನನ್ನ ಕ್ಷೇತ್ರದಲ್ಲಿ ಪ್ರತಿಭಾನ್ವಿತ ಬಡ ಮಕ್ಕಳು ಯಾರಾದರೂ ಉನ್ನತ ಶಿಕ್ಷಣ ಪಡೆಯುವಾಗ ಆರ್ಥಿಕ ಸಮಸ್ಯೆಯಾದರೆ ನನ್ನನ್ನು ಸಂಪರ್ಕಿಸಿ ನನ್ನಿಂದ ಕೈಲಾದಷ್ಟು ಸಾಹಾಯ ಮಾಡುವದಾಗಿ ಭರವಸೆ ನೀಡಿದರು.

ಈ ಪುಣ್ಯ ಭೂಮಿಯ ಮಕ್ಕಳು ಉನ್ನತ ಶಿಕ್ಷಣ ಪಡೆಯುವ ಮೂಲಕ ಈ ಕ್ಷೇತ್ರದ ಕೀರ್ತಿಯನ್ನು ವಿಶ್ವದ ತುಂಬೆಲ್ಲ ಬೆಳಗಿಸಬೇಕು ಎಂದರು.

> ಮಕ್ಕಳಿಗೆ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಉತ್ತಮ ಸಂಸ್ಕಾರಗಳನ್ನು. ತಂದೆ ತಾಯಿ ಗುರುಗಳನ್ನು ಗೌರವಿಸುವುದನ್ನು ಕಲಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಅವರ ವ್ಯಕ್ತಿತ್ವ ರೂಪಿಸುವುದರೊಂದಿಗೆ ದೇಶದ ಆಸ್ತಿಯನ್ನಾಗಿಸುವ ಮಹತ್ತರ ಜವಾಬ್ದಾರಿ ಮಕ್ಕಳ ಪಾಲಕರು ಹಾಗೂ ಶಿಕ್ಷಕರ ಮೇಲಿದೆ. ಬಡ ಪ್ರತಿಭಾವಂತ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಿಸುವದಕ್ಕೋಸ್ಕರ ನನ್ನ ಕೈಲಾದಷ್ಟು ಸಹಾಯ ಸಹಕಾರ ಮಾಡುತ್ತೇನೆ
>
> -ಲಕ್ಷ್ಮಣ ಸವದಿ, ಶಾಸಕ

## ಧಾರಾಕಾರ ಮಳೆ ಹಿನ್ನೆಲೆ ಕುಸಿತ ಭೀತಿಯಲ್ಲಿ ಮನೆ

• ಉದಯವಾಹಿನಿ, ಮಂಗಳೂರು

ಕಳೆದ ಹಲವು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಮಂಗಳೂರು ಬಜಾಲ್ ವೀರನಗರದಲ್ಲಿ ಮನೆಯೊಂದು ಕುಸಿತ ಭೀತಿಯಲ್ಲಿದ್ದು, ಮನೆಮಂದಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇತ್ತೀಚೆಗೆ ಸುರಿದ ಮಳೆಗೆ ಮನೆ ಸಮೀಪದ ಗುಡ್ಡ ಕುಸಿತಗೊಂಡಿದ್ದು ಆತಂಕದಲ್ಲೇ ಕುಟುಂಬ ಜೀವನ ನಡೆಸುವಂತಾಗಿದೆ. ಈಗಾಗಲೇ ಕುಸಿತ ಪ್ರದೇಶಕ್ಕೆ ಸ್ಥಳೀಯ ಕಾರ್ಪೋರೇಟರ್ ಅಧಿಕಾರಿಗಳು ಭೇಟಿ ಪರಿಶೀಲನೆ ನಡೆಸಿದ್ದಾರೆ. ಇನ್ನು ಮನೆಯಲ್ಲಿ ಮಕ್ಕಳು ಕೂಡ ಇದ್ದು, ಆದಷ್ಟು ಬೇಗ ಪರಿಹಾರ ಕೊಡಬೇಕು ಎಂದು ಕುಟುಂಬದ ಸದಸ್ಯರು ಆಗ್ರಹಿಸಿದ್ದಾರೆ.

## ಚಾರ್ಮಾಡಿ ಘಾಟಿ: ಸಂಚಾರ ಸ್ಥಗಿತ

• ಉದಯವಾಹಿನಿ, ಮೂಡಿಗೆರೆ

ತಾಲ್ಲೂಕಿನಿಂದ ಕರಾವಳಿ ಭಾಗಕ್ಕೆ ಸಂಪರ್ಕ ಕಲ್ಪಿಸುವ ಚಾರ್ಮಾಡಿ ಘಾಟಿಯಲ್ಲಿ ಬೃಹತ್ ಗಾತ್ರದ ಮರವೊಂದು ರಸ್ತೆಗೆ ಅಡ್ಡಲಾಗಿ ಬಿದ್ದಿದ್ದರಿಂದ ಹೆದ್ದಾರಿಯಲ್ಲಿ ಸಂಚಾರ ಸ್ಥಗಿತವಾಗಿತ್ತು.

ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ 3ನೇ ತಿರುವಿನ ಬಳಿ ಮರ ಬಿದ್ದು ಎರಡೂ ಕಡೆಯ ಸಂಪರ್ಕ ಕೆಲಕಾಲ ಕಡಿತವಾಗಿತ್ತು. ಬಸ್ ಸೇರಿದಂತೆ ಯಾವುದೇ ವಾಹನಗಳು ಮೂಡಿಗೆರೆಯತ್ತ ಬರಲು ಸಾಧ್ಯವಾಗದೇ ಇದ್ದಿದ್ದರಿಂದ ಚಿಕ್ಕಮಗಳೂರು ಭಾಗಕ್ಕೆ ತೆರಳುವ ಪ್ರಯಾಣಿಕರು ಪರದಾಡುವಂತಾಗಿತ್ತು. ಕೆಲವು ಬಸ್‌ಗಳನ್ನು ಕೊಟ್ಟಿಗೆಹಾರ ನಿಲ್ದಾಣದಲ್ಲಿಯೇ ಸಂಚಾರ ಪ್ರಾರಂಭವಾಗುವವರೆಗೂ ನಿಲ್ಲಿಸಲಾಗಿತ್ತು. ಸಂಚಾರ ಸ್ಥಗಿತವಾಗಿದ್ದರಿಂದ ಘಾಟಿಯಲ್ಲಿ ಸುಮಾರು 3 ಕಿ.ಮೀ.ನಷ್ಟು ದೂರದವರೆಗೂ ವಾಹನಗಳು ಸಾಲುಗಟ್ಟಿ ನಿಂತಿದ್ದವು. ಪೊಲೀಸರು, ಅರಣ್ಯ ಇಲಾಖೆ ಅಧಿಕಾರಿಗಳು ಮರವನ್ನು ತೆರವುಗೊಳಿಸಿದರು. ಘಟನೆ ವೇಳೆ ಮಳೆಯೂ ಸುರಿಯುತ್ತಿದ್ದರಿಂದ ವಾಹನ ಚಾಲಕರು, ದ್ವಿಚಕ್ರ ವಾಹನ ಸವಾರರು ಆಶ್ರಯಕ್ಕಾಗಿ ಪರದಾಡಿದರು.

## ರೈತರ ಸಮಸ್ಯೆಗಳಿಗೆ ಸೂಕ್ತ ಸಲಹೆ ನೀಡಲು ಕಾರ್ಯಾಗಾರ

• ಉದಯವಾಹಿನಿ, ಗದಗ

ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ ಹಾಗೂ ಕೃಷಿ ವಿಜ್ಞಾನ ಕೇಂದ್ರಗಳ ಅಂತಿಮ ಗುರಿಯು ರೈತರಿಗೆ ಸಕಾಲದಲ್ಲಿ ತಾಂತ್ರಿಕ ಮಾಹಿತಿ ಒದಗಿಸುವುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ತಾರಾಮಣಿ ತಿಳಿಸಿದರು.

ರೈತರ ಸಮಸ್ಯೆಗಳಿಗೆ ಸೂಕ್ತ ಸಲಹೆಗಳನ್ನು ನೀಡಲು ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯಲ್ಲಿ ಕೃಷಿ ಇಲಾಖೆ, ಕೃಷಿ ವಿಶ್ವವಿದ್ಯಾಲಯ, ಧಾರವಾಡ ಹಾಗೂ ಕೃಷಿ ವಿಜ್ಞಾನ ಕೇಂದ್ರ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಡಾ ಸುಧಾ ಮಂಕಣಿ, ಮುಖ್ಯಸ್ಥರು, ಕೆ.ಎಚ್ ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿ ಇವರು ''ವಿಕಸಿತ


ಉದಯವಾಹಿನಿ ಚಿತ್ರ

ಕೃಷಿ ಅಭಿಯಾನ''ದ ದಿನಾಂಕವಾರು, ತಾಲ್ಲೂಕುವಾರು ವೇಳಾಪಟ್ಟಿಯ ವಿವರಗಳನ್ನು ತಿಳಿಸಿದರು. ಅಭಿಯಾನದ ಯಶಸ್ಸಿಗೆ ಎಲ್ಲಾ ತಾಲ್ಲೂಕುಗಳ ರೈತ ಸಂಪರ್ಕ ಕೇಂದ್ರಗಳ ಮುಖ್ಯಸ್ಥರು ಹಾಗೂ ಕೃಷಿ ಇಲಾಖೆಯ ಸಿಬ್ಬಂದಿಯು ಸಂಪೂರ್ಣ ಸಹಕಾರ ನೀಡಲು ಜಂಟಿ ಕೃಷಿ ನಿರ್ದೇಶಕರು ಸೂಚಿಸಿದರು.

## ಜನರು ಸ್ಮರಿಸುವಂತೆ ಕೆಲಸ ಮಾಡಬೇಕು: ಮಸಳಿ

• ಉದಯವಾಹಿನಿ, ತಾಳಿಕೋಟೆ

ಸರ್ಕಾರಿ ಯಾವುದೇ ಇಲಾಖೆಯಲ್ಲಿಯೂ ಸೇವೆ ಸಲ್ಲಿಸಿದರೂ ಕೂಡಾ ಜನರು ಸ್ಮರಿಸುವಂತೆ ದಕ್ಷ ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕೆಂದು ತಾಲ್ಲೂಕಾ ಪಂಚಾಯತ್ ಇಓ ನಿಂಗಪ್ಪ ಮಸಳಿ ಅವರು ಹೇಳಿದರು.

ತಾಲ್ಲೂಕಿನ ಹಿರೂರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಚನಬಸಯ್ಯ ಮಠ ಹಾಗೂ ತುಂಬಗಿ ಗ್ರಾಪಂ ನಲ್ಲಿ ಗ್ರೇಡ್-1 ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ ನಿಂಗಪ್ಪ ಕಲಹಾರಿ ಅವರ ಸೇವಾ ನಿವೃತ್ತಿ ನಿಮಿತ್ಯ ಪಿಡಿಓ ಕ್ಷೇಮಾಭಿವೃದ್ಧಿ ಸಂಘದ ತಾಳಿಕೋಟೆ ತಾಲ್ಲೂಕ ಘಟಕದ ಸಹಯೋಗದಲ್ಲಿ ತಾಪಂ ಸಭಾಭವನದಲ್ಲಿ ಏರ್ಪಡಿಸಲಾದ ಸನ್ಮಾನ


ಉದಯವಾಹಿನಿ ಚಿತ್ರ

ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಮಾತ ನಾಡುತ್ತಿದ್ದ ಅವರು ಈ ಇರ್ವ ಅಧಿಕಾರಿಗಳು ಅತ್ಯಂತ ಪ್ರಾಮಾಣಿಕ ಹಾಗೂ ನಿಷ್ಠೆಯಿಂದ ತಮ್ಮ ಸೇವೆಯನ್ನು ಪೂರ್ತಿಗೊಳಿಸಿ ನಿವೃತ್ತ ರಾಗುತ್ತಿದ್ದಾರೆ ಆರ್.ಡಿ.ಪಿ.ಆರ್. ಇಲಾಖೆಯಲ್ಲಿ ಸೇವೆಯನ್ನು ಮಾಡುವುದು ಸುಲಭ ಕಾರ್ಯವಲ್ಲಾ ಇಲ್ಲಿ ಸಾರ್ವಜನಿಕರ ಹಲವಾರು ಸಮಸ್ಯೆಗಳನ್ನು ಪರಿಹರಿಸಬೇಕಾಗುತ್ತದೆ ಇದರ ಮಧ್ಯೆಯು ಈ ಇಬ್ಬರು ತಮ್ಮ ಪ್ರಾಮಾಣಿಕ ಸೇವೆಯಿಂದ ಇಲಾಖೆಯ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಅವರಿಬ್ಬರ ವಿಶ್ರಾಂತ ಬದುಕು ನೆಮ್ಮದಿದಾಯಕವಾಗಿರಲೆಂದು ಹಾರೈಸುತ್ತೇನೆಂದರು.

ತಾಪಂ ಸಹಾಯಕ ನಿರ್ದೇಶಕಿ ಸುಜಾತಾ ಯಡ್ರಾಮಿ ಮಾತನಾಡಿ ನಿವೃತ್ತರಾದ ಇಲಾಖೆಯ ಈ ಇಬ್ಬರು ಹಿರಿಯರು ಸರಳ ಸಜ್ಜನಿಕೆಯ ವ್ಯಕ್ತಿತ್ವದ ಸೌಮ್ಯ ಸ್ವಭಾವದವರಾಗಿದ್ದು ಇಲಾಖೆ ಅಪಾರ ಅನುಭವ ಹೊಂದಿದವರಾಗಿದ್ದರು ಅವರ ಕರ್ತವ್ಯ ನಿಷ್ಠೆ ಸಮಯ ಪಾಲನೆ ಹಾಗೂ ಶಿಸ್ತು ನಮಗೆಲ್ಲರಿಗೂ ಮಾದರಿಯಾಗಿದೆ ಎಂದರು.

### • ಮುಂಗಾರು ಆರಂಭ: ರೈತರಿಗೆ ಅನುಕೂಲವಾಗುವ ಎಲ್ಲಾ ಅಗತ್ಯ ಕ್ರಮ ಕೈಗೊಳ್ಳಿ: ಉಮೇಶ ಕೆ. ಮುದ್ನಾಳ

## ಮಹಾನಗರಗಳಿಗೆ ಗೂಳೆಹೋದ ರೈತರು ಮರಳಿ ಗುಡಿಗೆ

• ಉದಯವಾಹಿನಿ ಯಾದಗಿರಿ

ಮುಂಗಾರು ಶುಭಾರಂಭ ಮಾಡಿರುವ ಹಿನ್ನೆಲೆಯಲ್ಲಿ ಕಸಕಡ್ಡಿ ತೆಗೆದು ಜಮೀನು ಹಸನು ಮಾಡಲು ಸನ್ನದ್ಧರಾಗಿರುವ ರೈತರಿಗೆ ತಕ್ಷಣ ಅಗತ್ಯ ಅವಶ್ಯಕತೆಗಳು ಒದಗಿಸಲು ಸರ್ಕಾರ ಮತ್ತು ಜಿಲ್ಲಾಡಳಿತ ಕೃಷಿ ಇಲಾಖೆ ಎಚ್ಚೆತ್ತು ಕೆಲಸ ಮಾಡಬೇಕೆಂದು ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಆಗ್ರಹಿಸಿದ್ದಾರೆ.

**ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕು**

ಈ ಕುರಿತು ಮುದ್ನಾಳ ಗ್ರಾಮದ ಜಮೀನುಗಳಲ್ಲಿ ಕಸ ಕಡ್ಡಿ ಮತ್ತು ಕೃಷಿ ಚಟುವಟಿಕೆಯಲ್ಲಿ ಕಾರ್ಯನಿರತ ರೈತರನ್ನು ಭೇಟಿ ಮಾಡಿದ ನಂತರ ಹೇಳಿಕೆ ನೀಡಿರುವ ಅವರು, ಅವಧಿಗೂ ಮುನ್ನವೇ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ನಿತ್ಯ ಬೆಳಗ್ಗೆಯಿಂದ ರೈತರು ಹೊಲಗಳತ್ತ ಮುಖಮಾಡಿದ್ದಾರೆ. ಇನ್ನು ಮುಂದೆ ಅವರಿಗೆ ದಾಖಲೆಗಳು ಬೇಕಾಗುತ್ತವೆ. ಪಹಾಣಿ, ಜಾತಿ ಆದಾಯ ಪ್ರಮಾಣ ಪತ್ರಗಳು, ಬಿತ್ತನೆ ಬೀಜ, ರಸಗೊಬ್ಬರಗಳನ್ನು ಪಡೆಯಲು ಅವಶ್ಯಕ ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದ್ದಾರೆ. ಬೇಸಿಗೆ ಸಮಯದಲ್ಲಿ ಈ ಭಾಗದಲ್ಲಿ ಒಣಬೇಸಾಯ ಇರುದ್ದರಿಂದ ರೈತರ ಮಹಾನಗರಗಳಿಗೆ ಹೊಟ್ಟೆ ಪಾಡಿಗಾಗಿ ಗುಳೆಹೋಗಿದ್ದರು.

ಜೂನ್ 7 ರ ಮೊದಲೆ ಮುಂಗಾರ ಆರಂಭವಾಗಿರುವದರಿಂದ ರೈತ ಮುಖದಲ್ಲಿ ಮಂದಾಸ ಮೂಡಿ, ಮರಳಿಗುಡಿಗೆ ಬಂದು ಜಮೀನುಗಳ ಸ್ವಚ್ಚತೆಗೆ ಮುಂದಾಗಿದ್ದಾರೆ. ಇದಕ್ಕೆ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆಗಳು ಎಚ್ಚೆತ್ತು ಕೆಲಸ ಮಾಡಬೇಕು


ಉದಯವಾಹಿನಿ ಚಿತ್ರ

ರೈತರ ಕೃಷಿ ಕಾರ್ಯಗಳಿಗೆ ಕುಂಟ ನೆಪ ಹೇಳದೇ ಕಚೇರಿಯಲ್ಲಿ ಕುಳಿತ ಕೆಲಸ ಮಾಡುವಂತೆ ರಾಜ್ಯ ಸರ್ಕಾರ ಮತ್ತು ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಅವರು ಒತ್ತಾಯಿಸಿದ್ದಾರೆ.

ಯಾವುದೇ ಕಾರಣಕ್ಕೆ ಬೀಜ ರಸಗೊಬ್ಬರ ಕೊರತೆಯಾಗದಂತೆ ಕ್ರಮ ಕೈಗೊಳ್ಳಬೇಕು, ಆಗ್ರೋ ಕೇಂದ್ರದವರು ಕೃತಕ ಅಭಾವ ಸೃಷ್ಟಿಸಿ ಬೆಲೆ ಹೆಚ್ಚಳ ಮಾಡಲು ಹವಣಿಸುತ್ತಿರುತ್ತಾರೆ ಇಂತವರ ಮೇಲೆ ಸಂಬಂಧಪಟ್ಟ ಅಧಿಕಾರಿಗಳು ಹದ್ದಿನ ಕಣ್ಣಿಡಬೇಕು.

ಸರದಿ ಸಾಲುಗಳಲ್ಲಿ ನಿಲ್ಲುವಂತಹ ಪರಿಸ್ಥಿತಿ ನಿರ್ಮಾಣವಾಗದಂತೆ ನೋಡಿಕೊಳ್ಳಬೇಕು. ಎಲ್ಲ ಕಡೆ ಜಾಗೃತಿ ಮೂಡಿಸುವ ಕೆಲಸ ಆಗಬೇಕು, ಇಲಾಖೆ ಸೌಲತ್ತುಗಳನ್ನು ಪತ್ರಿಕೆ ಮಾಧ್ಯಮಗಳ ಮುಖಾಂತರ ಮಾಹಿತಿ ನೀಡಬೇಕು. ಇಲಾಖಾವಾರು ಸೆಲ್ ಫೋನ್ ನಂ.ಗಳ ಮಾಹಿತಿ ನೀಡಬೇಕು. ಸಹಾಯವಾಣಿಗಳಿಗೆ ಕರೆ ಮಾಡಿದಾಗ ತಕ್ಷಣ ಸ್ಪಂದಿಸುವ ಕೆಲಸ ಆಗಬೇಕು ಸೂಕ್ತ ಮಾಹಿತಿ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

> ಮುಂಗಾರು ಸಮಯದಲ್ಲಿ ಬಿತ್ತನೆ ವೇಳೆ ರೈತರಿಗೆ ಕೆಲವರು ಕಳಪೆ ಗುಣಮಟ್ಟದ ಬೀಜ, ರಸಗೊಬ್ಬರ ಪೂರೈಕೆ ಮಾಡಿ ವಂಚಿಸುತ್ತಿರುವ ಘಟನೆಗಳು ಹಿಂದಿನಿಂದಲೂ ನಡೆಯುತ್ತಲೇ ಇವೆ. ಇವುಗಳಿಗೆ ಆರಂಭದಲ್ಲೇ ಕಡಿವಾಣ ಹಾಕಲು ಇಲಾಖೆಗಳು ಎಚ್ಚೆತ್ತು ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಸಿಇಓ ಅವರು ಆಕಸ್ಮಿಕ ಬೇಟಿ ಕೊಟ್ಟು ಅಧಿಕಾರಿಗಳಿಗೆ ಚಳಿ ಬಿಡಿಸಬೇಕು
>
> -ಉಮೇಶ ಕೆ. ಮುದ್ನಾಳ, .ಸಾಮಾಜಿಕ ಹೋರಾಟಗಾರ



## ವಿಮಾ ಪರಿಹಾರ ವಿತರಣೆ

• ಉದಯವಾಹಿನಿ, ಹೆಬ್ರಿ

ಹೆಬ್ರಿ ತಾಲ್ಲೂಕು ಮುದ್ರಾಡಿ ವಲಯದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮುದ್ರಾಡಿ ಕಾರ್ಯಕ್ಷೇತ್ರದ ಸತ್ಯ ಶ್ರೀ ಸಂಘದ ಸದಸ್ಯರಾದ ಹರೀಶ್ ಕುಲಾಲ್ ಅವರು ಇತ್ತೀಚೆಗೆ ಮೃತರಾಗಿದ್ದು, ಅವರ ಕುಟುಂಬ ಸದಸ್ಯರಿಗೆ ವಿಮಾ ಪರಿಹಾರದ ಆದೇಶ ಪತ್ರವನ್ನು ವಿತರಿಸಲಾಯಿತು. ಮುದ್ರಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವಸಂತಿ ಪೂಜಾರಿ ಮಂಜೂರಾತಿ ಆದೇಶ ಪತ್ರವನ್ನು ಹಸ್ತಾಂತರಿಸಿದರು. ಹಿರಿಯರಾದ ಗಣಪತಿ ಮುದ್ರಾಡಿ, ವಲಯದ ನಿಕಟಪೂರ್ವ ಅಧ್ಯಕ್ಷ ರತ್ನಕರ ಪೂಜಾರಿ, ಮುದ್ರಾಡಿ ಒಕ್ಕೂಟದ ಅಧ್ಯಕ್ಷ ಸುಬ್ರಾಯ ಆಚಾರ್ಯ, ಶಿಕ್ಷಕ ಚಂದ್ರಶೇಖರ ಭಟ್, ಹೆಬ್ರಿ ತಾಲ್ಲೂಕು ಯೋಜನಾಧಿಕಾರಿ ಲೀಲಾವತಿ, ವಲಯ ಮೇಲ್ವಿಚಾರಕಿ ಸುಮಲತಾ, ಸೇವಾಪ್ರತಿನಿಧಿ ಮಮತ, ಸಂಘದ ಸದಸ್ಯರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# ಥಗ್ ಲೈಫ್‌ಗೆ ಶುಗರ್ ಬೇಬಿ ಸಂಭಾವನೆ



ಥಗ್ ಲೈಫ್ ಚಿತ್ರ ಜೂನ್ 5 ರಂದು ಬಿಡುಗಡೆಯಾಗಲು ಸಜ್ಜಾಗಿದೆ. ಈ ಚಿತ್ರದ ಬಿಡುಗಡೆ ಹೊತ್ತಲ್ಲೇ ನಾಯಕಿಯಾಗಿ ನಟಿಸಿರುವ ತ್ರಿಷಾ ಎಷ್ಟು ಸಂಭಾವನೆ ಪಡೆದಿದ್ದಾರೆ ಎನ್ನುವ ವಿಚಾರ ಹರಿದಾಡುತ್ತಿದೆ. ದಕ್ಷಿಣ ಭಾರತದಲ್ಲಿ ಹೆಚ್ಚು ಸಂಭಾವನೆ ಪಡೆಯುವವರ ಪಟ್ಟಿಯಲ್ಲಿರುವ ಅವರು, ಈ ಚಿತ್ರಕ್ಕಾಗಿ 12 ಕೋಟಿ ರೂ. ಸಂಭಾವನೆ ಪಡೆದಿದ್ದಾರೆ ಎಂಬ ಸುದ್ದಿ ಓಡಾಡುತ್ತಿದೆ.

**ವಿವಾದ ಆಗುತ್ತಾ ಎಂಬ ಚರ್ಚೆ**

ಚಿತ್ರದ ಎರಡು ಹಾಡುಗಳು ಈಗಾಗಲೇ ಬಿಡುಗಡೆಯಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಚಿತ್ರದ ಬಿಡುಗಡೆ ಸಮೀಪಿಸುತ್ತಿದ್ದು, ಚಿತ್ರತಂಡವು ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಕೊಂಡಿದೆ. ಚಿತ್ರದಲ್ಲಿ ಶುಗರ್ ಬೇಬಿಹಾಡಿಗೆ ತ್ರಿಷಾ ಅದ್ಭುತವಾಗಿ ಸೊಂಟ ಬಳುಕಿಸಿದ್ದಾರೆ. ಆದರೆ ಈ ಹಾಡು ಬಿಡುಗಡೆಯಾದಾಗ ವಿವಾದ ಆಗುತ್ತಾ ಎಂಬ ಚರ್ಚೆ ಹುಟ್ಟುಹಾಕಿತ್ತು. ಯಾಕಂದ್ರೆ, ಶುಗರ್ ಬೇಬಿ ಪದ ಸಾಮಾನ್ಯವಾಗಿ ಹಣಕ್ಕಾಗಿ ವಯಸ್ಸಾದ ಪುರುಷನೊಂದಿಗೆ ಕಿರಿಯ ಯುವತಿ ಹೊಂದಿರುವ ಸಂಬಂಧವನ್ನು ಸೂಚಿಸುತ್ತದೆ.

# ಕೊನೆಗೂ ಬ್ರೇಕಪ್ ಬಗ್ಗೆ ಮೌನಮುರಿದ ಸಿಡ್ನಿ ಸ್ವೀನಿ!

ಹಾಲಿವುಡ್‌ನ ಪ್ರಸಿದ್ಧ ನಟಿ ಸಿಡ್ನಿ ಸ್ವೀನಿ ಕೊನೆಗೂ ತಮ್ಮ ಬ್ರೇಕಪ್ ವಿಚಾರವಾಗಿ ಮಾತನಾಡಿದ್ದಾರೆ. ನನ್ನ ಹಾಗೂ ಜೊನಾಥನ್ ಡೇವಿನೊ ಮಧ್ಯೆ ಯಾವುದೇ ಸಂಬಂಧವಿಲ್ಲ, ನಾವಿಬ್ಬರು ಬ್ರೇಕಪ್ ಮಾಡಿಕೊಂಡಿದ್ದೇವೆ. ಇದೀಗ ನಾನು ಒಂಟಿಯಾಗಿರುವುದನ್ನೇ ಇಷ್ಟಪಡುತ್ತಿದ್ದೇನೆ ಎಂದು ಹೇಳಿಕೊಂಡಿದ್ದಾರೆ. ಇತ್ತೀಚಿಗೆ ನಟಿ ಶೀಘ್ರದಲ್ಲೇ ಮದುವೆಯಾಗುತ್ತಾರೆ ಎಂದು ವದಂತಿಗಳು ಕೇಳಿಬರುತ್ತಿದ್ದವು. ಈ ಕುರಿತು ಮಾಧ್ಯಮವೊಂದು ನಡೆಸಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಬ್ರೇಕಪ್ ಬಗ್ಗೆ ಅಧಿಕೃತವಾಗಿ ತಿಳಿಸಿದ್ದಾರೆ. ನಾನು ಮದುವೆಯಾಗುತ್ತಿದ್ದೇನೆ ಎನ್ನುವುದು ಸುಳ್ಳು. ಸದ್ಯಕ್ಕೆ ನಾನು ಒಬ್ಬಂಟಿಯಾಗಿದ್ದೇನೆ ಹಾಗೂ ಇದನ್ನೇ ಇಷ್ಟಪಡುತ್ತಿದ್ದೇನೆ ಎಂದು ವದಂತಿಗಳನ್ನು ತಳ್ಳಿಹಾಕಿದ್ದಾರೆ. ಮೂರು ವರ್ಷಗಳ ಹಿಂದೆ ನಾನು ಹಾಗೂ ಜೊನಾಥನ್ ನಿಶ್ಚಿತಾರ್ಥ ಮಾಡಿಕೊಂಡಿದ್ದೆವು. ಆದರೆ ನಾವಿಬ್ಬರು ಬ್ರೇಕಪ್ ಮಾಡಿಕೊಂಡಿದ್ದೇವೆ. ಸದ್ಯ ನಮ್ಮಿಬ್ಬರ ಮಧ್ಯೆ ಯಾವುದೇ ಸಂಬಂಧವಿಲ್ಲ. ಆದರೆ ನಾನು ಈಗ ಒಬ್ಬಂಟಿಯಾಗಿರುವುದನ್ನು ತುಂಬಾ ಇಷ್ಟಪಡುತ್ತಿದ್ದೇನೆ. ನನ್ನ ಬಗ್ಗೆ ನಾನು ಹೆಚ್ಚಾಗಿ ತಿಳಿದುಕೊಳ್ಳುತ್ತಿದ್ದೇನೆ. ಜೊತೆಗೆ ನನ್ನ ಸ್ನೇಹಿತರೊಟ್ಟಿಗೆ ಹೆಚ್ಚಿನ ಸಮಯ ಕಳೆಯುತ್ತೇನೆ ಎಂದು ತಿಳಿಸಿದರು. ನಾನು ಹೇಗೆ ಜೀವನ ನಡೆಸಬೇಕು ಅಂದುಕೊಂಡಿದ್ದೆ, ಹಾಗೆಯೇ ಬದುಕುತ್ತಿದ್ದೇನೆ. ಕೆಲಸಕ್ಕೆ ಹೆಚ್ಚಿನ ಮಹತ್ವ ಕೊಡುತ್ತೇನೆ. ಹೊಸ ಕೆಲಸಗಳಿಂದ ಉತ್ಸುಕಳಾಗಿದ್ದೇನೆ. ಆದರೆ ಇದೆಲ್ಲದರಿಂದ ನನ್ನನ್ನು ದೂರ ಮಾಡಿದ್ದು ನನ್ನ ರಿಲೇಶನ್‌ಶಿಪ್ ಹಾಗೂ ಮದುವೆ. ಹೀಗಾಗಿ ಅದ್ಯಾವುದು ಕೂಡ ಸರಿ ಎನಿಸಲಿಲ್ಲ ಎಂದರು.

**ನಮ್ಮಿಬ್ಬರ ಮಧ್ಯೆ ಯಾವುದೇ ಸಂಬಂಧವಿಲ್ಲ**



# ಈ ವರ್ಷ ಟ್ರೋಫಿ ಗೆಲ್ಲೋಕೆ ಅಯ್ಯರ್ ಅರ್ಹರು

**ಅಯ್ಯರ್ ಸ್ಫೋಟಕ ಅರ್ಧಶತಕ**



ಮುಂಬೈ ವಿರುದ್ಧ ರೋಚಕ ಗೆಲುವು ಸಾಧಿಸಿರುವ ಪಂಜಾಬ್ ಕಿಂಗ್ಸ್ 11 ವರ್ಷಗಳ ಬಳಿಕ ಐಪಿಎಲ್ ಫೈನಲ್ ತಲುಪಿದೆ. ಕಳೆದ ಆವೃತ್ತಿಯಲ್ಲಿ ಕೆಕೆಆರ್ ಪರ ಟ್ರೋಫಿ ತಂದುಕೊಟ್ಟಿದ್ದ ಅಯ್ಯರ್ ಈ ಬಾರಿ ಪಂಜಾಬ್ ಕಿಂಗ್ಸ್ ತಂಡವನ್ನ ಫೈನಲ್‌ವರೆಗೆ ಕೊಂಡೊಯ್ದಿದ್ದಾರೆ. ಈ ಕುರಿತು ಪ್ರತಿಕ್ರಿಯಿಸಿರುವ ಖ್ಯಾತ ಚಲನಚಿತ್ರ ನಿರ್ಮಾಪಕ ಎಸ್‌ಎಸ್ ರಾಜಮೌಳಿ , ಟ್ರೋಫಿ ಗೆಲ್ಲಲು ಶ್ರೇಯಸ್ ಅಯ್ಯರ್ ಅರ್ಹರು ಅಂತ ಹೇಳಿದ್ದಾರೆ.

ಬುಮ್ರಾ ಮತ್ತು ಬೌಲ್ಟ್ ಅವರ ಯಾರ್ಕರ್‌ಗಳಮನ್ನ ಥರ್ಡ್ ಮ್ಯಾನ್ ಬೌಂಡರಿಗಟ್ಟುವ ಶ್ರೇಯಸ್ ಅವರ ಸಾಮರ್ಥ್ಯ ಅದ್ಭುತ. ಅಯ್ಯರ್ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನ ಫೈನಲ್‌ಗೆ ಕೊಂಡೊಯ್ದಿದ್ದರು ಆದ್ರೆ ಫ್ರಾಂಚೈಸಿ ಅವರನ್ನ ಕೈಬಿಟ್ಟಿತು. ಕೋಲ್ಕತ್ತಾ ತಂಡಕ್ಕೆ ಟ್ರೋಫಿ ತಂದುಕೊಟ್ಟರು,

ಆದ್ರೂ ಫ್ರಾಂಚೈಸಿ ಅವರನ್ನ ಕೈಬಿಟ್ಟಿತು. ಇದೀಗ 11 ವರ್ಷಗಳ ಬಳಿಕ ಪಂಜಾಬ್ ತಂಡವನ್ನ ಫೈನಲ್‌ಗೆ ಕರೆದೊಯ್ದಿದ್ದಾರೆ, ಈ ವರ್ಷದ ಟ್ರೋಫಿಗೆ ಅವರು ಅರ್ಹರು ಅಂತ ಬರೆದುಕೊಂಡಿದ್ದಾರೆ. ಮುಂದುವರಿದು ಮತ್ತೊಂದೆಡೆ, ವಿರಾಟ್ ಕೊಹ್ಲಿ ವರ್ಷದಿಂದ ವರ್ಷಕ್ಕೆ ಪ್ರದರ್ಶನ ನೀಡುತ್ತಿದ್ದಾರೆ. ಸಾವಿರಾರು ಕಲೆಹಾಕಿದ್ದಾರೆ. ಅವರೂ ಕೂಡ ಈ ಟ್ರೋಫಿಗೆ ಅರ್ಹರು. ಫಲಿತಾಂಶ ಏನೇ ಇರಲಿ. ಹೃದಯ ವಿದ್ರಾವಕವಾಗಲಿದೆ ಎಂದು ಭಾವುಕ ಸಂದೇಶ ಹಂಚಿಕೊಂಡಿದ್ದಾರೆ. ಮಳೆಯಿಂದ 2 ಗಂಟೆ 15 ನಿಮಿಷ ತಡವಾಗಿ ಆರಂಭಗೊಂಡ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಬೀಸಿದ ಮುಂಬೈ 6 ವಿಕೆಟ್ ನಷ್ಟಕ್ಕೆ 203 ರನ್ ಗಳಿಸಿತು. ಸವಾಲಿನ ಮೊತ್ತವನ್ನು ಬೆನ್ನಟ್ಟಿದ ಪಂಜಾಬ್ ನಾಯಕ ಶ್ರೇಯಸ್ ಅಯ್ಯರ್ ಅವರ ಸ್ಫೋಟಕ ಅರ್ಧಶತಕದ ನೆರವಿನಿಂದ ಇನ್ನೂ 6 ಎಸೆತ ಇರುವಂತೆಯೇ 5 ವಿಕೆಟ್ ನಷ್ಟಕ್ಕೆ 207 ರನ್ ಗಳಿಸಿ ಜಯ ಸಾಧಿಸಿತು. ಪ್ರಿಯಾಂಶ್ ಆರ್ಯ 20 ರನ್, ಪ್ರಭುಸಿಮ್ರಾನ್ ಸಿಂಗ್ 6 ರನ್, ಬುಮ್ರಾ ಮೊದಲ ಓವರ್‌ನಲ್ಲಿ 20 ರನ್ ಹೊಡೆದ ಜೋಶ್ ಇಂಗ್ಲಿಸ್ 38 ರನ್(21 ಎಸೆತ, 5 ಬೌಂಡರಿ, 2 ಸಿಕ್ಸ್) ಹೊಡೆದು ಔಟಾದಾಗ ಪಂಜಾಬ್ ಸ್ಕೋರ್ 3 ವಿಕೆಟ್ ನಷ್ಟಕ್ಕೆ 72 ರನ್ ಗಳಿಸಿತ್ತು.



# 11 ವರ್ಷಗಳ ಬಳಿಕ ಫೈನಲ್

ಪಂಜಾಬ್ ಐಪಿಎಲ್‌ನಲ್ಲಿ 2ನೇ ಬಾರಿ ಐಪಿಎಲ್‌ನಲ್ಲಿ ಫೈನಲ್ ಪ್ರವೇಶಿಸಿದೆ. 2014ರಲ್ಲಿ ಕೋಲ್ಕತ್ತಾ ವಿರುದ್ಧ ಫೈನಲ್‌ನಲ್ಲಿ ಸೋತು ಪಂಜಾಬ್ ರನ್ನರ್ ಅಪ್ ಆಗಿತ್ತು. ಕಮಲ್ ಹಾಸನ್‌ಗೆ ಕನ್ನಡದ ಪುಸ್ತಕ ನೀಡಿದ ರಂಜನಿ ರಾಘವನ್ ಕರ್ನಾಟಕದಲ್ಲಿ ಕಮಲ್ ಹಾಸನ್ ಬಗ್ಗೆ ತೀವ್ರ ಆಕ್ರೋಶ ವ್ಯಕ್ತವಾಗುತ್ತಿರುವ ಬೆನ್ನಲ್ಲೇ 'ಕನ್ನಡತಿ' ಧಾರವಾಹಿ ಖ್ಯಾತಿಯ ರಂಜನಿ ರಾಘವನ್, ಕಮಲ್ ಹಾಸನ್ ಅವರಿಗೆ ತಾವು ಬರೆದ ಕನ್ನಡದ ಪುಸ್ತಕವನ್ನು ನೀಡಿರುವ ಪೋಸ್ಟ್ ಅನ್ನು ಇನ್ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಇದೀಗ ರಂಜನಿ ರಾಘವನ್ ತಮ್ಮ ಖಾತೆಯಲ್ಲಿ ಕಮಲ್ ಸರ್‌ಗೆ 'ಕನ್ನಡ' ಪುಸ್ತಕ ಎಂದು ಬರೆದುಕೊಂಡು ಕಮಲ್ ಹಾಸನ್ ಅವರಿಗೆ ತಾವು ಬರೆದಿರುವ 'ಸ್ಟೈಲ್ ರೈಟ್' ಮತ್ತು 'ಕಥೆ ಡಬ್ಬಿ' ಎಂಬ ಪುಸ್ತಕಗಳನ್ನು ನೀಡಿದ ಫೋಟೋವನ್ನು ಪೋಸ್ಟ್ ಮಾಡಿದ್ದಾರೆ. ಆದರೆ ಅವರು ಈ ಪುಸ್ತಕವನ್ನು ಯಾವಾಗ ನೀಡಿದ್ದಾರೆ ಎಂಬುದರ ಬಗ್ಗೆ ಉಲ್ಲೇಖಿಸಿಲ್ಲ. ಕನ್ನಡ ಮೇಷ್ಟ್ರಮ್ಮ ಅವರ ಈ ಪೋಸ್ಟ್‌ಗೆ ಅಭಿಮಾನಿಗಳು ಸಂತಸ ವ್ಯಕ್ತಪಡಿಸಿದ್ದಾರೆ. ಅಲ್ಲದೇ ಜೈ ಕನ್ನಡಾಂಬೆ, ಕಮಲ್‌ಗೆ ಕನ್ನಡ ಪಾಠ ಕಲಿಸಿದ ಕನ್ನಡತಿ ಎಂಬೆಲ್ಲಾ ಕಾಮೆಂಟ್ ಸುರಿಮಳೆಗಳನ್ನೇ ಹರಿಸಿದ್ದಾರೆ. ರಂಜನಿ ರಾಘವನ್ ಅಭಿಮಾನಿಗಳ ಮನದಲ್ಲಿ ಕನ್ನಡದ ಮೇಷ್ಟ್ರಾಗಿ ಅಚ್ಚೆ ಹಾಕಿದ್ದರು.

# ಸಿನಿಮಾ ತಡೆಯುವ ಮೂರ್ಖತನ ಬೇಡ


ಧನುಷ್ ನಟನೆಯ 'ಕುಬೇರ' ಚಿತ್ರ ಜೂನ್ 20 ರಂದು ಬಿಡುಗಡೆಯಾಗಲಿದೆ. ನಾಗಾರ್ಜುನ ಮತ್ತು ರಶ್ಮಿಕಾ ಮಂದಣ್ಣ ಪ್ರಮುಖ ಪಾತ್ರಗಳಲ್ಲಿ ನಟಿಸಿರುವ ಈ ಪ್ಯಾನ್ ಇಂಡಿಯಾ ಚಿತ್ರವು ನೆಗೆಟಿವ್ ಪ್ರಚಾರವನ್ನು ಎದುರಿಸುತ್ತಿದೆ. ನಕಾರಾತ್ಮಕ ಪ್ರಚಾರವನ್ನು ಖಂಡಿಸಿರುವ ಧನುಷ್, ಚಿತ್ರದ ಯಶಸ್ಸಿನಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.



**ತಮಿಳು ನಟ ಧನುಷ್ ಎಚ್ಚರಿಸಿದ್ದು ಯಾರಿಗೆ**

ಕಾಲಿವುಡ್ ಸ್ಟಾರ್ ಹೀರೋ ಧನುಷ್ ಅವರ ಇತ್ತೀಚಿನ ಸಿನಿಮಾ 'ಕುಬೇರ' ರಿಲೀಸ್‌ಗೆ ರೆಡಿ ಇದೆ. ನಿರ್ದೇಶಕ ಶೇಖರ್ ಕಮ್ಮುಲ ನಿರ್ದೇಶನದ ಈ ಚಿತ್ರದಲ್ಲಿ ಟಾಲಿವುಡ್ ಹೀರೋ ಅಕ್ಕಿನೇನಿ ನಾಗಾರ್ಜುನ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರದಲ್ಲಿ ರಶ್ಮಿಕಾ ಮಂದಣ್ಣ ನಾಯಕಿಯಾಗಿ ನಟಿಸುತ್ತಿದ್ದಾರೆ. ಈ ಚಿತ್ರದ ಸುತ್ತ ಈಗಾಗಲೇ ಒಳ್ಳೆಯ ಹೈಪ್ ಇದೆ. ಭಾರಿ ನಿರೀಕ್ಷೆಗಳ ನಡುವೆ ತಯಾರಾಗಿರುವ ಈ ಚಿತ್ರ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಬಿಡುಗಡೆಯಾಗಲಿದೆ. ಈ ಸಿನಿಮಾ ಬಗ್ಗೆ ಕೆಲವರು ನೆಗೆಟಿವ್ ಸುದ್ದಿ ಹಬ್ಬಿಸುತ್ತಿದ್ದು ಈ ಬಗ್ಗೆ ಧನುಷ್ ಮಾತನಾಡಿದ್ದಾರೆ. 'ಕುಬೇರ' ಚಿತ್ರ ಜೂನ್ 20ರಂದು ವಿಶ್ವಾದ್ಯಂತ ಬಿಡುಗಡೆಯಾಗಲಿದೆ. ಇದರೊಂದಿಗೆ ಚಿತ್ರತಂಡ ಈಗ ಪ್ರಚಾರಗಳನ್ನು ಪ್ರಾರಂಭಿಸಿದೆ. ತಯಾರಕರು ಇತ್ತೀಚೆಗೆ ಜೂನ್ 1ರಂದು ಚೆನ್ನೈನಲ್ಲಿ 'ಕುಬೇರ' ಚಿತ್ರದ ಆಡಿಯೋ ಬಿಡುಗಡೆ ಕಾರ್ಯಕ್ರಮ ಆಯೋಜಿಸಿದ್ದರು. ಧನುಷ್, ನಾಗಾರ್ಜುನ, ರಶ್ಮಿಕಾ ಮಂದಣ್ಣ, ದೇವಿ ಶ್ರೀ ಪ್ರಸಾದ್ ಮತ್ತು ಅನಿರುದ್ಧ್ ಮುಂತಾದ ಸೆಲೆಬ್ರಿಟಿಗಳು ಸಮಾರಂಭದಲ್ಲಿ ಭಾಗವಹಿಸಿದ್ದರು.

# ಮಳೆಯಿಂದ ಐಪಿಎಲ್ ಫೈನಲ್ ರದ್ದಾದರೆ ಯಾವ ತಂಡಕ್ಕೆ ಕಿರೀಟ






ಐಪಿಎಲ್ 2025ರ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಮತ್ತು ಪಂಜಾಬ್ ತಂಡಗಳು ಮುಖಾಮುಖಿಯಾಗಲಿವೆ.

ಮಳೆಯ ಸಾಧ್ಯತೆಯಿಂದಾಗಿ ಪಂದ್ಯ ರದ್ದಾದರೆ, ಲೀಗ್ ಹಂತದಲ್ಲಿ ಅಗ್ರಸ್ಥಾನದಲ್ಲಿದ್ದ ಪಂಜಾಬ್ ಕಿಂಗ್ಸ್ ಚಾಂಪಿಯನ್ ಆಗಲಿದೆ. ಹೆಚ್ಚುವರಿ ಸಮಯ ಮತ್ತು ಮೀಸಲು ದಿನವನ್ನು ನಿಗದಿಪಡಿಸಲಾಗಿದೆ. ಆದರೆ ಮಳೆ ಮುಂದುವರಿದರೆ, ಪಾಯಿಂಟ್ ಪಟ್ಟಿಯ ಆಧಾರದ ಮೇಲೆ ವಿಜೇತರನ್ನು ಘೋಷಿಸಲಾಗುತ್ತದೆ. ಐಪಿಎಲ್ 2025 ರ ಫೈನಲ್ ಪಂದ್ಯವು ಜೂನ್ 3 ರಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಪಂಜಾಬ್ ಕಿಂಗ್ಸ್ ನಡುವೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿದೆ. ಈ ಎರಡೂ ತಂಡಗಳು ಮೊದಲ ಬಾರಿಗೆ ಚಾಂಪಿಯನ್ ಕಿರೀಟ ತೊಡುವ ಅವಕಾಶವಿರುವುದರಿಂದ ಈ ಬಾರಿಯ ಐಪಿಎಲ್ ಫೈನಲ್ ಸಾಕಷ್ಟು ರೋಚಕತೆ ಸೃಷ್ಟಿಸಿದೆ. ಆದಾಗ್ಯೂ, ಈ ಪಂದ್ಯಕ್ಕೆ ಮಳೆ ಅಡ್ಡಿ ಪಡಿಸುವ ಸಾಧ್ಯತೆಗಳಿವೆ. ಈಗ ಪ್ರಶ್ನೆ ಏನೆಂದರೆ, ಈ ಪಂದ್ಯ ಮಳೆಯಿಂದ ರದ್ದಾದರೆ ಐಪಿಎಲ್ 2025 ರ ವಿಜೇತರು ಯಾರು ಪಂಜಾಬ್ ಮತ್ತು ಬೆಂಗಳೂರು ಐಪಿಎಲ್ ಟ್ರೋಫಿ ಹಂಚಿಕೊಳ್ಳುತ್ತವೆಯೇ ಪಂದ್ಯಾವಳಿಯ ನಿಯಮಗಳೇನು ಎಂಬುದನ್ನು ನೋಡುವುದಾದರೆ..

**ನೆಟ್ ರನ್ ರೇಟ್ ಪಂಜಾಬ್ ಕಿಂಗ್ಸ್‌ಗಿಂತ ಕಡಿಮೆ**

ಮಳೆಯಿಂದಾಗಿ ಫೈನಲ್ ರದ್ದಾದರೆ ಜೂನ್ 3 ರಂದು ಅಹಮದಾಬಾದ್‌ನಲ್ಲಿ ನಡೆಯಲ್ಲಿರುವ ಫೈನಲ್ ಪಂದ್ಯಕ್ಕೆ ಹೆಚ್ಚುವರಿ ಸಮಯವನ್ನು ನಿಗದಿಪಡಿಸಲಾಗಿದೆ. ಅಂದರೆ ಈ ಫೈನಲ್ ಪಂದ್ಯಕ್ಕೆ ಹೆಚ್ಚುವರಿಯಾಗಿ 2 ಗಂಟೆಗಳನ್ನು ನಿಗದಿಪಡಿಸಲಾಗಿದೆ. ಆದರೆ ಈ ಹೆಚ್ಚುವರಿ ಸಮಯದಲ್ಲೂ ಪಂದ್ಯವನ್ನು ನಡೆಸಲಾಗದೆ ಮಳೆಯಿಂದಾಗಿ ರದ್ದಾದರೆ, ಜೂನ್ 4 ಅನ್ನು ಮೀಸಲು ದಿನವಾಗಿ ನಿಗದಿಪಡಿಸಲಾಗಿದೆ.

ಮೀಸಲು ದಿನದಂದು ಸಹ ಮಳೆ ಬಂದು ಈ ಪಂದ್ಯವನ್ನು ನಡೆಸಲಾಗದಿದ್ದರೆ, ಲೀಗ್ ಹಂತದಲ್ಲಿ ಪಾಯಿಂಟ್ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದ ತಂಡವನ್ನು ಚಾಂಪಿಯನ್ ಎಂದು ಘೋಷಿಸಲಾಗುತ್ತದೆ. ಇದರರ್ಥ ಮೀಸಲು ದಿನದಂದು ಪಂದ್ಯ ಪೂರ್ಣಗೊಳ್ಳದಿದ್ದರೆ, ಪಂಜಾಬ್ ಕಿಂಗ್ಸ್ ಐಪಿಎಲ್ 2025 ರ ಟ್ರೋಫಿಯನ್ನು ಎತ್ತಿ ಹಿಡಿಯಲಿದೆ. ಪಾಯಿಂಟ್ ಪಟ್ಟಿಯಲ್ಲಿ ಪಂಜಾಬ್‌ಗೆ ಅಗ್ರಸ್ಥಾನ ಪಂಜಾಬ್ ಕಿಂಗ್ಸ್ ಲೀಗ್ ಹಂತದಲ್ಲಿ ಅದ್ಭುತ ಪ್ರದರ್ಶನ ನೀಡಿ 14 ಪಂದ್ಯಗಳಲ್ಲಿ 9 ಪಂದ್ಯಗಳಲ್ಲಿ ಜಯಗಳಿಸಿತ್ತು.

ಪಂಜಾಬ್ ನಾಲ್ಕು ಪಂದ್ಯಗಳಲ್ಲಿ ಸೋತಿದ್ದರೆ, ಒಂದು ಪಂದ್ಯ ಫಲಿತಾಂಶ ಕಂಡಿರಲಿಲ್ಲ. ಹೀಗಾಗಿ ಪಂಜಾಬ್ ಕಿಂಗ್ಸ್ 19 ಅಂಕಗಳನ್ನು ಗಳಿಸಿ ಪಾಯಿಂಟ್ ಪಟ್ಟಿಯಲ್ಲಿ ಮೊದಲ ಸ್ಥಾನ ಗಳಿಸಿತು. ಆರ್‌ಸಿಬಿ ಬಗ್ಗೆ ಹೇಳುವುದಾದರೆ, ಆಡಿದ 14 ಪಂದ್ಯಗಳಲ್ಲಿ 19 ಅಂಕಗಳನ್ನು ಹೊಂದಿದೆಯಾದರೂ ತಂಡದ ನೆಟ್ ರನ್ ರೇಟ್ ಪಂಜಾಬ್ ಕಿಂಗ್ಸ್‌ಗಿಂತ ಕಡಿಮೆ ಇದೆ. ಸದ್ಯಕ್ಕೆ, ಆರ್‌ಸಿಬಿ ಅಭಿಮಾನಿಗಳು ಈ ಪಂದ್ಯದಲ್ಲಿ ಮಳೆ ಬರಬಾರದು ಮತ್ತು ಪಂದ್ಯ ಕೊನೆಯವರೆಗೂ ನಡೆಯಲಿ ಎಂದು ಪ್ರಾರ್ಥಿಸುತ್ತಿದ್ದಾರೆ. ಆದಾಗ್ಯೂ, ವರದಿಯ ಪ್ರಕಾರ, ಜೂನ್ 3 ರಂದು ಸಂಜೆ ಹಗುರ ಮಳೆಯಾಗುವ ಸಾಧ್ಯತೆಯಿದೆ.

**ಅಹಮದಾಬಾದ್‌ನಲ್ಲಿ ಮಳೆ ಬಂದರೆ**

ಅಹಮದಾಬಾದ್‌ನಲ್ಲಿ ನಡೆಯುವ ಫೈನಲ್ ಪಂದ್ಯದ ಸಮಯದಲ್ಲಿ ಮಳೆ ಬಂದರೂ ಹೆಚ್ಚಿನ ವ್ಯತ್ಯಾಸವಾಗುವುದಿಲ್ಲ. ಏಕೆಂದರೆ ಈ ಮೈದಾನದ ಸೌಲಭ್ಯಗಳು ತುಂಬಾ ಚೆನ್ನಾಗಿವೆ. ಇಲ್ಲಿನ ಒಳಚರಂಡಿ ವ್ಯವಸ್ಥೆ ಅದ್ಭುತವಾಗಿದೆ.

ಮಳೆ ನಿಂತ 20 ನಿಮಿಷಗಳ ನಂತರ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಪಂದ್ಯ ಸುಲಭವಾಗಿ ಆರಂಭವಾಗಬಹುದು. ಮುಂಬೈ ಹಾಗೂ ಪಂಜಾಬ್ ನಡುವಿನ ಕ್ವಾಲಿಫೈಯರ್ 2 ಪಂದ್ಯಕ್ಕೂ ಮಳೆ ಅಡ್ಡಿಪಡಿಸಿತು. ಆಟ ಸಾಕಷ್ಟು ತಡವಾಗಿ ಆರಂಭವಾಯಿತು. ಧಾರಕಾರವಾಗಿ ಮಳೆ ಸುರಿದರೂ ಕೆಲವೇ ನಿಮಿಷಗಳಲ್ಲಿ ಆಟವನ್ನು ಆರಂಭಿಸಲಾಗಿತ್ತು. ಹೀಗಾಗಿ ಫೈನಲ್ ಪಂದ್ಯಕ್ಕೆ ಮಳೆ ಅಡ್ಡಿಪಡಿಸಿದರೂ ಅಭಿಮಾನಿಗಳು ಹೆಚ್ಚು ಆತಂಕಪಡುವ ಅವಶ್ಯಕತೆ ಇಲ್ಲ.

# ಈ ಸಲ ಕಪ್ ಇವರದ್ದೇ ಎಂದ ಶೇನ್ ವಾಟ್ಸನ್




ಇಂಡಿಯನ್ ಪ್ರೀಮಿಯರ್ ಲೀಗ್‌ನ (ಐಪಿಎಲ್ 2025) ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿದೆ. ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಗೆಲ್ಲುವ ತಂಡ ಚೊಚ್ಚಲ ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಲಿದೆ. ಇಂಡಿಯನ್ ಪ್ರೀಮಿಯರ್ ಲೀಗ್ ಫೈನಲ್ ಪಂದ್ಯಕ್ಕೆ ವೇದಿಕೆ ಸಿದ್ಧವಾಗಿದೆ. ಜೂ.3 ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿರುವ ಫೈನಲ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಈ ನಿರ್ಣಾಯಕ ಪಂದ್ಯದಲ್ಲಿ ಗೆಲ್ಲೋರು ಯಾರು ಎಂಬುದೇ ಈಗ ಕುತೂಹಲ. ಈ ಕುತೂಹಲಕ್ಕೆ ಕಿಚ್ಚು ಹಚ್ಚುವಂತಹ ಉತ್ತರ ನೀಡಿದ್ದಾರೆ ಆಸ್ಟ್ರೇಲಿಯಾ ತಂಡದ ಮಾಜಿ ಆಟಗಾರ ಶೇನ್ ವಾಟ್ಸನ್. ವಾಟ್ಸನ್ ಪ್ರಕಾರ, ಈ ಬಾರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಚಾಂಪಿಯನ್ ಪಟ್ಟ ಅಲಂಕರಿಸುವುದು ಖಚಿತ. ಈ ಬಾರಿಯ ಟೂರ್ನಿಯಲ್ಲಿ ಆರ್‌ಸಿಬಿ ತಂಡ ಭರ್ಜರಿ ಪ್ರದರ್ಶನ ನೀಡಿದೆ. ಇದಾಗ್ಯೂ ಕೊನೆಯ ಕೆಲ ಪಂದ್ಯಗಳಲ್ಲಿ ರಾಯಲ್ ಪಡೆ ತಪ್ಪುಗಳನ್ನು ಎಸೆಗಿತ್ತು. ಆದರೆ ಪ್ಲೇಆಫ್ ಹಂತದಲ್ಲಿ ಭರ್ಜರಿ ಕಂಬ್ಯಾಕ್ ಮಾಡಿದೆ. ಅದರಲ್ಲೂ ಜೋಶ್ ಹೇಝಲ್‌ವುಡ್ ಎಂಟ್ರಿಯಿಂದ ಆರ್‌ಸಿಬಿ ಬಲ ಹೆಚ್ಚಿದೆ. ಹೀಗಾಗಿ ಈ ಬಾರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಟ್ರೋಫಿ ಎತ್ತಿ ಹಿಡಿಯುವುದನ್ನು ಎದುರು ನೋಡಬಹುದು. ಅಲ್ಲದೆ ಫೈನಲ್ ಪಂದ್ಯದಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ವಿರಾಟ್ ಕೊಹ್ಲಿ ಪಂದ್ಯ ಶ್ರೇಷ್ಠ ಪ್ರಶಸ್ತಿಯನ್ನು ಪಡೆಯಲಿದ್ದಾರೆ ಎಂದು ಶೇನ್ ವಾಟ್ಸನ್ ಭವಿಷ್ಯ ನುಡಿದಿದ್ದಾರೆ. ಅದರಂತೆ ಜೂನ್ 3 ರಂದು ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆಯಲಿರುವ ಅಂತಿಮ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಭರ್ಜರಿ ಪ್ರದರ್ಶನ ನೀಡುವ ಮೂಲಕ ಚಾಲೆಂಜರ್ಸ್ ಬೆಂಗಳೂರು ತಂಡ ಚೊಚ್ಚಲ ಬಾರಿ ಟ್ರೋಫಿ ಎತ್ತಿ ಹಿಡಿಯಲಿದೆಯಾ ಕಾದು ನೋಡಬೇಕಿದೆ.

**ಪ್ಲೇಆಫ್ ಹಂತದಲ್ಲಿ ಭರ್ಜರಿ ಕಂಬ್ಯಾಕ್**

# ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಕ್ಲಾಸೆನ್

ದಕ್ಷಿಣ ಆಫ್ರಿಕಾದ ಹೆನ್ರಿಕ್ ಕ್ಲಾಸೆನ್ ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಘೋಷಿಸಿದ್ದಾರೆ. ಕ್ಲಾಸೆನ್ ಅವರ ನಿರ್ಧಾರ ಅನೇಕರನ್ನು ಆಶ್ಚರ್ಯಗೊಳಿಸಿದೆ. 33 ನೇ ವಯಸ್ಸಿನಲ್ಲಿ ಈ ನಿರ್ಧಾರ ತೆಗೆದುಕೊಂಡಿದ್ದಾರೆ.

ಐಪಿಎಲ್‌ನಲ್ಲಿ ಉತ್ತಮ ಬೇಡಿಕೆಯಿದ್ದರೂ, ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳಿದ್ದಾರೆ. ಇದು ಕ್ರಿಕೆಟ್ ಪ್ರೇಮಿಗಳಿಗೆ ದೊಡ್ಡ ಆಘಾತವಾಗಿದೆ. ಕ್ರಿಕೆಟ್ ಲೋಕಕ್ಕೆ ಒಂದೇ ದಿನ ಎರಡೆರಡು ಆಘಾತ ಎದುರಾಗಿದೆ. ಆಸ್ಟ್ರೇಲಿಯಾದ ಸ್ಫೋಟಕ ಆಲ್‌ರೌಂಡರ್ ಗ್ಲೆನ್ ಮ್ಯಾಕ್ಸ್‌ವೆಲ್ ಏಕದಿನ ಕ್ರಿಕೆಟ್‌ಗೆ ಇದ್ದಕ್ಕಿದ್ದಂತೆ ನಿವೃತ್ತಿ ಘೋಷಿಸಿ ಎಲ್ಲಾರಿಗೂ ಶಾಕ್ ನೀಡಿದ್ದರು. ಇದೀಗ ದಕ್ಷಿಣ ಆಫ್ರಿಕಾದ ಸ್ಟಾರ್ ಆಟಗಾರ ಹೆನ್ರಿಕ್ ಕ್ಲಾಸೆನ್ ಅಂತರರಾಷ್ಟ್ರೀಯ ಕ್ರಿಕೆಟ್‌ನಿಂದ ನಿವೃತ್ತಿ ಹೊಂದಲು ನಿರ್ಧರಿಸಿದ್ದಾರೆ. ತಮ್ಮ ಹೊಡಿಬಡಿ ಆಟದಿಂದಲೇ ವಿಶ್ವ ಕ್ರಿಕೆಟ್‌ನಲ್ಲಿ ಸಾಕಷ್ಟು ಹೆಸರು ಮಾಡಿದ್ದ ಕ್ಲಾಸೆನ್ ಕೇವಲ 33ನೇ ವಯಸ್ಸಿಗೆ ಈ ನಿರ್ಧಾರ ತೆಗೆದುಕೊಂಡಿರುವುದು ಎಲ್ಲಾರಲ್ಲೂ ಅಚ್ಚರಿ ಮೂಡಿಸಿದೆ. ಐಪಿಎಲ್‌ನಲ್ಲಿ ಸನ್ ರೈಸರ್ಸ್ ಹೈದರಾಬಾದ್ ಪರ ಆಡುತ್ತಿರುವ ಕ್ಲಾಸೆನ್ ಅವರನ್ನು ದಾಖಲೆಯ ಮೊತ್ತಕ್ಕೆ ತಂಡದಲ್ಲಿ ಉಳಿಸಿಕೊಳ್ಳಲಾಗಿತ್ತು. ಈ ಸೀಸನ್ ಅವರಿಗೆ ನಿರೀಕ್ಷಿಸಿದಷ್ಟು ಯಶಸ್ಸು ತಂದುಕೊಡದಿದ್ದರೂ ಕ್ಲಾಸೆನ್‌ಗೆ ಟಿ20 ಕ್ರಿಕೆಟ್‌ನಲ್ಲಿ ಭಾರಿ ಬೇಡಿಕೆ ಇದೆ.

ಹೀಗಾಗಿಯೇ ಅವರು ವಿಶ್ವದ ಇತರ ಟಿ20 ಲೀಗ್‌ಗಳಲ್ಲೂ ಆಡುತ್ತಿದ್ದಾರೆ. ಹೀಗಿರುವಾಗ ಅವರು ಇದ್ದಕ್ಕಿದ್ದಂತೆ ಅಂತರರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿರುವುದು ಎಲ್ಲಾರಿಗೂ ಅಚ್ಚರಿಯನ್ನುಂಟುಮಾಡಿದೆ. 2018 ರಲ್ಲಿ ದಕ್ಷಿಣ ಆಫ್ರಿಕಾ ಪರ ಮೊದಲ ಬಾರಿಗೆ ಕಣಕ್ಕಿಳಿದಿದ್ದ ಕ್ಲಾಸೆನ್ ಒಂದು ವರ್ಷದ ನಂತರ ಅಂದರೆ 2019 ರಲ್ಲಿ ಟೆಸ್ಟ್ ತಂಡದಲ್ಲೂ ಸ್ಥಾನ ಪಡೆದರು. ಆದಾಗ್ಯೂ, ಅವರು ತಮ್ಮ ಅಲ್ಪಾವಧಿಯ ವೃತ್ತಿಜೀವನದಲ್ಲಿ ಅನೇಕ ಸಾಧನೆಗಳನ್ನು ಸಾಧಿಸಿದ್ದಾರೆ. ಆದರೆ ಈಗ ಅವರು ಎಲ್ಲಾ ಸ್ವರೂಪಗಳಿಂದ ನಿವೃತ್ತಿ ಘೋಷಿಸಿದ್ದಾರೆ.

ಕ್ಲಾಸೆನ್ ಆಫ್ರಿಕಾ ಪರ 4 ಟೆಸ್ಟ್ ಪಂದ್ಯಗಳಲ್ಲಿ 13 ಸರಾಸರಿಯಲ್ಲಿ 104 ರನ್ ಗಳಿಸಿದ್ದಾರೆ. ಇದಲ್ಲದೆ, ಅವರು 60 ಏಕದಿನ ಪಂದ್ಯಗಳಲ್ಲಿ 43.69 ಸರಾಸರಿಯಲ್ಲಿ 2141 ರನ್ ಗಳಿಸಿದ್ದಾರೆ. ಇದರಲ್ಲಿ 4 ಶತಕಗಳು ಮತ್ತು 11 ಅರ್ಧಶತಕಗಳು ಸೇರಿವೆ. ಹಾಗೆಯೇ 58 ಟಿ20 ಪಂದ್ಯಗಳಲ್ಲಿ 23.25 ಸರಾಸರಿಯಲ್ಲಿ 5 ಅರ್ಧಶತಕಗಳ ಸಹಿತ 1000 ರನ್ ಬಾರಿಸಿದ್ದಾರೆ.




# ದಿಢೀರ್ ನಿವೃತ್ತಿ ಘೋಷಿಸಿದ ಮ್ಯಾಕ್ಸ್‌ವೆಲ್

ಆಸ್ಟ್ರೇಲಿಯಾ ಪರ ಈವರೆಗೆ 149 ಏಕದಿನ ಪಂದ್ಯಗಳನ್ನಾಡಿರುವ ಗ್ಲೆನ್ ಮ್ಯಾಕ್ಸ್‌ವೆಲ್ 136 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದಾರೆ. ಈ ವೇಳೆ 3149 ಎಸೆತಗಳನ್ನು ಎದುರಿಸಿ ಒಟ್ಟು 3990 ರನ್ ಕಲೆಹಾಕಿದ್ದಾರೆ. ಹಾಗೆಯೇ 119 ಇನಿಂಗ್ಸ್‌ಗಳಲ್ಲಿ ಬೌಲಿಂಗ್ ಮಾಡಿರುವ ಅವರು ಒಟ್ಟು 77 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಆಸ್ಟ್ರೇಲಿಯಾ ತಂಡದ ಸ್ಟಾರ್ ಆಟಗಾರ ಗ್ಲೆನ್ ಮ್ಯಾಕ್ಸ್‌ವೆಲ್ ಏಕದಿನ ಕ್ರಿಕೆಟ್‌ನಿಂದ ದಿಢೀರ್ ನಿವೃತ್ತಿ ಘೋಷಿಸಿದ್ದಾರೆ.

2027ರ ಏಕದಿನ ವಿಶ್ವಕಪ್ ತಂಡದಲ್ಲಿ ಸ್ಥಾನ ಸಿಗುವುದಿಲ್ಲ ಎಂಬುದು ಖಚಿತವಾಗುತ್ತಿದ್ದಂತೆ ಮ್ಯಾಕ್ಸ್‌ವೆಲ್ ಈ ನಿರ್ಧಾರ ತೆಗೆದುಕೊಂಡಿದ್ದಾರೆ.

ಇದಾಗ್ಯೂ ಅವರು ಟಿ20 ಕ್ರಿಕೆಟ್‌ನಲ್ಲಿ ಮುಂದು ವರೆಯುವುದಾಗಿ ತಿಳಿಸಿದ್ದಾರೆ. ಆಸ್ಟ್ರೇಲಿಯಾ ತಂಡದ ಆಯ್ಕೆ ಸಮಿತಿ ಮುಖ್ಯ ಜಾರ್ಜ್ ಬೈಲಿ ಜೊತೆ ಮಾತನಾಡಿದ್ದೇನೆ.

ಈ ವೇಳೆ 2027ರ ಏಕದಿನ ವಿಶ್ವಕಪ್ ಬಗ್ಗೆ ಚರ್ಚಿಸಿದ್ದೆವು. ಅವರು 2027ರವರೆಗೆ ನನ್ನನ್ನು ತಂಡದಲ್ಲಿ ಮುಂದುವರೆಸುತ್ತಾರೆ ಎಂದು ಭಾವಿಸುತ್ತಿಲ್ಲ. ಹೀಗಾಗಿ ನನ್ನ ಸ್ಥಾನಕ್ಕೆ ಬೇರೆಯವನ್ನು ಆಯ್ಕೆ ಮಾಡಲು ಇದು ಸೂಕ್ತ ಸಮಯ. ಇದೇ ಕಾರಣದಿಂದ ನಿವೃತ್ತಿ ಘೋಷಿಸಿರುವುದಾಗಿ ಮ್ಯಾಕ್ಸ್‌ವೆಲ್ ಹೇಳಿದ್ದಾರೆ.



ಆಸ್ಟ್ರೇಲಿಯಾ ಪರ ಈವರೆಗೆ 149 ಏಕದಿನ ಪಂದ್ಯಗಳನ್ನಾಡಿರುವ ಗ್ಲೆನ್ ಮ್ಯಾಕ್ಸ್‌ವೆಲ್ 136 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದಾರೆ. ಈ ವೇಳೆ 3149 ಎಸೆತಗಳನ್ನು ಎದುರಿಸಿರುವ ಅವರು ಒಟ್ಟು 3990 ರನ್ ಕಲೆಹಾಕಿದ್ದಾರೆ. ಇದರ ನಡುವೆ ಒಂದು ದ್ವಿಶತಕ ಹಾಗೂ 4 ಶತಕ ಮತ್ತು 23 ಅರ್ಧಶತಕಗಳನ್ನು ಬಾರಿಸಿದ್ದಾರೆ.

ಹಾಗೆಯೇ ಬೌಲಿಂಗ್ ಮೂಲಕ ಕೂಡ ಕೊಡುಗೆ ನೀಡಿರುವ ಗ್ಲೆನ್ ಮ್ಯಾಕ್ಸ್‌ವೆಲ್ 119 ಇನಿಂಗ್ಸ್‌ಗಳಲ್ಲಿ ಚೆಂಡೆಸೆದಿದ್ದು, ಈ ವೇಳೆ 4002 ಎಸೆತಗಳಲ್ಲಿ 3644 ರನ್ ನೀಡುವ ಮೂಲಕ ಒಟ್ಟು 77 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಮ್ಯಾಕ್ಸ್‌ವೆಲ್ ಆಸ್ಟ್ರೇಲಿಯಾ ಪರ ಏಕದಿನ ಕ್ರಿಕೆಟ್‌ನಲ್ಲಿ 3 ಸಾವಿರ ರನ್ ಹಾಗೂ 50 ಕ್ಕಿಂತ ಹೆಚ್ಚು ವಿಕೆಟ್ ಪಡೆದ ಆಲ್‌ರೌಂಡರ್‌ಗಳಲ್ಲಿ ಗುರುತಿಸಿಕೊಂಡಿದ್ದಾರೆ. ಸದ್ಯ ಏಕದಿನ ಕ್ರಿಕೆಟ್‌ಗೆ ವಿದಾಯ ಹೇಳಿರುವ ಗ್ಲೆನ್ ಮ್ಯಾಕ್ಸ್‌ವೆಲ್ 2026ರ ಟಿ20 ವಿಶ್ವಕಪ್ ಆಡುವ ವಿಶ್ವಾಸದಲ್ಲಿದ್ದಾರೆ. ಈ ವಿಶ್ವಕಪ್‌ನೊಂದಿಗೆ 36 ವರ್ಷದ ಮ್ಯಾಕ್ಸಿ ಚುಟುಕು ಕ್ರಿಕೆಟ್‌ಗೆ ಗುಡ್ ಬೈ ಹೇಳುವ ವಿಶ್ವಾಸದಲ್ಲಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966